ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 95 ಸಂಚಿಕೆ- 95 | PAGE-8 ಪುಟ-8 | ಬುಧುವಾರ 21.05.2025 | RS.2/- ಬೆಲೆ 2/-

## ನುಡಿದಂತೆ ನಡೆದಿದ್ದೇವೆ



ಮಲ್ಲಮ್ಮನುಡಿ ವಾರ್ತೆ ಹೊಸಪೇಟೆ : ಮೇ 20 :ಚುನಾವಣಾ ವೇಳೆ ಜನರಿಗೆನೀಡಿದ್ದ ಎಲ್ಲಾ ಭರವಸೆಗಳನ್ನು ಈಡೇರಿಸಿ ನಮ್ಮ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದಿದೆ. ಪಂಚ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೆ ತರಲಾಗಿದೆ. ಇದರ ಜೊತೆ ಇಂದು ಆರನೇ ಗ್ಯಾರಂಟಿಯನ್ನು ಜಾರಿಗೊಳಿಸುತ್ತಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಇಂದು ಸರ್ಕಾರವು ಯಶಸ್ವಿಯಾಗಿ ಎರಡು ವರ್ಷಗಳನ್ನು ಪೂರೈಸಿರುವ ಹಿನ್ನೆಲೆಯಲ್ಲಿ ಹೊಸಪೇಟೆಯ ಸರ್ಕಾರಿ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾದ "ಸಾಧನಾ ಸಮಾವೇಶ" ಸಮಾರಂಭದಲ್ಲಿ ಉಕ್ಕಿನ ಮಹಿಳೆ ಇಂದಿರಾಗಾಂಧಿಯವರ ಪ್ರತಿಮೆಯನ್ನು ಲೋಕಾರ್ಪಣೆಗೊಳಿಸಿ ನಂತರ ಮಾತನಾಡಿದ ಮುಖ್ಯಮಂತ್ರಿಗಳು ಚುನಾವಣೆಯ ಸಮಯದಲ್ಲಿ ಪ್ರಣಾಳಿಕೆಯಲ್ಲಿ ನಾವು ಕೊಟ್ಟ ಭರವಸೆಗಳಲ್ಲಿ 142 ಭರವಸೆಗಳನ್ನು ಎರಡು ವರ್ಷದಲ್ಲಿ ಪೂರೈಸಿದ್ದೇವೆ, ಉಳಿದವುಗಳನ್ನು ಮುಂದಿನ ಮೂರು ವರ್ಷದಲ್ಲಿ ಈಡೇರಿಸುತ್ತೇವೆ. ಈಗ ಐದು ಗ್ಯಾರಂಟಿಗಳ ಜೊತೆ ಆರನೇ ಗ್ಯಾರಂಟಿಯಾಗಿ ಭೂ ಮಾಲಿಕತ್ವ ನೀಡುವ ಗ್ಯಾರಂಟಿಯನ್ನು ಜಾರಿಗೆ ತರಲಾಗಿದೆ. ಅದರ ನಿದರ್ಶನವಾಗಿ ಇಂದು 1,11,111 ಕುಟುಂಬಗಳಿಗೆ ಒಂದೇ ದಿನ ಹಕ್ಕುಪತ್ರ ವಿತರಿಸಲಾಗಿದೆ. ಮುಂದಿನ ಮೂರು ವರ್ಷಗಳಲ್ಲಿ ಉಳಿದ ಭರವಸೆ ಈಡೇರಿಸುತ್ತೇವೆ ಎಂದು ತಿಳಿಸಿದರು.

ಮೊದಲ ಬಾರಿ ಮುಖ್ಯಮಂತ್ರಿಯಾಗಿ ನಾವು ನೀಡಿದ್ದ 165 ಭರವಸೆಗಳಲ್ಲಿ 158 ಭರವಸೆಗಳನ್ನು ಈಡೇರಿಸಿದ್ದಲ್ಲದೆ, ಪ್ರಣಾಳಿಕೆಯಲ್ಲಿ ಘೋಷಿಸದ ಹೊಸದಾದ 30 ಕಾರ್ಯಕ್ರಮಗಳನ್ನು ರೂಪಿಸಿ ಜಾರಿಗೊಳಿಸಿದ್ದೇವೆ ಎಂದ ಸಿ.ಎಂ ಸಿದ್ದರಾಮಯ್ಯ ಅವರು ಬಿಜೆಪಿ ಏಕೆ ತಾನು ಕೊಟ್ಟಿದ್ದ ಭರವಸೆಗಳನ್ನು ಈಡೇರಿಸದೆ, ಜನರ ಎದುರು ಸುಳ್ಳು ಹೇಳಿಕೊಂಡು ತಿರುಗುತ್ತಿದೆ ಎಂದು ಪ್ರಶ್ನಿಸಿದರು.

ನಮ್ಮ ರಾಜ್ಯ ಸರ್ವ ಜನಾಂಗದ ಶಾಂತಿಯ ತೋಟ. ಸರ್ವರನ್ನೂ ಸಮಾನವಾಗಿ ಗೌರವಿಸುವ ರಾಜ್ಯ.

(2ನೇ ಪುಟ ನೋಡಿ)

## 500 ನೂತನ ಕಂದಾಯ ಗ್ರಾಮ ಘೋಷಣೆ ನಮ್ಮ ಸಂಕಲ್ಪ : ರಾಹುಲ್ ಗಾಂಧಿ



ಮಲ್ಲಮ್ಮ ನುಡಿ ವಾರ್ತೆ ಹೊಸಪೇಟೆ:ಮೇ.20:ಕರ್ನಾಟಕ ಸರ್ಕಾರ ಯಶಸ್ವಿಯಾಗಿ ಎರಡು ವರ್ಷವನ್ನು ಪೂರೈಸಿದೆ. ನಮ್ಮ ಕಾಂಗ್ರೆಸ್ ಸರ್ಕಾರ ನಿಮ್ಮ ಹಣವನ್ನು ಮರಳಿ ನಿಮಗೆ ನೀಡುತ್ತಿದೆ. ನೀವು ಕಟ್ಟುವ ತೆರಿಗೆಯ ಹಣ ಮರಳಿ ನಿಮಗೆ ಸೇರಬೇಕು ಎಂಬುದು ನಮ್ಮ ಉದ್ದೇಶವಾಗಿತ್ತು. ಅದು ಯಶಸ್ವಿಯಾಗಿ ಈಡೇರಿದೆ.ಐದು ಗ್ಯಾರಂಟಿಗಳನ್ನು ಯಶಸ್ವಿಯಾಗಿ ಅನುಷಾ??ನಕ್ಕೆ ತಂದ ನಂತರ ಈ ವಿಚಾರವಾಗಿ ಚರ್ಚೆ ಮಾಡುವ ವೇಳೆ ಕರ್ನಾಟಕದ ಜನರ ಭೂ ಮಾಲಿಕತ್ವದ ಬಗ್ಗೆ ಮಾತನಾಡಿದೆ. ಇಲ್ಲಿ ಹೆಚ್ಚು ಜನ ಭೂಮಿ ಹೊಂದಿದ್ದಾರೆ. ಆದರೆ ಮಾಲಿಕತ್ವ ಹೊಂದಿಲ್ಲ ಎಂಬುದು ನನಗೆ ಮನವರಿಕೆಯಾಗಿತ್ತು. ಪರಿಶಿಷ್ಟ, ಬುಡಕಟ್ಟು ಜನಾಂಗದವರು ವಾಸಿಸುವ ಅನೇಕ ಕಂದಾಯ ಗ್ರಾಮಗಳು ಗ್ರಾಮಗಳೇ ಎಂದು ಘೋಷಣೆಯಾಗಿರಲಿಲ್ಲ. ಇಲ್ಲಿನ ವಾಸಿಗಳಿಗೆ ಸರ್ಕಾರದ ಅನೇಕ ಸೌಲಭ್ಯಗಳು ಸೇರಿದಂತೆ ಅನೇಕ ಅನುಕೂಲಗಳು ನಿಮಗೆ ಈಗ ದೊರೆಯುತ್ತವೆ ಎಂದು ಲೋಕಸಭೆಯ ವಿರೋಧಪಕ್ಷದ ನಾಯಕ ರಾಹುಲ್ ಗಾಂಧಿ ತಿಳಿಸಿದರು.

ಈ ವಿಚಾರಗಳನ್ನು ಮಲ್ಲಿಕಾರ್ಜುನ ಖರ್ಗೆ, ಸಿದ್ದರಾಮಯ್ಯ, ಡಿ.ಕೆ ಶಿವಕುಮಾರ್

(2ನೇ ಪುಟ ನೋಡಿ)

## ಮೋದಿ ಎಚ್ಚರಿಕೆ ನೀಡಿದ್ದರೆ, 26 ಜೀವ ಉಳಿಯುತ್ತಿದ್ದವು: ಖರ್ಗೆ



ಮಲ್ಲಮ್ಮ ನುಡಿ ವಾರ್ತೆ ಹೊಸಪೇಟೆ:ಮೇ.20: ಗುಪ್ತಚರ ಮಾಹಿತಿಯ ಆಧಾರದ ಮೇಲೆ ತಮ್ಮ ಕಾಶ್ಮೀರ ಪ್ರವಾಸವನ್ನು ರದ್ದುಗೊಳಿಸಿದ ಪ್ರಧಾನಿ ನರೇಂದ್ರ ಮೋದಿ, ಆ ಬಗ್ಗೆ ಜನರಿಗೂ ಎಚ್ಚರಿಕೆ ನೀಡಿದ್ದರೆ, 26 ಪ್ರವಾಸಿಗರ ಜೀವ ಉಳಿಸಬಹುದಿತ್ತು ಎಂದು ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮತ್ತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮಂಗಳವಾರ ಹೇಳಿದ್ದಾರೆ.

ಕಳೆದ ಏಪ್ರಿಲ್ 22ರಂದು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ 26 ಪ್ರವಾಸಿಗರು ಸಾವನ್ನಪ್ಪಿದ್ದಾರೆ.

ಕಾಂಗ್ರೆಸ್ ಸರ್ಕಾರ ಎರಡು ವರ್ಷ ಪೂರೈಸಿದ ಹಿನ್ನಲೆಯಲ್ಲಿ ಇಂದು ವಿಜಯನಗರ ಜಿಲ್ಲೆಯ ಹೊಸಪೇಟೆಯಲ್ಲಿ ಆಯೋಜಿಸಲಾಗಿದ್ದ ಸಾಧನಾ ಸಮಾವೇಶದಲ್ಲಿ ಮಾತನಾಡಿದ ಖರ್ಗೆ, ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳದಿರುವುದು ಮತ್ತು ಸರ್ವಪಕ್ಷ ಸಭೆಗೆ ಗೈರು ಆದ ಪ್ರಧಾನಿ ಮೋದಿ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

"ಪಹಲ್ಗಾಮ್ ಉಗ್ರರ ದಾಳಿಗೆ ಭದ್ರತಾ ವೈಫಲ್ಯವೇ ಕಾರಣ ಎಂದ ಖರ್ಗೆ, ಪ್ರವಾಸಿಗರಿಗೆ ಪೊಲೀಸ್ ಅಥವಾ ಗಡಿ ಭದ್ರತಾ ಪಡೆ ಅಥವಾ ಮಿಲಿಟರಿಯಿಂದ ಯಾವುದೇ ಭದ್ರತೆ ನೀಡಲಾಗಿಲ್ಲ. ಇಲ್ಲಿಯವರೆಗೆ ಮೋದಿ(ಭದ್ರತಾ ವೈಫಲ್ಯದ ಬಗ್ಗೆ) ಒಂದು ಮಾತನ್ನೂ ಹೇಳಿಲ್ಲ ಅಥವಾ ಉತ್ತರ ನೀಡಿಲ್ಲ. ಏಪ್ರಿಲ್ 17 ರಂದು ಮೋದಿಯವರ ಕಾಶ್ಮೀರ ಭೇಟಿ ನಿಗದಿಯಾಗಿತ್ತು. ಆದರೆ ಗುಪ್ತಚರ ಅಧಿಕಾರಿಗಳು ಅದಕ್ಕೆ ಅವಕಾಶ ನೀಡಲಿಲ್ಲ. ಹೀಗಾಗಿ ಅವರ ಪ್ರವಾಸವನ್ನು ರದ್ದುಪಡಿಸಲಾಯಿತು. ನೀವು ನಿಮ್ಮ ಕಾಶ್ಮೀರ ಕಾರ್ಯಕ್ರಮವನ್ನು ರದ್ದುಗೊಳಿಸಿದ್ದೀರಿ. ಆದರೆ ಪ್ರವಾಸಿಗರಿಗೆ ಏಕೆ ಎಚ್ಚರಿಕೆ ನೀಡಲಿಲ್ಲ? ಅವರಿಗೆ ಎಚ್ಚರಿಕೆ ನೀಡಿದ್ದರೆ 26 ಜೀವಗಳನ್ನು ಉಳಿಸಬಹುದಿತ್ತು" ಎಂದು ಖರ್ಗೆ ಹೇಳಿದರು.

"ನಮ್ಮ ವಿರುದ್ಧ ಹೋರಾಡಲು ಪಾಕಿಸ್ತಾನಕ್ಕೆ ತನ್ನದೇ ಆದ ಶಕ್ತಿಯಿಲ್ಲ. ನಮ್ಮ ವಿರುದ್ಧ ಹೋರಾಡಲು ಚೀನಾದ ಬೆಂಬಲವನ್ನು ಪಡೆಯಿತು. ಏಪ್ರಿಲ್ 22 ರಂದು ಬೆಂಗಳೂರಿನಲ್ಲಿ ನಾನು ದೇಶವು ಸರ್ಕಾರವನ್ನು ಬೆಂಬಲಿಸಲು ಒಗ್ಗಟ್ಟಾಗುತ್ತದೆ ಮತ್ತು ನಾವೆಲ್ಲರೂ ಒಗ್ಗಟ್ಟಿನಿಂದ ಯುದ್ಧವನ್ನು ನಡೆಸುತ್ತೇವೆ ಮತ್ತು ಜಾತಿ, ಧರ್ಮಕ್ಕಿಂತ ದೇಶದ ಹಿತಾಸಕ್ತಿ ಮುಖ್ಯ. ನಮ್ಮ ಪ್ರಾಣವನ್ನು ತ್ಯಾಗ ಮಾಡುತ್ತೇವೆ ಎಂದು ಹೇಳಿದ್ದೆ. ಆದರೆ ಬಿಜೆಪಿಯವರಿಗೆ ದೇಶಕ್ಕಿಂತ ಮೋದಿಯೇ ಮುಖ್ಯ. ಕಾಂಗ್ರೆಸ್ ಕೂಡ ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದವರ ಪಕ್ಷ. ಮಹಾತ್ಮ ಗಾಂಧಿ, ಇಂದಿರಾ ಗಾಂಧಿ, ರಾಜೀವ್ ಗಾಂಧಿ ಈ ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದ್ದಾರೆ ಎಂದರು.

"ನಾವು ದೇಶಕ್ಕಾಗಿ ಸರ್ವಪಕ್ಷ ಸಭೆಯಲ್ಲಿ ಕುಳಿತಾಗ, ಮೋದಿ ಬಿಹಾರಕ್ಕೆ ಚುನಾವಣೆ ಪ್ರಚಾರಕ್ಕಾಗಿ

(2ನೇ ಪುಟ ನೋಡಿ)

## ಕಾಂಗ್ರೆಸ್ ಅಧಿಕಾರದಲ್ಲಿರುವವರೆಗೆ ಗ್ಯಾರಂಟಿ ಯೋಜನೆ ನಿಲ್ಲಲ್ಲ : ಡಿ.ಕೆ. ಶಿವಕುಮಾರ್.



ಮಲ್ಲಮ್ಮ ನುಡಿ ವಾರ್ತೆ ಹೊಸಪೇಟೆ:ಮೇ.20: ಸರ್ಕಾರಿ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾದ "ಸಾಧನಾ ಸಮಾವೇಶ" ಸಮಾರಂಭದಲ್ಲಿ ಮಾತನಾಡಿದ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ನಮಗೆ ಅಧಿಕಾರ ನೀಡಿ ರಾಜ್ಯದ ಸೇವೆ ಮಾಡಲು ಆಶೀರ್ವಾದ ಮಾಡಿದ ಜನರ ಋಣ ತೀರಿಸಲು ನಮ್ಮ ಸರ್ಕಾರ ಆರನೆಯದಾಗಿ ಭೂ ಗ್ಯಾರಂಟಿ ಯೋಜನೆ ನೀಡುತ್ತಿದೆ. ಎಐಸಿಸಿ ಅಧ್ಯಕ್ಷರ ನಿರ್ದೇಶನದಂತೆ ಕಾಂಗ್ರೆಸ್ ಅಧಿಕಾರದಲ್ಲಿರುವವರೆಗೂ ಗ್ಯಾರಂಟಿ ಯೋಜನೆಗಳು ನಿಲ್ಲಿಸುವುದಿಲ್ಲ" ಎಂದು ತಿಳಿಸಿದರು.

"ನಾವಿಂದು ಎರಡು ವರ್ಷಗಳ ಸಂಭ್ರಮಾಚರಣೆ ಮಾಡಲು ಇಲ್ಲಿಗೆ ಬಂದಿಲ್ಲ. ಕರ್ನಾಟಕ ರಾಜ್ಯದ ಜನರ ಋಣ ತೀರಿಸಲು ಸಮರ್ಪಣೆಯ ಸಂಕಲ್ಪ ಕಾರ್ಯಕ್ರಮ ಮಾಡುತ್ತಿದ್ದೇವೆ. ಮಲ್ಲಿಕಾರ್ಜುನ ಖರ್ಗೆ ಅವರ ಅಧ್ಯಕ್ಷತೆಯಲ್ಲಿ ರಾಹುಲ್ ಗಾಂಧಿ ಅವರ ನಾಯಕತ್ವದಲ್ಲಿ 136 ಕ್ಷೇತ್ರಗಳಲ್ಲಿ ಶಾಸಕರನ್ನು ಆಯ್ಕೆ ಮಾಡಿ ನಮಗೆ ಆಶೀರ್ವಾದ ಮಾಡಿದಿರಿ. ನಿಮ್ಮ ಋಣ ತೀರಿಸಲು ಕೊಟ್ಟ ಮಾತಿನಂತೆ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿ, ಆರನೇ ಗ್ಯಾರಂ-ಟಿಯಾಗಿ ಭೂ ಗ್ಯಾರಂಟಿ ಯೋಜನೆ ನೀಡುವ ಮೂಲಕ ನಮ್ಮ ಸರ್ಕಾರ ಇತಿಹಾಸ ಬರೆಯುತ್ತಿದೆ" ಎಂದು ತಿಳಿಸಿದರು.

"ಗ್ರಾಮೀಣ ಪ್ರದೇಶದ ಬಡ ಜನರು, ಕಳೆದ ಐವತ್ತು ವರ್ಷಗಳಿಂದ ಪಟ್ಟಾ ಖಾತೆ ಇಲ್ಲದವರಿಗೆ ಇಂದು ಈ ಯೋಜನೆ ಮೂಲಕ ದಾಖಲಾತಿ ನೀಡುತ್ತಿದ್ದೇವೆ. ಇಂತಹ ಐತಿಹಾಸಿಕ ಯೋಜನೆ ನೀಡಿರುವ ಕಂದಾಯ ಸಚಿವರಾದ ಕೃಷ್ಣಭೈರೇಗೌಡ ಹಾಗೂ ಅವರ ಅಧಿಕಾರಿಗಳ ಕಾರ್ಯಕ್ಕೆ ಅಭಿನಂದನೆ ಸಲ್ಲಿಸುತ್ತೇನೆ. ನಗರ ಪ್ರದೇಶಗಳಲ್ಲಿ ನಾನು, ಭೈರತಿ ಸುರೇಶ್, ರಹೀಂ ಖಾನ್ ಅವರು ಸೇರಿ ಎಲ್ಲಾ ಆಸ್ತಿಗಳನ್ನು ಡಿಜಿಟಲೀಕರಣಗೊಳಿಸಿ ಖಾತೆಗಳನ್ನು ಸರಿಪಡಿಸಿ ಜನರಿಗೆ ನೀಡುವ ಏಳನೇ ಗ್ಯಾರಂಟಿಯನ್ನು ಘೋಷಣೆ ಮಾಡುತ್ತಿದ್ದೇವೆ. ಕಾಂಗ್ರೆಸ್ ಶಕ್ತಿ, ದೇಶದ ಶಕ್ತಿ, ಕಾಂಗ್ರೆಸ್ ಇತಿಹಾಸ ದೇಶದ ಇತಿಹಾಸ. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಎಲ್ಲಾ ವರ್ಗದವರು ಅಧಿಕಾರಕ್ಕೆ ಬಂದಂತೆ" ಎಂದು ಹೇಳಿದರು.

ನಮ್ಮ ಸರ್ಕಾರದ ಎರಡು ವರ್ಷಗಳ ಅವಧಿಯಲ್ಲಿ ಭ್ರಷಾ??ಚಾರಕ್ಕೆ ಬೇಡಿ ಹಾಕಿದೆ. ಇಂದಿರಾ ಗಾಂಧಿ ಅವರು ಈ ಜಿಲ್ಲೆಯಲ್ಲಿ ವಿಜಯನಗರ ಸ್ಟೀಲ್ ಆರಂಭಿಸಿದರು. ಸೋನಿಯಾ ಗಾಂಧಿ ಅವರು ಇಲ್ಲಿ ಬಂದು ವಿದ್ಯುತ್ ಶಕ್ತಿಯ ಆರ್ ಟಿಪಿಎಸ್ ಆರಂಭಿಸಿದರು. ರಾಹುಲ್ ಗಾಂಧಿ ಅವರು ನಮ್ಮ ರಾಜ್ಯದಲ್ಲಿ ಭಾರತ ಜೋಡೋ ಯಾತ್ರೆ ಮಾಡಿದ ಬಹುತೇಕ ಎಲ್ಲಾ ಕಡೆಗಳಲ್ಲಿ ಕಾಂಗ್ರೆಸ್ ಪಕ್ಷ ಗೆದ್ದಿದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ 6 ಸಂಸದರನ್ನು ಆಯ್ಕೆ ಮಾಡಿದ್ದೀರಿ. ನಮ್ಮ ಸರ್ಕಾರ ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗೆ ವರ್ಷಕ್ಕೆ 5 ಸಾವಿರ ಕೋಟಿ ನೀಡುತ್ತಿದ್ದೇವೆ ಎಂದರು.

ವಿರೋಧ ಪಕ್ಷಗಳು ನಮ್ಮ ವಿರುದ್ಧ

(2ನೇ ಪುಟ ನೋಡಿ)

## ಬಿರುಗಾಳಿ ಸಹಿತ ಧಾರಾ ಕಾರ ಮಳೆಗೆ ಮನೆ ಕುಸಿತ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಮೇ.20: ಜಿಲ್ಲೆಯಲ್ಲಿ ಕಳೆದ 3 ದಿನಗಳಿಂದ ನಿರಂತರ ಮಳೆ ಸುರಿಯುತ್ತಿದ್ದು, ಬಿರುಗಾಳಿ, ಗುಡುಗು, ಮಿಂಚಿನ ಆರ್ಭಟಕ್ಕೆ ಜನಜೀವನ ಅಸ್ತವ್ಯಸ್ತಗೊಂಡಿದೆ.

ಭಾನುವಾರ ರಾತ್ರಿ ಸುರಿದ ಧಾರಾಕಾರ ಮಳೆಗೆ ಚಿಂಚೋಳಿ ತಾಲೂಕಿನ ವೆಂಕಟಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಲಿಂಗಾನಗರ ತಾಂಡಾದಲ್ಲಿ ಮನೆ ಕುಸಿದಿದೆ. ಲಿಂಗಾನಗರದ ಅನುಷಾಬಾಯಿ ಚವ್ಹಾಣ್ ಎಂಬುವವರಿಗೆ ಸೇರಿದ ಮನೆ ಸಂಪೂರ್ಣ ಕುಸಿದಿದ್ದು, ಸದ್ಯ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಅನುಷಾಬಾಯಿ ಅವರ ಪತಿ ಬೇರೆ ಮದುವೆ ಮಾಡಿಕೊಂಡು ಮನೆ ಬಿಟ್ಟು ಹೋಗಿದ್ದು, ಮೂವರು ಹೆಣ್ಣು ಮಕ್ಕಳ ಪೋಷಣೆ ಅನುಷಾಬಾಯಿ ಅವರ ಮೇಲಿದೆ. ಇದೀಗ ಮನೆಯೂ ಕಳೆದುಕೊಂಡ ಅನುಷಾಬಾಯಿ ಕುಟುಂಬ ಅಕ್ಷರಶಃ ಬೀದಿಗೆ ಬಂದಿದೆ.

ತಾಲೂಕಿನ ಕೆಲವೆಡೆ ರಸ್ತೆಯಲ್ಲಿ ಮರಗಳು ಉರುಳಿ ಬಿದ್ದು, ಸಂಚಾರ-ಕ್ಕೆ ತೊಂದರೆ ಉಂಟಾಯಿತು. ಸಂಬಂಧಪಟ್ಟ ಅಧಿಕಾರಿಗಳು ಮರ ತೆರವುಗೊಳಿಸಿ, ಸಂಚಾರಕ್ಕೆ ಅನುವು ಮಾಡಿಕೊಟ್ಟರು. ವಿದ್ಯುತ್ ಕಂಬಗಳು ಧರೆಗುರುಳಿದರಿಂದ ಗ್ರಾಮಸ್ಥರು ಕತ್ತಲಲ್ಲಿ ಸಮಯ ಕಳೆಯುವಂತಾಯಿತು. ಸೋಮವಾರ ಚಿಂಚೋಳಿಯಲ್ಲಿ 40.4 ಮಿ.ಮೀ, ಕುಂಚಾವರಂ 50.4, ಐನಾಪುರ 7.7, ಸುಲೇಪೇಟ 8.8, ಚಿಮ್ಮನಚೋಡ 4, ಕೋಡ್ಲಿ 24.2 ಮಿ.ಮೀ ಮಳೆಯಾಗಿದೆ. ಮಳೆಯಿಂದ ಯಾವುದೇ ಪ್ರಾಣ ಹಾನಿ ಸಂಭವಿಸಿಲ್ಲ ಎಂದು ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ ತಿಳಿಸಿದ್ದಾರೆ.

## ಮುಂದುವರೆದ ವರುಣನ ಅಬ್ಬರ; ಬೇಸಿಗೆ ಮರೆಸಿದ ಮಳೆ



ಮಲ್ಲಮ್ಮ ನುಡಿ ವಾರ್ತೆ ಬೀದರ. ಮೇ. 20 : ನಗರ ಸೇರಿದಂತೆ ತಾಲ್ಲೂಕಿನ ಹಲವು ಭಾಗಗಳಲ್ಲಿ ಭಾನುವಾರವೂ ವರುಣನ ಆರ್ಭಟ ಮುಂದುವರೆದಿದೆ.

ಬೆಳಿಗ್ಗೆಯಿಂದ ಮೋಡ ಕವಿದ ವಾತಾವರಣ ಇತ್ತು. ಮಧ್ಯಾಹ್ನ ಗುಡುಗು ಸಹಿತ ಗಂಟೆಗೂ ಹೆಚ್ಚು ಸಮಯ ಬಿರುಸಿನ ಮಳೆಯಾಯಿತು. ಜೋರು ಮಳೆಗೆ ನಗರದ ಹರಳಯ್ಯಾ ವೃತ್ತ, ಹಳೆ ಬಸ್ ನಿಲ್ದಾಣ, ಹಾರೂರಗೇರಿ, ವಿದ್ಯಾನಗರ, ಕುಂಬಾರವಾಡ ಕ್ರಾಸ್, ಗುಂಪಾ ರಿಂಗ್‌ರೋಡ್ ಕ್ರಾಸ್‌ನಲ್ಲಿ ಅಪಾರ ಪ್ರಮಾಣದಲ್ಲಿ ನೀರು ಸಂಗ್ರಹಗೊಂಡಿತು.

ಇದರ ಪರಿಣಾಮ ವಾಹನ ಸಂಚಾರಕ್ಕೆ ತೊಡಕಾಗಿ, ನಿಧಾನವಾಗಿ ಸಂಚರಿಸಿದವು.

ಭಾನುವಾರ ನಗರದ ಬಹುತೇಕ ಕಲ್ಯಾಣ ಮಂಟಪಗಳಲ್ಲಿ ಮದುವೆ ಸೇರಿದಂತೆ ಇತರೆ ಕಾರ್ಯಕ್ರಮಗಳು ಹೆಚ್ಚಿನ ಪ್ರಮಾಣದಲ್ಲಿದ್ದವು. ವಿವಿಧ ಕಡೆಗಳಿಂದ ಬಂದಿದ್ದ ಜನ ಮಳೆಯಲ್ಲಿ ನೆನೆದುಕೊಂಡರು. ತಾಲ್ಲೂಕಿನ ಚಿಟ್ಟಾ, ಘೋಡಂಪಳ್ಳಿ, ಅಮಲಾಪೂರ, ಯದಲಾಪೂರ, ಕಮಠಾಣ ಸೇರಿದಂತೆ ಹಲವು ಕಡೆಗಳಲ್ಲಿ ಜೋರು ಮಳೆ ಬಿದ್ದಿದೆ.

ನಾಲ್ಕೈದು ದಿನಗಳಿಂದ ಮೇಲಿಂದ ಮೇಲೆ ಮಳೆ ಸುರಿಯುತ್ತಿರುವ ಕಾರಣ ಬೇಸಿಗೆ ಮರೆಸಿದೆ. ಸಂಪೂರ್ಣ ಮಳೆಗಾಲದಂತೆ ಭಾಸವಾಗುತ್ತಿದೆ. ವಾತಾವರಣ ಸಂಪೂರ್ಣ ತಂಪಾಗಿದ್ದು, ಗರಿಷ್ಠ ಉಷ್ಣಾಂಶ 32ರಿಂದ 34 ಡಿಗ್ರಿ ಸೆಲ್ಸಿಯಸ್‌ಗೆ ಕುಸಿದಿದೆ. ಬತ್ತಿ ಹೋಗಿದ್ದ ಜಲಮೂಲಗಳಲ್ಲಿ ಮತ್ತೆ ಜೀವ ಜಲ ಚಿಮ್ಮಿದೆ. ಬಾವಿ, ಕೊಳವೆಬಾವಿಗಳಲ್ಲಿ ನೀರಿನ ಪ್ರಮಾಣ ಹೆಚ್ಚಾಗಿದೆ.

ಮಳೆ ಚುರುಕುಗೊಂಡ ಬೆನ್ನಲ್ಲೇ ಕೃಷಿ ಇಲಾಖೆಯು ಬಿತ್ತನೆ ಬೀಜ, ರಸಗೊಬ್ಬರದ ದಾಸ್ತಾನು ಹೆಚ್ಚಿಸಿಕೊಳ್ಳುತ್ತಿದೆ. ಮುಂದಿನ ವಾರದಿಂದ ಬೀಜ ವಿತರಣೆಗೆ ಸಿದ್ಧತೆ ನಡೆಸಿದೆ.

## ಮೇ 22ಕ್ಕೆ ರಾಜ್ಯದ ಐದು ರೈಲು ನಿಲ್ದಾಣ ಸೇರಿ 103 ಅಮೃತ್ ನಿಲ್ದಾಣಗಳ ಉದ್ಘಾಟನೆ




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ.20:ಕರ್ನಾಟಕದ ಐದು ರೈಲು ನಿಲ್ದಾಣಗಳು ಸೇರಿದಂತೆ ದೇಶಾದ್ಯಂತ 103 'ಅಮೃತ್ ನಿಲ್ದಾಣ'ಗಳನ್ನು ಪ್ರಧಾನಿ ನರೇಂದ್ರ ಮೋದಿ ಅವರು ಮೇ 22 ರಂದು ರಾಜಸ್ಥಾನದ ಬಿಕಾನೇರ್‌ನಿಂದ ವರ್ಚುವಲ್ ಮೂಲಕ ಉದ್ಘಾಟಿಸಲಿದ್ದಾರೆ.

ಅಧಿಕೃತ ಹೇಳಿಕೆಯ ಪ್ರಕಾರ, ಕೊಪ್ಪಳ ಜಿಲ್ಲೆಯ ಮುನಿರಾಬಾದ್, ಬಾಗಲಕೋಟೆ, ಗದಗ, ಬೆಳಗಾವಿ ಜಿಲ್ಲೆಯ ಗೋಕಾಕ್ ರಸ್ತೆ ಮತ್ತು ಧಾರವಾಡ ರೈಲು ನಿಲ್ದಾಣಗಳನ್ನು ಅಮೃತ್ ಭಾರತ್ ನಿಲ್ದಾಣ ಯೋಜನೆ(ಎಬಿಎ???ಸ್) ಅಡಿಯಲ್ಲಿ ಅಭಿವೃದ್ಧಿಪಡಿಸಲಾಗಿದ್ದು, ಈ ಐದು ನಿಲ್ದಾಣಗಳನ್ನು ಪ್ರಧಾನಿ ಮೋದಿ ಗುರುವಾರ ಲೋಕಾರ್ಪಣೆಗೊಳಿಸಲಿದ್ದಾರೆ.

18 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶದ 86 ಜಿಲ್ಲೆಗಳಲ್ಲಿ 103 ಅಮೃತ್ ನಿಲ್ದಾಣಗಳನ್ನು 1,100 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

1,300 ಕ್ಕೂ ಹೆಚ್ಚು ನಿಲ್ದಾಣಗಳನ್ನು ಆಧುನಿಕ ಸೌಲಭ್ಯಗಳೊಂದಿಗೆ ಪುನರಾಭಿವೃದ್ಧಿ ಮಾಡಲಾಗುತ್ತಿದೆ. ಪ್ರಾದೇಶಿಕ ವಾಸ್ತುಶಿಲ್ಪವನ್ನು ಪ್ರತಿಬಿಂಬಿಸಲು ಮತ್ತು ಎಬಿಎ???ಸ್ ಅಡಿಯಲ್ಲಿ ಪ್ರಯಾಣಿಕರ ಸೌಲಭ್ಯಗಳನ್ನು ಹೆಚ್ಚಿಸಲಾಗಿದ್ದು, ತಡರಾತ್ರಿ ರೈಲು ಪ್ರಯಾಣ ಇದ್ದರೆ ಪ್ರಯಾಣಿಕರು ನಿಲ್ದಾಣದಲ್ಲಿಯೇ ತಂಗಲು ವ್ಯವಸ್ಥೆ ಕಲ್ಪಿಸಲಾಗಿದೆ.

## ರಾಜ್ಯದಲ್ಲಿ ಮಳೆ ಆರ್ಭಟ; 7 ಜಿಲ್ಲೆಗಳಲ್ಲಿ ರೆಡ್ ಅಲರ್ಟ ಘೋಷಣೆ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಮೇ.20:ಕರ್ನಾಟಕದಲ್ಲಿ ಮಳೆ ಆರ್ಭಟ ಜೋರಾಗಿದ್ದು, ಇನ್ನು 5 ದಿನಗಳ ರಾಜ್ಯದಲ್ಲಿ ವ್ಯಾಪಕ ಮಳೆಯಾಲಿದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದ್ದು, ರಾಜ್ಯದ ಬರೊಬ್ಬರಿ 7 ಜಿಲ್ಲೆಗಳಲ್ಲಿ ರೆಡ್ ಅಲರ್ಟ ಘೋಷಣೆ ಮಾಡಿದೆ.

ಮಂಗಳವಾರ ಸಂಜೆ ಭಾರತದ ಹವಾಮಾನ ಇಲಾಖೆ (ಐಎಂಡಿ) ಕರ್ನಾಟಕದ ಏಳು ಕರಾವಳಿ ಮತ್ತು ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಈ ಹಿಂದೆ ನೀಡಿದ್ದ ಅಲರ್ಟ್ ಅನ್ನು ರೆಡ್ ಅಲರ್ಟ್‌ಗೆ ನವೀಕರಿಸಿದೆ. ರಾಜ್ಯಾದ್ಯಂತ ಭಾರಿ ಮಳೆ ಮುಂದವರೆಯಲಿದ್ದು, ಕರಾವಳಿ ಜಿಲ್ಲೆಗಳು ಸೇರಿ ಒಟ್ಟು 7 ಜಿಲ್ಲೆಗಳಲ್ಲಿ ರೆಡ್ ಅಲರ್ಟ ಘೋಷಣೆ ಮಾಡಿದೆ.

ಇತ್ತೀಚಿನ ಬುಲೆಟಿನ್ ಪ್ರಕಾರ, ರಾಜ್ಯದ ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ, ಕೊಡಗು, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಹಾಸನ ಸೇರಿದಂತೆ ಒಟ್ಟು 7 ಜಿಲ್ಲೆಗಳಲ್ಲಿ ರಾತ್ರಿಯಲ್ಲಿ ಅತಿ ಹೆಚ್ಚು ಮಳೆ, ಆಲಿಕಲ್ಲು ಮಳೆ ಮತ್ತು ಬಲವಾದ ಗಾಳಿ ಬೀಸಲಿದೆ. ಎಲ್ಲಾ ಏಳು ಜಿಲ್ಲೆಗಳಲ್ಲಿ ದಿಢೀರ್ ಪ್ರವಾಹವಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.

ಅಂತೆಯೇ ಮುಂದಿನ 24 ಗಂಟೆಗಳಲ್ಲಿ ನಿರೀಕ್ಷಿತ ಮಳೆಯಾಗುವ ಕಾರಣ ಕೆಲವು ಸಂಪೂರ್ಣವಾಗಿ ತೇವಾಂಶದಿಂದ ಕೂಡಿದ ಮಣ್ಣು ಕುಸಿಯುವ ಸಾಧ್ಯತೆ ಮತ್ತು ತಗ್ಗು ಪ್ರದೇಶಗಳು ಪ್ರವಾಹದ ನೀರಿನಿಂದ ಮುಳುಗಡೆಯಾಗುವ ಸಾಧ್ಯತೆ ಇದೆ ಎಂದು ಎಚ್ಚರಿಸಿದೆ.

(2ನೇ ಪುಟ ನೋಡಿ)

ಒಂದನೇ ಪುಟದಿಂದ

## ನುಡಿದಂತೆ ನಡೆದಿದ್ದೇವೆ

ಸಂವಿಧಾನದ ಅಡಿಯಲ್ಲಿ ಸರ್ವ ಧರ್ಮಗಳನ್ನೂ ಸಮಾನವಾಗಿ ಕಾಣಬೇಕು. ನಾವು ಇದೇ ಮೌಲ್ಯವನ್ನು ಪಾಲಿಸುತ್ತಿದ್ದೇವೆ ಎಂದರು.

ಕೇಂದ್ರ ಸರ್ಕಾರದಿಂದ ಪ್ರತೀ ವರ್ಷ ನಮಗೆ ನಷ್ಟ ಆಗುತ್ತಿದೆ. ನಾವು ಪ್ರತೀ ವರ್ಷ 4.5 ಲಕ್ಷ ಕೋಟಿ ತೆರಿಗೆ ರೂಪದಲ್ಲಿ ಕೊಟ್ಟರೆ ನಮಗೆ ವಾಪಾಸ್ ಬರುವುದು ಒಂದು ರೂಪಾಯಿಗೆ 14 ಪೈಸೆ ಮಾತ್ರ. ಇದರಿಂದ ಒಕ್ಕೂಟ ವ್ಯವಸ್ಥೆಯ ಘನತೆ ಹಾಳು ಮಾಡುತ್ತಿದ್ದಾರೆ ಎಂದರು.

ಕೇಂದ್ರ ಪ್ರಾಯೋಜಿತ ಯೋಜನೆಗಳಿಗೂ ಕೇಂದ್ರದಿಂದ ಪೂರ್ತಿ ಅನುದಾನ ಬಂದೇ ಇಲ್ಲ. ಕೇಂದ್ರದ ಯೋಜನೆಗಳಿಗೆ ರಾಜ್ಯ ಸರ್ಕಾರ ರಾಜ್ಯದ ಪಾಲನ್ನು ಪೂರ್ತಿ ಕೊಟ್ಟಿದೆ. ಆದರೆ ಕೇಂದ್ರ ಸರ್ಕಾರ ತಮ್ಮ ಪಾಲನ್ನು ಕೊಡದೆ ಉಳಿಸಿಕೊಂಡು ಅನ್ಯಾಯ ಮಾಡುತ್ತಿದೆ. 15 ನೇ ಹಣಕಾಸು ಯೋಜನೆಯಲ್ಲಿ ರಾಜ್ಯಕ್ಕೆ ಕೇಂದ್ರ ಮಾಡಿರುವ ಅನ್ಯಾಯ ನಿಮಗೆಲ್ಲಾ ಗೊತ್ತೇ ಇದೆ. ಭದ್ರಾ ಮೇಲ್ದಂಡೆ ಯೋಜನೆಗೆ ಘೋಷಿಸಿದ್ದ 5300 ಕೋಟಿ ಹಣದಲ್ಲಿ ಬಿಡಿಗಾಸನ್ನೂ ಬಿಡುಗಡೆ ಮಾಡಲಿಲ್ಲ. ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆ ಎಂದು ಘೋಷಿಸುವುದಾಗಿ ಭರವಸೆ ನೀಡಿದರು.

ಹಿಂದಿನ ಬಿಜೆಪಿ ಸರ್ಕಾರದ ಮೇಲೆ 40% ಕಮಿಷನ್ ಆರೋಪ ಇತ್ತು. ನಾವು ಇದರ ವಿರುದ್ಧ ಹೋರಾಟ ಮಾಡಿದೆವು, ಅಧಿಕಾರಕ್ಕೆ ಬಂದ ಬಳಿಕ ತನಿಖೆಗೆ ನಾಗಮೋಹನ್ ದಾಸ್ ಸಮಿತಿ ರಚಿಸಿದೆವು. ಸಮಿತಿ ಕೊಟ್ಟಿರುವ ವರದಿಯಲ್ಲಿ ಕಮಿಷನ್ ವ್ಯವಹಾರ ಸಾಬೀತಾಗಿದೆ ಎಂದರು.

1.22 ಕೋಟಿ ಕುಟುಂಬಗಳ ಯಜಮಾನಿಯರಿಗೆ ಗೃಹಲಕ್ಷ್ಮಿ ಯೋಜನೆಯಡಿ 2000 ರೂಪಾಯಿ ಕೊಡುತ್ತಿದ್ದೇವೆ. 1.30 ಕೋಟಿ ಕುಟುಂಬಗಳಿಗೆ ಗೃಹ ಜ್ಯೋತಿ ಯೋಜನೆಯಡಿ ಅನುಕೂಲ ಒದಗಿಸಿದ್ದೇವೆ. ಜೊತೆಗೆ ಇಡೀ ರಾಜ್ಯದ ಮಹಿಳೆಯ ರಿಗೆ ಶಕ್ತಿ ಯೋಜನೆಯಡಿ ಉಚಿತ ಪ್ರಯಾಣದ ವ್ಯವಸ್ಥೆ ಮಾಡಿದ್ದೇವೆ ಎಂದರು.

2014 ರಲ್ಲಿ 10000 ಇದ್ದ ಚಿನ್ನದ ಬೆಲೆ ಈಗ ಲಕ್ಷ ಆಗಿದೆ. ಗ್ಯಾಸ್ ಬೆಲೆ 400 ಇದ್ದದ್ದು ಈಗ 850 ಆಗಿದೆ. ಡೀಸೆಲ್, ಪೆಟ್ರೋಲ್, ಎಣ್ಣೆ, ಕಾಳು, ಬೇಳೆ, ರಸಗೊಬ್ಬರ ಎಲ್ಲದರ ಬೆಲೆಯನ್ನೂ ಆಕಾಶಕ್ಕೆ ಏರಿಸಿರುವ ಕೇಂದ್ರ ಸರ್ಕಾರದ ವಿರುದ್ಧ ಜನಾಕ್ರೋಶ ಇದೆ. ನಮ್ಮ ಸರ್ಕಾರದ ಪರವಾಗಿ ಜನಾಭಿಪ್ರಾಯ ಇದೆ ಎಂದರು.

ರಾಜ್ಯದ ಜನತೆ ನಮ್ಮ ಮಾಲೀಕರು. ನಮ್ಮ ಮಾಲೀಕರಿಗೆ ನಾವು ಕೊಟ್ಟ ಮಾತಿನಂತೆ ನಡೆದುಕೊಂಡಿದ್ದೇವೆ. ನಿಮ್ಮ ಆಶೀರ್ವಾದ ಇರುವವರೆಗೂ ಬಿಜೆಪಿಯ ಸುಳ್ಳಿನ ರಾಶಿಗೆ ನಾವು ಹೆದರುವ, ಅಂಜುವ ಪ್ರಶ್ನೆಯೇ ಇಲ್ಲ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

## ಘೋಷಣೆ ನಮ್ಮ ಸಂಕಲ್ಪ : ರಾಹುಲ್ ಗಾಂಧಿ

ಅವರು ಸೇರಿದಂತೆ ಅನೇಕ ನಾಯಕರ ಬಳಿ ಚರ್ಚೆ ಮಾಡಿದೆ. ಈಗ ನಾನು ಆಲೋಚನೆ ಮಾಡಿದ ಯೋಜನೆ ಜಾರಿಗೆ ಬಂದಿದೆ. ಈ ದೇಶದ ಜನಸಾಮಾನ್ಯರ ಹೆಸರಿನಲ್ಲಿ ಭೂಮಿಯ ಮಾಲಿಕತ್ವ ಬರುತಿದೆ. ಇದು ನಮ್ಮ ಆರನೇ ಭೂ ಗ್ಯಾರಂಟಿ. ಇನ್ನೂ 500 ನೂತನ ಕಂದಾಯ ಗ್ರಾಮಗಳನ್ನು ಘೋಷಣೆ ಮಾಡುವುದು ನಮ್ಮ ಸಂಕಲ್ಪ. ಕರ್ನಾಟಕದಲ್ಲಿ ಯಾರೂ ಸಹ ಭೂಮಿಯ ಮಾಲಿಕತ್ವ ಇಲ್ಲದೇ ಇರಬಾರದು ಎಂಬುದು ನಮ್ಮ ಆಶಯ. ಪ್ರತಿ ಊರಿನಲ್ಲಿ ಇರುವ ಗ್ಯಾರಂಟಿ ಸಮಿತಿಗಳು ಇಂತಹ ಭೂ ಮಾಲಿಕತ್ವ ಇಲ್ಲದ ಕುಟುಂಬಗಳಿಗೆ ಅವರ ಹಕ್ಕನ್ನು ಕೊಡಿಸುವ ಕೆಲಸ ಮಾಡಬೇಕು ಎಂದು ತಿಳಿಸಿದರು.

ಭೂ ಒಡೆತನದಲ್ಲಿ ಕರ್ನಾಟಕ ಇಡೀ ದೇಶದಲ್ಲಿ ಮೊಟ್ಟ ಮೊದಲ ರಾಜ್ಯವಾಗಿ ನಿಲ್ಲಲಿದೆ. ಯಾರಿಗೆ ಜಮೀನಿನ ಹಕ್ಕು ಇಲ್ಲವೋ ಅದನ್ನು ನೀಡುವುದು ನಮ್ಮ ಗುರಿ. ಈ ಮೂಲಕ ಆರನೇ ಗ್ಯಾರಂಟಿ ನೀಡುತ್ತಿದ್ದೇವೆ. ಇದು ಕರ್ನಾಟಕದ ಉತ್ತಮ ಭವಿಷ್ಯಕ್ಕೆ ನಾಂದಿ ಹಾಡಲಿದೆ.

ಈ ದೇಶದ ಕೆಲವೇ ಕುಟುಂಬಗಳಿಗೆ ಮಾತ್ರ ನಿಮ್ಮ ತೆರಿಗೆ ಹಣ, ದೇಶದ ಸಂಪತ್ತು ಹೋಗಬೇಕು ಎನ್ನುವುದು ಬಿಜೆಪಿಯ ಧೋರಣೆ. ಆದರೆ ಕರ್ನಾಟಕದಲ್ಲಿ ಪರಿಶಿಷ್ಟ ಜಾತಿ, ಪಂಗಡ, ಆದಿವಾಸಿ ಹೀಗೆ ಎಲ್ಲಾ ವರ್ಗದ ಬಡವರ ಜೇಬಿಗೆ ನೇರವಾಗಿ ಹಣ ಹೋಗುತ್ತಿದೆ. ನಿಮಗೆ ನೀಡಿದ ಹಣ ನೇರವಾಗಿ ಮಾರುಕಟ್ಟೆಗೆ ಹೋಗುತ್ತದೆ, ಮರಳಿ ಸರ್ಕಾರಕ್ಕೆ ಬರುತ್ತದೆ. ಹಳ್ಳಿ, ಹಳ್ಳಿಗಳಲ್ಲಿ ಹಣದ ಚಲಾವಣೆ ನಡೆಯುತ್ತದೆ. ಇದು ಕರ್ನಾಟಕದ ಆರ್ಥಿಕತೆಯ ಸಬಲತೆಗೆ ಪುಷ್ಟಿ ನೀಡುತ್ತದೆ ಎಂದು ರಾಹುಲ್ ಗಾಂಧಿ ತಿಳಿಸಿದರು.

ಬಿಜೆಪಿ ಒಂದೆರಡು ಜನರಿಗೆ ಲಾಭ ಮಾಡಿ ನೀಡುವ ಹಣ ಈ ದೇಶದ ಒಳಗೆ ಖರ್ಚಾಗುವುದಿಲ್ಲ. ಬದಲಾಗಿ ಲಂಡನ್, ನ್ಯೂಯಾರ್ಕ್ ಹೀಗೆ ಬೇರೆ, ಬೇರೆ ದೇಶಗಳಲ್ಲಿ ಖರ್ಚು ಮಾಡಿ ಅಲ್ಲಿ ಆಸ್ತಿ ಖರೀದಿ ಮಾಡುತ್ತಾರೆ. ನಮ್ಮ ಕಾಂಗ್ರೆಸ್ ಯೋಜನೆಗಳಿಂದ ಉದ್ಯೋಗ ಸೃಷ್ಟಿಯಾಗುತ್ತದೆ. ಅವರಿಂದ ಉದ್ಯೋಗಗಳು ಮಾಯವಾಗುತ್ತವೆ. ಏನಾದರೂ ಆರ್ಥಿಕವಾಗಿ ಸಂಕಷ್ಟ ಎದುರಾದರೆ ಬಿಜೆಪಿ ಮಾಡೆಲ್ ಇಂದ ನಷ್ಟವೇ ಹೆಚ್ಚು. ನಮ್ಮ ಗ್ಯಾರಂಟಿ ಮಾಡೆಲ್ ನಿಂದ ನಿಮ್ಮ ಜೇಬಿನಲ್ಲಿ ಇರುವ ಹಣದಿಂದ ನೀವು ಜೀವನ ಸಾಗಿಸಬಹುದು. ನಿಮ್ಮ ಸಂಕಷ್ಟ ಕಾಲದಲ್ಲಿ ನಾವು ನಿಮಗೆ ಹಣ ನೀಡುತ್ತೇವೆ. ಅವರ ಮಾಡೆಲ್ ಅಲ್ಲಿ ಲಕ್ಷಾಂತರ ರೂಪಾಯಿ ಫೀ ಭರ್ತಿ ಮಾಡಿ ಖಾಸಗಿ ವಿಶ್ವವಿದ್ಯಾಲಯ, ಶಾಲೆಗಳಲ್ಲಿ ಓದಿಸಬೇಕಾದ ಅನಿವಾರ್ಯತೆ ಸೃಷ್ಟಿಯಾಗುತ್ತದೆ.

ನಾವು ಚುನಾವಣೆ ಸಮಯದಲ್ಲಿ ಐದು ಗ್ಯಾರಂಟಿಗಳನ್ನು ನಿಮಗಾಗಿ ನೀಡುತ್ತೇವೆ ಎಂದು ಭರವಸೆ ನೀಡಿದ್ದೆವು. ಆಗ ಪ್ರಧಾನಮಂತ್ರಿಗಳೂ ಸೇರಿದಂತೆ ಬಿಜೆಪಿಯವರು ಈ ಭರವಸೆಗಳನ್ನು ಕಾಂಗ್ರೆಸ್ ಎಂದಿಗೂ ಈಡೇರಿಸಲು ಸಾಧ್ಯವಿಲ್ಲ ಎನ್ನುವ ಮಾತುಗಳನ್ನಾಡಿದ್ದರು. ಆದರೆ ನಾವು ಇಂದು ಕರ್ನಾಟಕದ ಬಡ ಜನರ ಕುಟುಂಬಗಳ ಬ್ಯಾಂಕ್ ಖಾತೆಗೆ ನೇರವಾಗಿ ಹಣ ಹಾಕುತ್ತಿದ್ದೇವೆ. ಸಾವಿರಾರು ಕೋಟಿ ಹಣ ನಿಮ್ಮ ಕೈ ಸೇರುತ್ತಿದೆ.

ಮೊದಲ ಭರವಸೆಯಾಗಿ ಒಂದು ಕೋಟಿಗೂ ಹೆಚ್ಚು ಮಹಿಳೆಯರಿಗೆ ತಿಂಗಳಿಗೆ 2 ಸಾವಿರ ನೀಡುವ ಗೃಹಲಕ್ಷ್ಮೀ ಯೋಜನೆ ಜಾರಿಗೆ ತಂದೆವು. ಕರ್ನಾಟಕದ ಮಹಿಳೆಯರ ಖಾತೆಗೆ ನಮ್ಮ ಸರ್ಕಾರ ನೇರವಾಗಿ ಹಣ ನೀಡುತ್ತಿದೆ. ಗೃಹಜ್ಯೋತಿ, ಶಕ್ತಿ ಯೋಜನೆ ಮೂಲಕ 3.5 ಕೋಟಿಯಷ್ಟಿರುವ ಮಹಿಳೆಯರು 500 ಕೋಟಿ ಟ್ರಿಪ್ ಪ್ರಯಾಣ ಮಾಡಿದ್ದಾರೆ. ಅನ್ನಭಾಗ್ಯದ ಮೂಲಕ 4 ಕೋಟಿಗೂ ಹೆಚ್ಚು ಜನರು 10 ಕೆಜಿ ಅಕ್ಕಿ ಪಡೆಯುತ್ತಿದ್ದಾರೆ. ಯುವನಿಧಿ ಹೀಗೆ ಸರ್ಕಾರ ಕೊಟ್ಟ ಮಾತಿನಂತೆ ಎಲ್ಲಾ ಗ್ಯಾರಂಟಿಗಳನ್ನು ಜಾರಿಗೆ ತರಲಾಗಿದೆ ಎಂದು ತಿಳಿಸಿದರು.

## 26 ಜೀವ ಉಳಿಯುತ್ತಿದ್ದವು: ಖರ್ಗೆ

ಹೋಗಿದ್ದರು. ಎರಡು ಬಾರಿ ಅವರು ಸರ್ವಪಕ್ಷ ಸಭೆ ಕರೆದರೂ ಅವರು ಬರಲಿಲ್ಲ. ನೀವು ದೇಶಭಕ್ತರಾಗಿದ್ದರೆ ಮತ್ತು ದೇಶದ ಬಗ್ಗೆ ಪ್ರೀತಿ ಹೊಂದಿದ್ದರೆ, ನಮ್ಮನ್ನು ಕರೆದ ನಂತರ ನೀವು ಏಕೆ ಬರಲಿಲ್ಲ? ನಾವು ಸರ್ವಪಕ್ಷ ಸಭೆಗೆ ಹಾಜರಾಗದಿದ್ದರೆ ನಮ್ಮನ್ನು ದೇಶದ್ರೋಹಿಗಳೆಂದು ಹಣೆಪಟ್ಟಿ ಕಟ್ಟಲಾಗುತ್ತಿತ್ತು. ಆದರೆ ಸಭೆಗೆ ಹಾಜರಾಗದಿದ್ದರೂ ಅವರನ್ನು ದೇಶಭಕ್ತ ಎಂದು ಕರೆಯಲಾಗುತ್ತಿದೆ. ದೇಶದ ಕಲ್ಯಾಣದ ಬಗ್ಗೆ ಬರಿ ಮಾತನಾಡುವುದರಿಂದ ಸಾಧ್ಯವಿಲ್ಲ, ಎಲ್ಲರನ್ನೂ ಕರೆದುಕೊಂಡು ಹೋಗುವುದು ಮುಖ್ಯ" ಎಂದು ವಾಗ್ದಾಳಿ ನಡೆಸಿದರು.ಕರ್ನಲ್ ಸೋಫಿಯಾ ಖುರೇಷಿ ಅವರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ್ದಕ್ಕಾಗಿ ಮಧ್ಯಪ್ರದೇಶದ ಬಿಜೆಪಿ ಸಚಿವ ವಿಜಯ್ ಶಾ ಅವರನ್ನು ಸಚಿವ ಸ್ಥಾನದಿಂದ ವಜಾಗೊಳಿಸಬೇಕೆಂದು ಮೋದಿಗೆ ಒತ್ತಾಯಿಸಿದ ಖರ್ಗೆ, "ನಾವು ಅವರ ರಾಜೀನಾಮೆ ಕೇಳಿದ್ದೇವೆ. ಆದರೆ ಮೋದಿ ಇನ್ನೂ ಅವರನ್ನು ಸಂಪುಟದಲ್ಲಿಯೇ ಉಳಿಸಿಕೊಂಡಿದ್ದಾರೆ. ಮೊದಲು ಬಿಜೆಪಿಯೊಳಗಿನ ಆ ದೇಶದ್ರೋಹಿಗಳನ್ನು ತೆಗೆದುಹಾಕಿ ಮತ್ತು ನಂತರ ಮಾತನಾಡಿ" ಎಂದರು.

**ಎಸ್‌ಸಿ ಜಾತಿ ಜನಗಣತಿ ಬಗ್ಗೆ ಸಿಎಂ ಸಿದ್ದುಗೆ ಎಚ್ಚರಿಕೆ**

ನಡೆಯುತ್ತಿರುವ ಎಸ್‌ಸಿ ಜಾತಿ ಜನಗಣತಿಯಲ್ಲಿ 'ಬೇಡ ಜಂಗಮ' ಎಂದು ನೋಂದಾಯಿಸಿಕೊಳ್ಳುವ ಅನೇಕ ಎಸ್‌ಸಿಯೇತರರ ಸಮಸ್ಯೆಯನ್ನು ಪರಿಹರಿಸಲು ಖರ್ಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸೂಚಿಸಿದರು."ನಾನು ಒಳ ಮೀಸಲಾತಿ ವಿಷಯದಲ್ಲಿ ಎಂದಿಗೂ ಮಧ್ಯಪ್ರವೇಶಿಸಲಿಲ್ಲ. ಆದರೆ ಅನೇಕರು 'ಬೇಡ ಜಂಗಮ' ಎಂದು ದಾಖಲಾಗಿದ್ದಾರೆ. ಲಿಂಗಾಯಿತರಲ್ಲಿ ಬಡವರಿಗೆ ಸವಲತ್ತುಗಳನ್ನು ನೀಡಲಿ. ಆದರೆ ಅವರನ್ನು ಎಸ್‌ಸಿ ಪಟ್ಟಿಯಲ್ಲಿ ಸೇರಿಸಬಾರದು. ಕೆಲವು ವರ್ಷಗಳ ಹಿಂದೆ ಸುಮಾರು 500 ರಷ್ಟಿದ್ದ ಬೇಡ ಜಂಗಮದ ಜನಸಂಖ್ಯೆ ಈಗ 5 ಲಕ್ಷ ತಲುಪಿದೆ ಮತ್ತು ಅದು ಹೇಗೆ ಸಾಧ್ಯ?. ಎಸ್ ಸಿಗೆ ಅವರನ್ನು ಸೇರಿಸಿದರೆ ಇದು ಅನ್ಯಾಯ; ಇದು ಎಸ್‌ಸಿ ಜನರ ಮೇಲೆ ಪರಿಣಾಮ ಬೀರುತ್ತದೆ. ಸುಳ್ಳು ಎಸ್‌ಸಿ ಪ್ರಮಾಣಪತ್ರಗಳ ವಿಷಯಕ್ಕೆ ಕಾರಣರಾದವರು ಜೈಲಿಗೆ ಕಳುಹಿಸಬೇಕು. ಏಕೆಂದರೆ ಅದು ವಂಚನೆಗೆ ಸಮಾನವಾಗಿರುತ್ತದೆ" ಎಂದು ಅವರು ಸಿದ್ದರಾಮಯ್ಯ ಅವರ ಗಮನಕ್ಕೆ ತಂದರು.ಜಾತಿ ಗಣತಿ ವಿಚಾರದಲ್ಲಿ "ರಾಹುಲ್ ಗಾಂಧಿ ಅವರಿಗೆ ಕೆಟ್ಟ ಹೆಸರು ತರಬೇಡಿ. ಏಕೆಂದರೆ ಅವರು ಜಾತಿ ಜನಗಣತಿಗಾಗಿ ಹೋರಾಡಿದ್ದರು ಮತ್ತು ಅವರ ಒತ್ತಡದಿಂದಾಗಿ ಮೋದಿ ಸರ್ಕಾರವು ರಾಷ್ಟ್ರೀಯ ಜನಗಣತಿಯಲ್ಲಿ ಜಾತಿ ಜನಗಣತಿಯನ್ನು ಸೇರಿಸುವುದಾಗಿ ಘೋಷಿಸಿದೆ" ಎಂದು ಖರ್ಗೆ ಸಲಹೆ ನೀಡಿದರು.

## ಯೋಜನೆ ನಿಲ್ಲಲ್ಲ : ಡಿ.ಕೆ. ಶಿವಕುಮಾರ್.

ಟೀಕೆಗಳನ್ನು ಮಾಡುತ್ತಿವೆ. ಟೀಕೆಗಳು ಸಾಯುತ್ತವೆ, ಕೆಲಸಗಳು ಉಳಿಯುತ್ತವೆ. ಅದಕ್ಕೆ ನಮ್ಮ ಯೋಜನೆಗಳೇ ಸಾಕ್ಷಿ. ರೈತರ ಬವಣೆ ನೀಗಿಸಲು ರಾಜ್ಯದ ಕೆರೆಗಳನ್ನು ತುಂಬಿಸಲು ಕಾರ್ಯಕ್ರಮ ರೂಪಿಸಲಾಗಿದೆ. ನವಲಿ ಅಣೆಕಟ್ಟು ಯೋಜನೆ ಮಾಡಲು ಚರ್ಚೆ ಮಾಡುತ್ತಿರುವ ಹೊತ್ತಿನಲ್ಲಿಯೇ. ನಮ್ಮ ಪಾಲಿನ 24 ಟಿಎಂಸಿ ನೀರನ್ನು ಏತ ನೀರಾವರಿ ಮೂಲಕ ಕೆರೆಗಳಿಗೆ ತುಂಬಿಸುವ ಕಾರ್ಯಕ್ರಮ ರೂಪಿಸಲಾಗಿದೆ. ಈ ವಿಚಾರವಾಗಿ ಆಂಧ್ರ ಪ್ರದೇಶ ರಾಜ್ಯದ ಜತೆ ಚರ್ಚೆ ಮಾಡಬೇಕಿದೆ. ಈ ಯೋಜನೆ ಮೂಲಕ ನಿಮ್ಮ ರಕ್ಷಣೆ ಮಾಡಲು ನಾವು ಬದ್ಧ ಎಂದು ಭರವಸೆ ನೀಡಿದರು.

ನಮ್ಮ ಸರ್ಕಾರದ ಆಡಳಿತದಲ್ಲಿ ರಾಜ್ಯದಲ್ಲಿ 10 ಲಕ್ಷ ಕೋಟಿ ಬಂಡವಾಳ ಹೂಡಿಕೆಗೆ ಉದ್ಯಮಿಗಳು ಮುಂದಾಗಿದ್ದಾರೆ. ಉದ್ಯೋಗ ಸೃಷ್ಟಿಗೆ ಆದ್ಯತೆ ನೀಡಲಾಗಿದೆ. ಗ್ರಾಮೀಣಾಭಿವೃದ್ಧಿ ಇಲಾಖೆಯ ಮೂಲಕ ಗ್ರಾಮೀಣ ಭಾಗದ ರಸ್ತೆಗಳ ಅಭಿವೃದ್ಧಿಗೆ ಕಲ್ಯಾಣ ಪಥ ಯೋಜನೆ ರೂಪಿಸಲಾಗಿದೆ. ಇದರ ಜತೆಗೆ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸೇರಿದಂತೆ ಎಲ್ಲಾ ಇಲಾಖೆಗಳಲ್ಲಿ ನಮ್ಮ ಸಚಿವರು ಹೊಸ ಯೋಜನೆ ತಂದು ಜನರ ಸೇವೆ ಮಾಡುತ್ತಿದ್ದಾರೆ.

ನಮ್ಮ ಸರ್ಕಾರ ಬಸವಣ್ಣನವರ ಮಾರ್ಗದರ್ಶನದಂತೆ ನಾವು ಕೊಟ್ಟ ಮಾತನ್ನು ಉಳಿಸಿಕೊಂಡಿದ್ದೇವೆ. ನಮ್ಮ ಸರ್ಕಾರದ ಕಾರ್ಯ ಸಾಧನೆಯನ್ನು ವಿರೋಧ ಪಕ್ಷಗಳು ಕಣ್ಣಲ್ಲಿ ನೋಡಲಾಗದೇ, ಟೀಕೆ ಮಾಡುತ್ತಿದ್ದಾರೆ. ಅವರು ಟೀಕೆ ಮಾಡುತ್ತಿರಲಿ, ನಾವು ಜನರ ಬದುಕು ಉಳಿಸುವ ಕೆಲಸ ಮಾಡಿಕೊಂಡು ಹೋಗುತ್ತೇವೆ ಎಂದು ತಿಳಿಸಿದರು.

## ರೆಡ್ ಅಲರ್ಟ ಘೋಷಣೆ

ಏತನ್ಮಧ್ಯೆ, ರಾಜ್ಯ ರಾಜಧಾನಿ ಬೆಂಗಳೂರಿನಲ್ಲೂ ಭಾರಿ ಮಳೆ ಮುಂದುವರೆಯಲಿದೆ ಎಂದು ಐಎಂಡಿ ಮಾಹಿತಿ ನೀಡಿದ್ದು, ಮಂಗಳವಾರ ಬೆಳಿಗ್ಗೆ 8.30 ರಿಂದ ಮಧ್ಯಾಹ್ನ 2.30 ರವರೆಗೆ 0.4 ಮಿಮೀ ಮಳೆ ದಾಖಲಾಗಿದೆ. ದಿನವಿಡೀ ಸ್ಥಿರವಾಗಿ ಮಳೆಯಾಗುತ್ತಿದ್ದರೂ ಬೆಂಗಳೂರು ಇನ್ನೂ ಕಿತ್ತಳೆ ಎಚ್ಚರಿಕೆ ವಿಭಾಗದಲ್ಲಿದೆ ಎಂದು ಹವಾಮಾನ ಇಲಾಖೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಬೆಂಗಳೂರಿನಲ್ಲಿ ಪರಿಸ್ಥಿತಿ ಸ್ಥಿರವಾಗುತ್ತಿದೆ ಎಂದು ಹವಾಮಾನ ತಜ್ಞರು ಹೇಳಿದ್ದು, ವಾಯುವ್ಯ ಬೆಂಗಳೂರಿನ ಕಡೆಗೆ ಗುಡುಗು ಸಹಿತ ಮಳೆ ವೇಗವಾಗಿ ಚಲಿಸುತ್ತಿದೆ. ಮುಂದಿನ ನಾಲ್ಕೈದು ದಿನಗಳಲ್ಲಿ ಕೇರಳದಲ್ಲಿ ಮಾನ್ಸೂನ್ ಆರಂಭವಾಗಲು ಪರಿಸ್ಥಿತಿಗಳು ಅನುಕೂಲಕರವಾಗುವ ಸಾಧ್ಯತೆಯಿದೆ ಎಂದು ಹೇಳಿದೆ.

ಆರ್‌ಸಿಬಿ ಪಂದ್ಯಗಳು ಲಕ್ನೋಗೆ ವರ್ಗಾವಣೆ:

ಇನ್ನು ಬೆಂಗಳೂರಿನಲ್ಲಿ ಭಾರಿ ಮಳೆಯಾಗುತ್ತಿರುವ ಹಿನ್ನಲೆಯಲ್ಲಿ ಬೆಂಗಳೂರಿನ ಎಂ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಬೇಕಿದ್ದ ಐಪಿಎಲ್ ಪಂದ್ಯಗಳನ್ನು ಬಿಸಿಸಿಐ ಉತ್ತರ ಪ್ರದೇಶದ ಲಕ್ನೋದಲ್ಲಿರುವ ಏಕಾನಾ ಕ್ರೀಡಾಂಗಣಕ್ಕೆ ವರ್ಗಾವಣೆ ಮಾಡಿದೆ.

ಹಾಲಿ ಟೂರ್ನಿಯಲ್ಲಿ ಈಗಾಗಲೇ ತಲಾ 17 ಅಂಕಗಳೊಂದಿಗೆ ಆರ್ ಸಿಬಿ ಪ್ಲೇ ಆಫ್ ಹಂತಕ್ಕೇರಿದ್ದು, ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಇದೇ 23ರಂದು ನಡೆಯಬೇಕಿದ್ದ ಸನ್ ರೈಸರ್ಸ್ ಹೈದರಾಬಾದ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಗಳ ನಡುವಿನ ಪಂದ್ಯವನ್ನು ಲಕ್ನೋಗೆ ಶಿಫ್ಟ್ ಮಾಡಲಾಗಿದೆ.

ಈ ಬಗ್ಗೆ ಸ್ವತಃ ಆರ್ ಸಿಬಿ ಅಧಿಕೃತ ಖಾತೆಯಲ್ಲಿ ಮಾಹಿತಿ ನೀಡಿದ್ದು, 'ಬೆಂಗಳೂರಿನಲ್ಲಿ ಪ್ರತಿಕೂಲ ಹವಾಮಾನದಿಂದಾಗಿ, ಐಪಿಎಲ್ ಆಡಳಿತ ಮಂಡಳಿಯು ಇದೇ ಮೇ 23 ರಂದು ಸನ್ ರೈಸರ್ಸ್ ಹೈದರಾಬಾದ್ ವಿರುದ್ಧದ ನಮ್ಮ ತವರು ಪಂದ್ಯವನ್ನು ಲಕ್ನೋದ ಏಕಾನಾ ಕ್ರೀಡಾಂಗಣಕ್ಕೆ ಸ್ಥಳಾಂತರಿಸಲು ನಿರ್ಧರಿಸಿದೆ ಎಂದು ಮಾಹಿತಿ ನೀಡಿದೆ.

## ಮಲ್ಲಿಕಾರ್ಜುನ ಬಿರಾದಾರಗೆ ಕನಕ ಚೇತನ ಪ್ರಶಸ್ತಿ



ಮಲ್ಲಮ್ಮನುಡಿ ವಾರ್ತೆ ಬೀದರ. ಮೇ. 20 : ಬೆಂಗಳೂರಿನ ಕನಕ ಆಫೀಸರ್ಸ್ ಅಕಾಡೆಮಿ ವತಿಯಿಂದ ಕೊಡಲಾಗುವ 'ಕನಕ ಚೇತನ' ಪ್ರಶಸ್ತಿಗೆ ಜಿಲ್ಲೆಯ ಹಿರಿಯ ಪತ್ರಕರ್ತ ಮಲ್ಲಿಕಾರ್ಜುನ ಬಿರಾದಾರ (ಪರಿಹಾರ) ಅವರನ್ನು ಆಯ್ಕೆ ಮಾಡಲಾಗಿದೆ.ಪತ್ರಿಕಾ ರಂಗಕ್ಕೆ ನೀಡಿದ ಕೊಡುಗೆಗಾಗಿ ಅವರಿಗೆ ಪ್ರಶಸ್ತಿ ಒಲಿದು ಬಂದಿದೆ. ಬೆಂಗಳೂರಿನ ಚಂದ್ರಾ ಲೇಔಟ್‌ನ ಕನಕ ಭವನದಲ್ಲಿ ಜೂನ್ 3 ರಂದು ನಡೆಯಲಿರುವ ಸಮಾರಂಭದಲ್ಲಿ ಅಕಾಡೆಮಿ ಪ್ರಶಸ್ತಿ ಪ್ರದಾನ ಮಾಡಲಿದೆ.

ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಗೊಂಡ(ಕುರುಬ) ಸಮಾಜದ ಗಣ್ಯರಿಗೆ ಪ್ರಶಸ್ತಿ ಪ್ರದಾನ ಹಾಗೂ ಯುಪಿಎಸ್‌ಸಿ ಸಾಧಕರಿಗೆ ಸತ್ಕಾರ ಜರುಗಲಿದೆ.

ಮುಖ್ಯಮಂತ್ರಿ, ಸಚಿವರು, ಮಠಾಧೀಶರು ಹಾಗೂ ಗಣ್ಯರು ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.ನಾಲ್ಕು ದಶಕಗಳಿಂದ ಪತ್ರಿಕಾ ರಂಗದಲ್ಲಿ ಸೇವೆ ಸಲ್ಲಿಸುತ್ತಿರುವ ಮಲ್ಲಿಕಾರ್ಜುನ ಬಿರಾದಾರ ಅವರಿಗೆ ಕರ್ನಾಟಕ ರಾಜ್ಯೋತ್ಸವ, ಮಾಧ್ಯಮ ಅಕಾಡೆಮಿ ಪ್ರಶಸ್ತಿ ಸೇರಿದಂತೆ ಅನೇಕ ಪ್ರಶಸ್ತಿ, ಸನ್ಮಾನಗಳು ಸಂದಿವೆ.

## ರಾಷ್ಟ್ರೀಯ ಪುಸ್ತಕ ಪ್ರಶಸ್ತಿಗೆ ಆಯ್ಕೆ



ರಾಯಚೂರು,ಮೇ.20

ರಾಜ್ಯ ದಲಿತ ಸಾಹಿತ್ಯ ಪರಿಷತ್ತು ಕೊಡ ಮಾಡುವ ರಾಷ್ಟ್ರೀಯ ಪುಸ್ತಕ ಪ್ರಶಸ್ತಿಗೆ ಗಂಗಾವತಿ ಎಸಕೆಎನಜಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಮುಮ್ತಾಜ ಬೇಗಂ ಅವರು ಬರೆದಿರುವ ಭೂಮಿ ಬೆಳಕಿನ ಬರಗೂರು ಕಾವ್ಯ ಪುಸ್ತಕವು ರಾಷ್ಟ್ರೀಯ ಪುಸ್ತಕ ಪ್ರಶಸ್ತಿಗೆ ಆಯ್ಕೆಯಾಗಿದೆ.ರಾಯಚೂರಿನಲ್ಲಿ ಜೂನ್ 28 ಮತ್ತು 29 ರಂದು ನಡೆಯಲಿರುವ ಅಖಿಲ ಭಾರತ ದಲಿತ ಸಾಹಿತ್ಯ ಸಮ್ಮೇಳನದಲ್ಲಿ ಈ ಪುಸ್ತಕ ಪ್ರಶಸ್ತಿ ಪ್ರಧಾನ ಮಾಡಲಾಗುವುದು ಎಂದು ರಾಜ್ಯ ದಲಿತ ಸಾಹಿತ್ಯ ಪರಿಷತ್ ಪ್ರಕಟಣೆಯಲ್ಲಿ ತಿಳಿಸಿದೆ.

## ಬೀದರ ವಿಶ್ವವಿದ್ಯಾಲಯದಲ್ಲಿ ಸಂಗೀತ ವಿಭಾಗ ಆರಂಭ: ಕುಲಪತಿ ಡಾ. ಬಿ.ಎಸ್. ಬಿರಾದಾರ



ಬೀದರ:ಮೇ.20:ಜಿಲ್ಲೆಯ ಶೈಕ್ಷಣಿಕ ವರದಾನವಾಗಿರುವ ಬೀದರ ವಿಶ್ವವಿದ್ಯಾಲಯದಲ್ಲಿ ಶೀಘ್ರದಲ್ಲಿ ನೂತನ ಸಂಗೀತ ವಿಭಾಗ ತೆರೆಯಲಾಗುವುದೆಂದು ಬೀದರ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ.ಎಸ್. ಬಿರಾದಾರ ಭರವಸೆ ನೀಡಿದರು. ಅವರು ಗೋರಟಾದ ಶ್ರೀ ಸಂಗೀತ ರುದ್ರೇಶ್ವರ ದೇವಾಲಯದಲ್ಲಿ ನಡೆದ ಶ್ರೀ ಸಂಗೀತ ರುದ್ರೇಶ್ವರ 3ನೇ ಜಾತ್ರಾ, ಪೂಜ್ಯರಾದ ವೀರಮ್ಮ ವಿರೂಪಾಕ್ಷಯ್ಯನವರ 13ನೇ ಪುಣ್ಯಸರಣೋತ್ಸವ, ಕಲ್ಯಾಣ ಕರ್ನಾಟಕ ಪ್ರಾಂತೀಯ 6ನೇ ಸಂಗೀತ ಮಹೋತ್ಸವ ಮತ್ತು ಪಂ. ವಿರೂಪಾಕ್ಷ ಸಮ್ಮಾನ್ ರಾಷ್ಟ್ರೀಯ ಪ್ರಶಸ್ತಿ ಸಮಾರಂಭದಲ್ಲಿ ಶ್ರೀ ಡಾ॥ ರಾಜಶೇಖರ ಶಿವಾಚಾರ್ಯರು ನಾಂದಿ ನುಡಿಯಲ್ಲಿ ಪ್ರಸ್ತಾಪಿಸಿದ ಬೀದರ ವಿ.ವಿ.ಯಲ್ಲಿ ಸಂಗೀತ ವಿಭಾಗ ತೆರೆಯಬೇಕೆಂಬ ಬೇಡಿಕೆಯನ್ನು ಮನ್ನಿಸಿ ಮೇಲಿನಂತೆ ನುಡಿದರು.

ಗೋರಟಾ ಚರಿತ್ರೆ ಬಹಳ ದೊಡ್ಡದು. ಇದು ಕಲೆ, ಸಾಹಿತ್ಯ, ಸಂಗೀತ ಬೀಡು, ಇಂದಿನ ವಿಶ್ವವಿದ್ಯಾಲಯ ಮಾದರಿಯಲ್ಲಿ ಘಟಿಕಾ ಸ್ಥಾನ ಹೊಂದಿದ್ದ ಕೇಂದ್ರ. ರಾಜಪೂಜಿತ ರುದ್ರೇಶ್ವರ ದೇವರ ಪ್ರತೀಕವಾಗಿ ಇಂದು ಪೂಜ್ಯ ಪಂ. ವಿರೂಪಾಕ್ಷ ಸ್ವಾಮಿಗಳ ಸತ್ ಸಂಕಲ್ಪದಂತೆ ಶ್ರೀ ಸಂಗೀತ ರುದ್ರೇಶ್ವರ ವಿರಾಜಮಾನವಾಗಿರುವುದು ನಮ್ಮೆಲ್ಲರ ಸೌಭಾಗ್ಯ ದೇಶಕ್ಕೆ ಸಂಗೀತ ಶ್ರೀ ರುದ್ರ ಬೆಳಕನ್ನಿತ್ತ ಪೂಜ್ಯ ವಿರೂಪಾಕ್ಷಯ್ಯನವರ ಸಂಸ್ಮರಣಾರ್ಥ ಪಂ. ವಿರೂಪಾಕ್ಷ ಸಮ್ಮಾನ್ ರಾಷ್ಟ್ರೀಯ ಪ್ರಶಸ್ತಿಗೆ ಭಾಜನವಾಗಿರುವುದು ನನ್ನ ಭಾಗ್ಯ ನನ್ನ ಉತ್ಸಾಹ ನೂರ್ಮಡಿಯಾಗಿದೆ. ನನ್ನ ಒಂದು ವರ್ಷದ ಅವಧಿ ಮುಗಿಯುವುದರೊಳಗಾಗಿ ವಿಶ್ವವಿದ್ಯಾಲಯದಲ್ಲಿ ಸಂಗೀತ ವಿಭಾಗ ಖಂಡಿತವಾಗಿ ತೆರೆಯಲಾಗುವುದು. ಶ್ರೀಶೈಲದ ಪೂಜ್ಯ ಶ್ರೀ ಕರುಣಾದೇವಿ ಮಾತಾ ಹಾಗೂ ಗೋರಟಾ ಪೂಜ್ಯ ಗುರುಗಳಿಂದ ಉದ್ಘಾಟಿಸಲಾಗುವುದು ಎಂದು ಹೇಳಿದರಲ್ಲೇ ಸಂಗೀತಜ್ಞ ಡಾ॥ ಸಿದ್ಧರಾಮಯ್ಯ ಸ್ವಾಮಿ ಗೋರಟಾ ಆದಿಯಾಗಿ ಜಿಲ್ಲೆಯ ನುರಿತ ಕಲಾವಿದರ ಸೇವೆಯನ್ನು ಬಳಸಿಕೊಳ್ಳಲಾಗುವುದು ಎಂದು ಡಾ॥ ಬಿ.ಎಸ್. ಬಿರಾದಾರ ಹೇಳಿದರು.


ಅಭಿನಂದನಾ ನುಡಿ ಸೇವೆಯನ್ನು ಮಾಡಿದ ಬೀದರ ವಿಶ್ವವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥರಾದ ಡಾ॥ ರಾಮಚಂದ್ರ ಗಣಾಪುರ ಮಾತನಾಡಿ ಗೋರಟಾ ಇತಿಹಾಸ ಪುಟಗಳಲ್ಲಿ ಚಿರಸ್ಥಾಯಿಯಾಗಿ ಹೆಸರು ಪಡೆದಿದೆ. ನಾಡಿನ ಕಲೆ, ಸಾಹಿತ್ಯ, ಸಂಗೀತಕ್ಕೆ ಅಪೂರ್ವ ಕೊಡುಗೆ ನೀಡಿದೆ. ಅಷ್ಟೇ ಅಲ್ಲ ಕಲ್ಯಾಣ ಕರ್ನಾಟಕ ವಿಮೋಚನಾ ಚಳುವಳಿಗೆ ತಾಯಿ ನೆಲವಾಗಿ ಸ್ವಾತಂತ್ರ ಹೋರಾಟಗಾರರ ಹುತಾತ್ಮರ ವೀರಭೂಮಿಯಾಗಿಯೂ ಪ್ರಸಿದ್ಧ ಪಡೆದಿದೆ. ಇದರ ಚರಿತ್ರೆ ಎಂದರೆ ಕಲ್ಯಾಣ ಕರ್ನಾಟಕ ಭಾಗದ ಚರಿತ್ರೆ ಎನ್ನುವಷ್ಟರ ಮಟ್ಟಿಗೆ ಸುವಿಖ್ಯಾತವಾಗಿದೆ. ಸಂಗೀತ ರುದ್ರ ಪಿತಾಮಹ ಪೂಜ್ಯ ವಿರೂಪಾಕ್ಷಯ್ಯ ಸ್ವಾಮಿಗಳವರು ಜಿಲ್ಲೆಯ ಸಂಗೀತದ ಅದ್ವೈರ್ಯರು, ಜಿಲ್ಲೆಯ ಮೊದಲ ಸಂಗೀತ ಸ್ನಾತುಕೋತ್ತರ ಪದವಿಧರರು. ಅವರ ಜೀವನ ಚರಿತ್ರೆ ಎಂದರೆ ಜಿಲ್ಲೆಯ ಚರಿತ್ರೆಯ ಭಾಗವಾಗಿ ಅವರ ಜೀವನ ಸಂದೇಶ ನಾಡಿಗೆ ಅಮರ ಸಂದೇಶವಾಗಿದೆ. ಅವರು ಬರೆದ ಭುಲಾಯಿಪದ ಬೀದರ ಜಿಲ್ಲೆಯ ಪ್ರಥಮ ಕೃತಿಯಾಗಿದೆ. ಇಂದು ಪಂ. ವಿರೂಪಾಕ್ಷಯ್ಯ ಸ್ವಾಮಿಗಳು ತಮ್ಮ ಸಂಗೀತ ಶ್ರೀ ರುದ್ರದ ಮುಖಾಂತರ ಜನ್ಮಭೂಮಿಗೂ ನಾಡಿಗೂ ಬಹುದೊಡ್ಡ ಕೀರ್ತಿಯನ್ನು ತಂದಿರುವ ಕೀರ್ತಿ ಪುರುಷರಾಗಿದ್ದು ಅವರ ಅಪೂರ್ವ ಕೊಡುಗೆ ನಾಡವರಿಗೆ ತಿಳಿಸುವ ಪ್ರಯತ್ನ ಇನ್ನೂ ಹೆಚ್ಚು ಹೆಚ್ಚಾಗಿ ಈ ಸಂಗೀತ ರುದ್ರೇಶ್ವರ ಮಹಾ ಸಂಸ್ಥಾನದಿಂದ ನಡೆಯಲೆಂದು ಆಶಿಸುತ್ತೇನೆಂದು ಅವರು ಹೇಳಿದರು.

ಇನ್ನೊವರ ಪ್ರಶಸ್ತಿ ಪುರಸ್ಕೃತ ನಾಡಿನ ಖ್ಯಾತ ಹಿರಿಯ ಗಾಯಕರಾದ ಬೀದರಿನ ಪಂ. ರಾಮುಲು ಗಾದಗಿ ಮಾತನಾಡಿ ಸಂಗೀತ ರುದ್ರ ಸಾರ್ವಭೌಮ ಪೂಜ್ಯ ಪಂ. ವಿರೂಪಾಕ್ಷ ಸ್ವಾಮಿಗಳು ದೇಶಕಂಡ ಶ್ರೇಷ್ಠ ಸಂಗೀತಗಾರರು. ಅವರು ಸಂಗೀತಗಾರರಿಗೆ ಮಾದರಿ ಮತ್ತು ಆದರ್ಶರಾಗಿದ್ದರು. ಹೃದಯವಂತ, ಆಚಾರವಂತ ಧೀಮಂತ ಕಲಾವಿದರು. ಗುರುವಿನ ಸದೀಚ್ಛೆಯಂತೆ ಹುಡುಕಿ ಬಂದ ಸರಕಾರಿ ಸಂಗೀತ ಅಧ್ಯಾಪಕ ನೌಕರಿಯನ್ನು ಬದಿಗೊತ್ತಿ. ರುದ್ರಮಂತ್ರಗಳಿಗೆ ಸಂಗೀತ ಸಂಯೋಜಿಸಿ ವಿನೂತನ ರುದ್ರ ಸಂಗೀತಕ್ಕೆ ಜನ್ಮ ನೀಡಿದ ಮಂತ್ರನಾದಯೋಗಿ. ನನ್ನ ಸಂಗೀತ ಜೀವನದಲ್ಲಿ ಅನೇಕ ಪ್ರಶಸ್ತಿಗಳು ಬಂದಿವೆ ಈ ಎಲ್ಲ ಪ್ರಶಸ್ತಿಗಳಿಗೆ ಇದು ಮುಕುಟ ಪ್ರಾಯ ನನ್ನಲ್ಲಿ ಧನ್ಯತಾಭಾವ ಒಡಮೂಡಿದೆ. ಬದುಕು ಸಾರ್ಥಕವಾಗಿದೆ. ಸಂಗೀತ ಕೃಪೆ ಎಲ್ಲ ಕಲಾವಿದರ ಮೇಲಿರಲಿ ಎಂದು ಅವರು ಪ್ರಾರ್ಥಿಸಿದರು.

ಮುಖ್ಯ ಅತಿಥಿಗಳಾಗಿ ರಾಜ್ಯ ದಿಶಾ ಸಮಿತಿಯ ಸದಸ್ಯರಾದ ಶಿವಯ್ಯ ಸ್ವಾಮಿ ಮಾತನಾಡಿ ಗೋರಟಾ ಸಂಗೀತ ರುದ್ರೇಶ್ವರ ಮಹಾಸಂಸ್ಥಾನ ಇತಿಹಾಸ ಮತ್ತು ವರ್ತಮಾನದ ಸಂಗಮವಾಗಿದೆ. ನಾಡಿನ ಸಂಗೀತ ಕನ್ನಡ ಸಂಸ್ಕೃತಿಗೆ ಅಪಾರ ಕೊಡಿಗೆಯನ್ನು ನೀಡುತ್ತಿದ್ದು ರಾಜ್ಯ ಸರ್ಕಾರ ಇಂತಹ ಸಂಸ್ಥೆಗಳಿಗೆ ಬೆನ್ನೆಲುಬಾಗಿ ನಿಲ್ಲಬೇಕೆಂದು ಅಭಿಪ್ರಾಯ ವ್ಯಕ್ತಪಡೆದಿದರು.

ಮಹಾಸಂಸ್ಥಾನದ ಉಪಾಧ್ಯಕ್ಷರಾದ ಪ್ರಸಿದ್ಧ ಸಂಗೀತಗಾರರು ವಾಗ್ಗೇಯ ಕಾರರಾದ ಡಾ॥ ಸಿದ್ಧರಾಮಯ್ಯ ಸ್ವಾಮಿ ರುದ್ರಮಠರು ಎಲ್ಲರನ್ನೂ ಸ್ವಾಗತ ಕೋರಿ, ಗೋರಟಾ, ಚರಿತ್ರೆ ಸಂಗೀತ ರುದ್ರ ಪರಂಪರೆ, ಸಂಗೀತ ಕೊಡುಗೆಗಳ ಕುರಿತು ಸಾಧಾರವಾಗಿ ವಿವರಿಸಿದರು. ಸಮಾರಂಭದ ದಿವ್ಯ ಸಾನಿಧ್ಯವನ್ನು ವಹಿಸಿ ಎಲ್ಲರ ಆಗ್ರಹದಂತೆ ಪೂಜ್ಯ ಕರುಣಾದೇವಿ ಮಾತಾ ಶ್ರೀಶೈಲ ಅವರು ಗೀತ ಗಾಯನ ಮಾಡಿ ಆಶೀರ್ವದಿಸಿದರು. ಸಂಸ್ಥೆಯ ಅಧಿಪತಿಗಳಾದ ಪೂಜ್ಯ ಶ್ರೀ ಡಾ॥ ರಾಜಶೇಖರ ಶಿವಾಚಾರ್ಯರು ನೇತೃತ್ವ ವಹಿಸಿ ನಾಂದಿ ನುಡಿ ಹೇಳಿದರು, ಉದಗೀರದ ಖ್ಯಾತ ಉದ್ಯಮಿ ದಿಗಂಬರ ಬಿರಾದಾರ, ಭೂದಾನಿ ಕಮಳಾಬಾಯಿ ಅಕ್ಕಣ್ಣ, ನಾಗರಾಜ ಸ್ವಾಮಿ ಸೇಡಂ, ನಾಗಶೆಟ್ಟಿ ಪಾಟೀಲ ಕರಬಸಪ್ಪ ಅಕ್ಕಣ್ಣ ಮುಂತಾದವರು ಇದ್ದರು. ಬಸವರಾಜ ಹಾಲಹಳ್ಳಿ ನಿರೂಪಿಸಿದರು, ಕಂಟೆಪ್ಪ ಭಂಗೂರೆ ವಂದಿಸಿದರು.

## 371ನೇ(ಜೆ) ಕಲಂ ಜಾರಿಗೆ ಬಂದ ಇತಿಹಾಸ ವಿದ್ಯಾರ್ಥಿಗಳು ಮರೆಯಬಾರದು: ಅಲ್ಲಂಪ್ರಭು ಪಾಟೀಲ್



ಕಲಬುರಗಿ:ಮೇ.20:ಹಿಂದುಳಿದ ಕಲ್ಯಾಣ ಕರ್ನಟಕ ಪ್ರದೇಶಕ್ಕೆ ಸಂವಿಧಾನದ 371ನೇ ಕಲಂ ತಿದ್ದುಪಡಿ ಮಾಡಿ ಜಾರಿಗೆ ಮಾಡಲು ಕೇಂದ್ರ ಸರಕಾರದ ಮೇಲೆ ಒತ್ತಡ ತರಲು ನಿರಂತರ ಹೋರಾಟಗಳನ್ನು ಮಾಡಿರುವ ಹೋರಾಟಗಾರರನ್ನು, ಅದರಂತೆ ವಿಶೇಷ ಸ್ಥಾನಮಾನದ ಅನುಷ್ಠಾನಕ್ಕೆ ಬಲವಾದ ರಾಜಕೀಯ ಇಚ್ಛಾಶಕ್ತಿ ವ್ಯಕ್ತಪಡಿಸಿದ ನಾಯಕರ ಇತಿಹಾಸ ವಿದ್ಯಾರ್ಥಿಗಳು ಮರೆಯಬಾರದು ಎಂದು ಕಲಬುರಗಿ ದಕ್ಷಿಣ ಮತಕ್ಷೇತ್ರದ ಶಾಸಕರಾದ ಅಲ್ಲಂಪ್ರಭು ಪಾಟೀಲ್ ಗಂಭೀರವಾಗಿ ಒತ್ತಿ ಹೇಳಿದರು. ಕಲ್ಯಾಣ ಕರ್ನಾಟಕ ಕ್ರಿಶ್ಚಿಯನ್ ಶಿಕ್ಷಣ ಮೇಳ, ಮತ್ತು ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಹೆಚ್ಚಿನ ಅಂಕ ಪಡೆದು ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಗೌರವ ಸನ್ಮಾನ ಕಾರ್ಯಕ್ರಮವನ್ನು ನಗರದ ಸೆಂಟ್ ಮೇರಿ ಸಭಾಂಗಣದಲ್ಲಿ ಕ್ರಿಶ್ಚಿಯನ್ ಸಮಾಜದ ವತಿಯಿಂದ ನಿಯೋಜಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ 371ನೇ ಕಲಂ ಜಾರಿಗೆ ನಿರಂತರ ಹೋರಾಟದಲ್ಲಿ ತೊಡಗಿಸಿಕೊಂಡ ಹಿರಿಯ ಹೋರಾಟಗಾರರಾದ ಡಾ. ಲಕ್ಷ್ಮಣ ದಸ್ತಿಯವರಿಗೆ ಗೌರವ ಸನ್ಮಾನ ಸಲ್ಲಿಸಿ ಮಾತನಾಡಿದ ಶಾಸಕರಾದ ಅಲ್ಲಂಪ್ರಭು ಪಾಟೀಲರವರು, ದಿ. ವೈಜನಾಥ ಪಾಟೀಲ್ ಸೇರಿದಂತೆ ಡಾ. ಲಕ್ಷ್ಮಣ ದಸ್ತಿಯವರು ಪಕ್ಷಾತೀತವಾಗಿ ಎಲ್ಲಾ ಪಕ್ಷಗಳ, ಸಂಘ ಸಂಸ್ಥೆಗಳ, ಸಂಘಟನೆಗಳ ಸಹಯೋಗದಿಂದ ದಶಕಗಳ ಕಾಲ ಹೋರಾಟ ನಡೆಸಿ, ಮಹತ್ವದ ಬೇಡಿಕೆಯ ವಿಷಯಕ್ಕೆ ಜನಾಭಿಪ್ರಾಯ ಮೂಡಿಸುವ ಮೂಲಕ ರಾಜ್ಯ ಮತ್ತು ರಾಷ್ಟ್ರ ಮಟ್ಟಕ್ಕೆ ಕೂಗು ಮುಟ್ಟಿಸಿರುವುದು ಇತಿಹಾಸ ಸಾಕ್ಷಿಯಾಗಿದೆ. ಈ ಹೋರಾಟಕ್ಕೆ ಸ್ಪಂದಿಸಿ ಮಲ್ಲಿಕಾರ್ಜುನ ಖರ್ಗೆಯವರು, ಧರಮ್‌ಸಿಂಗ್ ಅವರನ್ನು ಜೊತೆಗಿಟ್ಟುಕೊಂಡು 371ನೇ ಕಲಂ ಜಾರಿಗೆ ತರುವಲ್ಲಿ ಮಹತ್ತರ ಪಾತ್ರ ವಹಿಸಿ ವಿಶೇಷ ಮುತುವರ್ಜಿಯಿಂದ ಬಲವಾದ ರಾಜಕೀಯ ಇಚ್ಛಾಶಕ್ತಿ ವ್ಯಕ್ತಪಡಿಸಿದ ಕಾರಣವೇ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಸಂವಿಧಾನದ 371ನೇ(ಜೆ) ಕಲಂ ಜಾರಿಗೆ ಬಂದಿದೆ. ಕಲ್ಯಾಣ ಕರ್ನಾಟಕದ ಈ ಮಹತ್ವದ ಇತಿಹಾಸ ವಿದ್ಯಾರ್ಥಿಗಳು ಎಂದಿಗೂ ಮರೆಯಬಾರದು ಎಂದು ಹೇಳಿದ ಅವರು ಕಲ್ಯಾಣ ಕರ್ನಾಟಕ ಶಿಕ್ಷಣ ಮೇಳ ಪ್ರಸ್ತುತ ಸಂದರ್ಭದಲ್ಲಿ ಕ್ರಿಶ್ಚಿಯನ್ ಸಮಾಜ ಹಮ್ಮಿಕೊಂಡಿದ್ದು

# ಸಕಾಲದಲ್ಲಿ ಪುರಸಭೆಯ ತೆರಿಗೆ ಪಾವತಿಸಿ ಶೇಕಡಾ 5% ರಿಯಾಯಿತಿ ಪಡೆಯಿರಿ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಸರ್ಕಾರದ ಅಧೀನ ಕಾರ್ಯದರ್ಶಿಗಳು ನಗರಾಭಿವೃದ್ಧಿ ಇಲಾಖೆ ಬೆಂಗಳೂರು ಇವರ ಆದೇಶದಂತೆ ಪಟ್ಟಣದ ಎಲ್ಲಾ ಸಾರ್ವಜನಿಕರು ಪ್ರಸ್ತುತ ವರ್ಷದ 2025–26ನೇ ಸಾಲಿನ ತಮ್ಮಗೆ ಸಂಬಂಧಿಸಿದ ಆಸ್ತಿಯ ತೆರಿಗೆಯನ್ನು ದಿನಾಂಕ: 30–06–2025ರ ಒಳಗೆ ಪಾವತಿಸಿ ಸರ್ಕಾರದಿಂದ



ಆಸ್ತಿ ತೆರಿಗೆಯಲ್ಲಿ ಶೇ.5%ರಷ್ಟು

ರಿಯಾಯಿತಿಯ ಸದುಪಯೋಗ ಪಡೆದುಕೊಳ್ಳಬೇಕು ಹಾಗೂ ಈ ಹಿಂದಿನ ವರ್ಷ ಆಸ್ತಿ ತೆರಿಗೆ, ನೀರಿನ ತೆರಿಗೆ ಮತ್ತು ಉದ್ದಿಮೆ ಪರವಾನಿಗೆ ತೆರಿಗೆಯನ್ನು ಕೂಡ ಪಾವತಿಸಿ ಪಟ್ಟಣದ ಅಭಿವೃದ್ಧಿಗೆ ಸಹಕರಿಸಬೇಕೆಂದು ಪುರಸಭೆ ಮುಖ್ಯಾಧಿಕಾರಿ ಹುಸಾಮೋದ್ದೀನ್ ಬಾಬಾ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಸತಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಕ್ಕೆ ಕ್ರಮವಹಿಸಲು ಸಿಂಗ್ ಸೂಚನೆ




ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ.20– ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಮತ್ತು ನಂತರ ಹಾಗೂ ಪದವಿ ಪೂರ್ವ ಮತ್ತು ನಂತರದ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳ ಅಗತ್ಯಕ್ಕೆ ತಕ್ಕಂತೆ ಬೆಡ್ ಮತ್ತು ಕಾಟ್ ಸೇರಿದಂತೆ ಎಲ್ಲ ರೀತಿಯ ಮೂಲಭೂತ ಸೌಕರ್ಯ ಕಲ್ಪಿಸಲು ಕೂಡಲೇ ಅಗತ್ಯ ಕ್ರಮ ವಹಿಸಬೇಕು ಎಂದು ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆಗಿರುವ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶ್ ಕುಮಾರ್ ಸಿಂಗ್ ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ 2025–26ನೇ ಸಾಲಿನ ಜಿಲ್ಲಾ ಪಂಚಾಯತ್ ಜಿಲ್ಲಾ ವಲಯ ಕಾರ್ಯಕ್ರಮಗಳ ವಾರ್ಷಿಕ ಕ್ರಿಯಾ ಯೋಜನೆಗಳ ಪರಿಶೀಲನೆ ಮತ್ತು ಅನುಮೋದನೆ ನೀಡುವ ಕುರಿತು ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಮೇ 19ರಂದು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವೃತ್ತಿಪರ ಕೋರ್ಸಗಳ ವಸತಿ ನಿಲಯಗಳು ಸೇರಿದಂತೆ ರಾಯಚೂರ ಜಿಲ್ಲೆಯಲ್ಲಿ ಇಲಾಖಾವಾರು ಇರುವ ವಸತಿ ನಿಲಯಗಳು, ಅಲ್ಲಿನ ವಿದ್ಯಾರ್ಥಿಗಳ ಸಂಖ್ಯೆ, ಮೂಲಭೂತ ಸೌಕರ್ಯದ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದ ಕಾರ್ಯದರ್ಶಿಗಳು, ಕ್ಷೇತ್ರ ಭೇಟಿ ವೇಳೆ ಬಿಸಿಎಂ ಇಲಾಖೆಯ ಅಧೀನದ ಕೆಲವು ವಸತಿ ನಿಲಯಗಳಲ್ಲಿ ಕಾಟ್ ಮತ್ತು ಬೆಡ್ ಇಲ್ಲದಿರುವುದರ ಬಗ್ಗೆ ಖುದ್ದು ವೀಕ್ಷಣೆ ಮಾಡಿ ಗಮನಿಸಿದ್ದೇನೆ. ಇದಕ್ಕಾಗಿ ಅನುದಾನ ಮೀಸಲಿರಿಸಿ ಟೆಂಡರ್ ಪ್ರಕ್ರಿಯೆ ನಡೆಸಿ ಕೂಡಲೇ ವ್ಯವಸ್ಥೆ ಮಾಡಬೇಕು. ಕಾಟಗಳು ಇಲ್ಲದೇ ಚಾಪೆ ಮೇಲೆ ಮಕ್ಕಳು ಮಲಗದಂತೆ, ಎಲ್ಲ ಮೂಲಸೌಕರ್ಯಗಳು ಲಭ್ಯವಾಗುವ ಹಾಗೆ ವಸತಿ ನಿಲಯಗಳ ಮೇಲೆ ಸೂಕ್ತ ಮೇಲ್ವಿಚಾರಣೆ ನಡೆಸಬೇಕು ಎಂದು ಬಿಸಿಎಂ, ಸಮಾಜ ಕಲ್ಯಾಣ ಇಲಾಖೆ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳಿಗೆ ಕಾರ್ಯದರ್ಶಿಗಳು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಮರಣ ಪ್ರಮಾಣ ಶೂನ್ಯಕ್ಕಿಳಿಯಲಿ: ರಾಜ್ಯದ ಯಾವುದೇ ಕಡೆಗಳಲ್ಲಿ ಗರ್ಭಿಣಿಯರು ಮತ್ತು ಶಿಶುಗಳು ಮರಣ ಆಗದಂತೆ ಸಾಕಷ್ಟು ಮುನ್ನೆಚ್ಚರಿಕೆ ವಹಿಸಬೇಕು ಎಂಬುದು ಮಾನ್ಯ ಮುಖ್ಯಮಂತ್ರಿಗಳು ಮತ್ತು ಮುಖ್ಯ ಕಾರ್ಯದರ್ಶಿಯವರ ಸೂಚನೆಯಾಗಿದೆ. ಹೀಗಾಗಿ ಜಿಲ್ಲೆಯ ಎಲ್ಲ ಪ್ರಾಥಮಿಕ, ಸಮುದಾಯ ಸೇರಿದಂತೆ ಎಲ್ಲಾ ಆಸ್ಪತ್ರೆಗಳಲ್ಲಿ ಗರ್ಭಿಣಿಯರ ಮತ್ತು ಶಿಶು ಆರೋಗ್ಯದ ಕಡೆ ಹೆಚ್ಚಿನ ಗಮನ ಕೊಡಬೇಕು. ನಿರ್ಲಕ್ಷ ಮಾಡಬಾರದು. ಜಿಲ್ಲೆಯ ಎಲ್ಲಾ ಕಡೆಗಳಲ್ಲಿ ಗರ್ಭಿಣಿಯರಿಗೆ ಸಕಾಲಕ್ಕೆ ಸೂಕ್ತ ಚಿಕಿತ್ಸೆ ಲಭ್ಯವಾಗುವಂತೆ ಕಟ್ಟುನಿಟ್ಟಿನ ಮೇಲ್ವಿಚಾರಣೆ ಮಾಡಬೇಕು ಎಂದು ಕಾರ್ಯದರ್ಶಿಗಳು ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ರಾಯಚೂರ ಜಿಲ್ಲೆಯಲ್ಲಿ ಗರ್ಭಿಣಿಯರ ಮರಣ ಪ್ರಕರಣಗಳು ಸಂಭವಿಸದಂತೆ ಮುನ್ನೆಚ್ಚರಿಕೆ ಕ್ರಮವಾಗಿ

ವಿಶೇಷ ತಜ್ಞವೈದ್ಯರ ತಂಡವೊಂದು ಈ ಬಗ್ಗೆ ನಿಗಾವಹಿಸಿ ಕಾರ್ಯನಿರ್ವಹಿಸುತ್ತಿದೆ. ತುರ್ತು ಚಿಕಿತ್ಸೆ ಅವಶ್ಯಕತೆ ಕಾಣಿಸುವ ಗರ್ಭಿಣಿಯರನ್ನು ಕೂಡಲೇ ಜಿಲ್ಲಾಸ್ಪತ್ರೆಗೆ ದಾಖಲು ಮಾಡಿ ಕ್ರಮವಹಿಸಲಾಗುತ್ತಿದೆ. ತಾಯಂದಿರ ಮರಣ ತಡೆಗೆ ಸಂಬಂಧಿಸಿದಂತೆ ನರ್ಸಗಳಿಗೆ ತರಬೇತಿಗೆ ವ್ಯವಸ್ಥೆ ಮಾಡಲಾಗಿದೆ ಎಂದು ಇದೆ ವೇಳೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ತಿಳಿಸಿದರು.

ಸಿಎಸ್‌ಆರ್ ಫಂಡನಲ್ಲಿ 8 ಡಯಾಲಿಸಿಸ್ ಮಸೀನ್ ಖರೀದಿಸಲಾಗಿದೆ. ತಾಯಂದಿರ ಮರಣ ತಗ್ಗಿಸುವ ಭಾಗವಾಗಿ ಉಪ ಕೇಂದ್ರಗಳಲ್ಲಿ ಈಗಾಗಲೇ ಜಾಗೃತಿ ಕಾರ್ಯಕ್ರಮ ನಡೆಸಲಾಗಿದೆ. ಕಳೆದ ವರ್ಷ ಲಿಂಗಸೂರ ತಾಲೂಕಿನಲ್ಲಿ ಮಲೇರಿಯಾ ಪ್ರಕರಣಗಳು ವರದಿಯಾಗಿದ್ದವು. ಈ ಬಾರಿ ಯಾವುದೇ ಕಡೆಗಳಲ್ಲಿ ಮಲೇರಿಯಾ, ಚಿಕೂನ್‌ಗುನ್ಯ, ಡೆಂಗೆ ಪ್ರಕರಣಗಳು ವರದಿಯಾಗಿಲ್ಲ. ದೇವದುರ್ಗ ತಾಲೂಕಿನ ಬಹುತೇಕ ಪ್ರಾಥಮಿಕ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ತಜ್ಞ ವೈದ್ಯರ ಕೊರತೆಯಾಗಿದೆ ಎಂದು ಡಿಎಚ್‌ಓ ಅವರು ಸಭೆಗೆ ಮಾಹಿತಿ ನೀಡಿದರು.

ಫಲಿತಾಂಶ ಸುಧಾರಣೆಗೆ ಒತ್ತು ಕೊಡಿ: 2023–24 ಮತ್ತು 2024–25ನೇ ಸಾಲಿನ ಎರಡು ವರ್ಷದಲ್ಲಿ ದೇವದುರ್ಗ ತಾಲೂಕಿನಲ್ಲಿ ಶೇ.52.37., ಲಿಂಗಸೂರ ತಾಲೂಕಿನಲ್ಲಿ ಶೇ.48.37., ಮಾನವಿ ತಾಲೂಕಿನಲ್ಲಿ ಶೇ.46.94ರಷ್ಟು, ರಾಯಚೂರ ತಾಲೂಕಿನಲ್ಲಿ ಶೇ.44.81 ರಷ್ಟು ಮತ್ತು ಸಿಂಧನೂರ ತಾಲೂಕಿನಲ್ಲಿ ಶೇ.64.43ರಷ್ಟು ಮಕ್ಕಳು ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ತೇರ್ಗಡೆಯಾಗಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು. 20023–24ರಲ್ಲಿ ಜಿಲ್ಲೆಯ ಒಟ್ಟಾರೆ ಫಲಿತಾಂಶ ಶೇ.63.49ರಷ್ಟು ಇತ್ತು. 2024–25ನೇ ಸಾಲಿನಲ್ಲಿ ಶೇ.52.05ಕ್ಕೆ ಕುಸಿದಿದೆ. ಈ ಫಲಿತಾಂಶ ಕುಸಿತಕ್ಕೆ ಏನು ಕಾರಣ ಎಂಬುದನ್ನು ಪತ್ತೆ ಹಚ್ಚಬೇಕು. ಈ ವಿಷಯದ ಬಗ್ಗೆ ಎಲ್ಲ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು ವಿಶೇಷ ಗಮನ ಹರಿಸಬೇಕು. ಇನ್ನುಳಿದ ಶಿಕ್ಷಣ ಇಲಾಖೆಯ ಅಧಿಕಾರಿಗಳು ಕಾಳಜಿಯಿಂದ ಕಾರ್ಯನಿರ್ವಹಿಸಬೇಕು ಎಂದು ಕಾರ್ಯದರ್ಶಿಗಳು ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಇತ್ತೀಚೆಗೆ ನಡೆದ ಪರೀಕ್ಷೆಯಲ್ಲಿ ಅನುತ್ತೀರ್ಣಗೊಂಡ ವಿದ್ಯಾರ್ಥಿಗಳು ಮರುಪರೀಕ್ಷೆಗಾಗಿ ಈಗಾಗಲೇ ಶೇ.100 ರಷ್ಟು ನೋಂದಣಿ ಮಾಡಿದ್ದಾರೆ. ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ವಿಶೇಷ ತರಗತಿಗಳನ್ನು ನಡೆಸಲಾಗುತ್ತಿದೆ ಎಂದು ಡಿಡಿಪಿಐ ಬಡಿಗೇರ ಅವರು ಕಾರ್ಯದರ್ಶಿಗಳಿಗೆ ಮಾಹಿತಿ ನೀಡಿದರು.

ಕ್ರಿಯಾ ಯೋಜನೆ ಪರಿಶೀಲನೆ: 2025–26ನೇ ಸಾಲಿನ ಜಿಲ್ಲಾ ವಲಯ ಕಾರ್ಯಕ್ರಮಗಳ ವಿವಿಧ ಇಲಾಖೆಗಳ ಸಿವಿಲ್ ಕಾಮಗಾರಿಗಳ ಕ್ರಿಯಾ ಯೋಜನೆಯ ಬಗ್ಗೆ ಇದೆ ವೇಳೆ ಕಾರ್ಯದರ್ಶಿಗಳು ಆಯಾ ಇಲಾಖೆಯ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಕ್ರಿಯಾಯೋಜನೆಗೆ ಅನುಮೋದನೆ: 2025–26ನೇ ಸಾಲಿನ ಜಿಲ್ಲಾ ಪಂಚಾಯತ್ ಜಿಲ್ಲಾ ವಲಯ ಕಾರ್ಯಕ್ರಮಗಳ ವಾರ್ಷಿಕ ಕ್ರಿಯಾ ಯೋಜನೆಗಳ ಬಗ್ಗೆ ಇದೆ ವೇಳೆ ಪರಿಶೀಲನೆ ನಡೆಸಿದ ಕಾರ್ಯದರ್ಶಿಗಳು ಸಭೆಯಲ್ಲಿ ಅನುಮೋದನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ, ರಾಯಚೂರ ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೋಹಪತ್ರ, ಸಹಾಯಕ ಆಯುಕ್ತರಾದ ಗಜಾನನ ಬಾಳೆ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಇದ್ದರು.

# ಇಂಡಿ ಬಸ್ ನಿಲ್ದಾಣದಲ್ಲಿ ಬಸ್ ಗಳಿಲ್ಲದೆ ಪರದಾಡಿದ ಪ್ರಯಾಣಿಕರು

ಮಲ್ಲಮ್ಮ ನುಡಿ ವಾರ್ತೆ

ಇಂಡಿ :ಮೇ.20: ರಾಜ್ಯ ಸರಕಾರದಿಂದ ವಿಜಯನಗರ ಜಿಲ್ಲೆ ಹೊಸಪೇಟೆಯಲ್ಲಿ ನಡೆಯುತ್ತಿರುವ ಸಾಧನಾ ಸಮಾವೇಶ ಹಾಗೂ ಹಕ್ಕುಪತ್ರ ವಿತರಣೆ ಕಾರ್ಯಕ್ರಮ ಹಿನ್ನಲೆಯಲ್ಲಿ ಇಂಡಿ ತಾಲೂಕುನಿಂದ ಹೆಚ್ಚಿನ ಪ್ರಮಾಣದಲ್ಲಿ ಸಮಾವೇಶಕ್ಕೆ ಬಸಗಳು ಸಂಚಾರಿಸುತ್ತಿರುವ ಹಿನ್ನಲೆಯಲ್ಲಿ ಇಂಡಿ ಬಸ್ ನಿಲ್ದಾಣದಲ್ಲಿ ಬಸ್ ಇಲ್ಲದೆ ಪ್ರಯಾಣಿಕರು ಪರದಾಡುವ ಸ್ಥಿತಿ ನಿರ್ಮಾಣವಾಗಿದೆ. ಒಟ್ಟು 108 ಬಸಗಳು ದಿನನಿತ್ಯ ಓಡಾಡುತ್ತಿವೆ ಅದರಲ್ಲಿ ಸಮಾವೇಶಕ್ಕೆ 49 ಬಸಗಳು ಸಂಚಾರಿಸುತ್ತಿರುವುದರಿಂದ ಸಕಾಲಕ್ಕೆ ಬಸಗಳು ಓಡಿಸಲು ಸಾಧ್ಯವಾಗದೆ ಇರುವುದರಿಂದ ಸ್ವಭಾವಿಕವಾಗಿ ಪ್ರಯಾಣಿಕರಿಗೆ ತೊಂದರೆ ಉಂಟಾಗಿದೆ. ನಾಳೆಯೂ ಕೂಡ ಇದೆ ಸ್ಥಿತಿ ಮುಂದುವರಿಯು ಭೀತಿಯಲ್ಲಿ ಪ್ರಯಾಣಿಕರು ಇದ್ದಾರೆ.

# ನೀರಿನ ಬಾಕಿ ಕರವನ್ನು ಪಾವತಿಸಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.20–ಕಲಬುರಗಿ ನಗರದ ನೀರು ಸರಬರಾಜಿನ ಗ್ರಾಹಕರು ಸುಮಾರು 73 ಕೋಟಿ ರೂ.ಗಳ ನೀರಿನ ಕರವನ್ನು ಬಾಕಿ ಉಳಿಸಿಕೊಂಡಿದ್ದು, ಸಾರ್ವಜನಿಕರಿಗೆ ಬಾಕಿ ಇರುವ ನೀರಿನ ಕರ ಪಾವತಿಗಾಗಿ ಆಟೋ ಮೂಲಕ ಪ್ರಚಾರ ಮಾಡಲಾಗುತ್ತಿದೆ. ಪ್ರಚಾರದ ನಂತರ ಮನೆ ಮನೆಗೆ ಭೇಟಿ ನೀಡಿ ಕರ ಸಂಗ್ರಹಣೆ ಮಾಡಲಾಗುತ್ತಿದೆ.

ಕಲಬುರಗಿ ನಗರದಲ್ಲಿ ನೀರಿನ ಕರವನ್ನು ಬಾಕಿ ಉಳಿಸಿಕೊಂಡಿರುವ ನಳ ಸಂಪರ್ಕದಾರರು ತಮ್ಮ ಗೃಹ, ಗೃಹೇತರ ಹಾಗೂ ವಾಣಿಜ್ಯ ನಳ ಸಂಪರ್ಕದ ಬಾಕಿ ಇರುವ ನೀರಿನ ಕರವನ್ನು ಕೂಡಲೇ ಪಾವತಿಸಬೇಕೆಂದು ಕಲಬುರಗಿ ಕೆಯುಡಬ್ಲ್ಯುಎಸ್ ಎಂಪಿ–ಕೆಯುಐಡಿಎಫ್‌ಸಿ ಯೋಜನಾ ಅನುಷ್ಠಾನ ಘಟಕದ ಕಾರ್ಯಪಾಲಕ ಅಭಿಯಂತರರು ತಿಳಿಸಿದ್ದಾರೆ.

ಗ್ರಾಹಕರು ನೀರಿನ ಕರವನ್ನು ಕರ್ನಾಟಕ ಒನ್, ಮಹಾನಗರ ಪಾಲಿಕೆಯ ಆನ್‌ಲೈನ್‌ನಲ್ಲಿ ನೀರಿನ ಬಿಲ್ ವಿತರಕರ ಹತ್ತಿರ ಇರುವ ಕ್ಯೂಆರ್ ಕೋಡ್ ಮೂಲಕ ಹಾಗೂ ಕಲಬುರಗಿಯಲ್ಲಿ ಮೆ॥ಎಲ್ ಆಂಡ್ ಟಿ ಕಂಪನಿ ಸ್ಥಾಪಿಸಿರುವ ಕ್ಯಾಶ ಕೌಂಟರ್‌ಗಳಲ್ಲಿ ನೀರಿನ ಕರ ತುಂಬಿ ರಸೀದಿ ಪಡೆಯಬೇಕು. ಸಾರ್ವಜನಿಕರು ನಗದು ಹಣ ಪಾವಸಿದ ಮೇಲೆ ಕಡ್ಡಾಯವಾಗಿ ಸಿಬ್ಬಂದಿ/ಅಧಿಕಾರಿಗಳಿಂದ ರಶೀದಿ ಪಡೆಯಬೇಕು. ಅನಧೀಕೃತ ನಳ ಸಂಪರ್ಕ ಹೊಂದಿರುವ ಗ್ರಾಹಕರು ಅಧೀಕೃತಗೊಳಿಸಿಕೊಳ್ಳದಿದ್ದಲ್ಲಿ ಹಾಗೂ ನೀರಿನ ಕರ ಪಾವತಿಸದೆ ಇರುವ ಗ್ರಾಹಕರಿಗೆ ಯಾವುದೇ ಮುನ್ಸೂಚನೆ ನೀಡದೆ ನಳದ ಸಂಪರ್ಕಗಳನ್ನು ಕಡಿತಗೊಳಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ ನೀರು ಸರಬರಾಜುವಿಗೆ ಸಂಬಂಧಿಸಿದ ದೂರುಗಳಿಗಾಗಿ ಸಹಾಯವಾಣಿ ಸಂಖ್ಯೆ +91 1800 425 8247 (ಟೋಲ್ ಫ್ರೀ)ಗೆ ಸಂಪರ್ಕಿಸಬೇಕೆಂದು ಅವರು ತಿಳಿಸಿದ್ದಾರೆ.

# ಕಲಬುರಗಿ ಜಿ.ಟಿ.ಟಿ.ಸಿ.: ಬಾಕಿ ಉಳಿದ ಸೀಟುಗಳಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.20–ಕಲಬುರಗಿ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿ.ಟಿ.ಟಿ.ಸಿ.)ದಲ್ಲಿ ಡಿಪ್ಲೋಮಾ ಇನ್ ಟೂಲ್ ಆಂಡ್ ಡೈ ಮೇಕಿಂಗ್, ಡಿಪ್ಲೋಮಾ ಇನ್ ಪ್ರಿಶಿಷನ ಮಾನ್ಯುಪಾಕ್ಚರಿಂಗ್, ಡಿಪ್ಲೋಮಾ ಇನ್ ಮೆಕಾಟ್ರಾನಿಕ್ಸ್ ಮತ್ತು ಡಿಪ್ಲೋಮಾ ಇನ್ ಇಲೆಕ್ಟ್ರಿಕಲ್ ಆಂಡ್ ಇಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಕೋರ್ಸ್‌ಗಳ ಬಾಕಿ ಉಳಿದ ಸೀಟುಗಳ ಪ್ರವೇಶಕ್ಕಾಗಿ ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಹಾಗೂ ಪಿಯುಸಿ ಉತ್ತೀರ್ಣ/ಅನುತ್ತೀರ್ಣರಾದ (ಕಲೆ, ವಿಜ್ಞಾನ ಮತ್ತು ವಾಣಿಜ್ಯ ವಿಭಾಗ) ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದ ಪ್ರಾಚಾರ್ಯರು ತಿಳಿಸಿದ್ದಾರೆ.

ಅದೇ ರೀತಿ ಕಲಬುರಗಿ ಜಿಟಿಟಿಸಿ ಕೇಂದ್ರದಲ್ಲಿ ಡಿಪ್ಲೋಮಾ ಕೋರ್ಸ್‌ಗಳಿಗೆ ಪ್ರವೇಶ ಪ್ರಕ್ರಿಯೆ ಆರಂಭವಾಗಿದ್ದು, 2025–26ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಎ.ಐ.ಸಿ.ಟಿ.ಇ. (ಂಖಅಖಿಇ) ಅನುಮೋದಿತ ಡಿಪ್ಲೋಮಾ ಇನ್ ಟೂಲ್ ಅಂಡ್ ಡೈ ಮೇಕಿಂಗ್, ಡಿಪ್ಲೋಮಾ ಇನ್ ಪ್ರಿಸಿಷನ್ ಮ್ಯಾನುಫಾಕ್ಚರಿಂಗ್, ಡಿಪ್ಲೋಮಾ ಇನ್ ಇಲೆಕ್ಟ್ರಿಕಲ್ ಆಂಡ್ ಇಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಮತ್ತು ಡಿಪ್ಲೋಮಾ ಇನ್ ಮೆಕಾಟ್ರಾನಿಕ್ಸ್ ಕೋರ್ಸ್‌ಗಳಿಗೆ ಬಾಕಿ ಉಳಿದ ಸೀಟುಗಳಿಗೆ ಪ್ರವೇಶಗಳು ನೀಡಲಾಗುತ್ತಿದೆ. ಎಸ್‌ಎಸ್‌ಎಲ್‌ಸಿ ಪಾಸಾದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಮೊದಲು ಬಂದವರಿಗೆ ಮೊದಲನೇ ಆದ್ಯತೆ ನೀಡುವುದರ ಜೊತೆಗೆ ಮೆರಿಟ್ ಮತ್ತು ರೋಸ್ಟರ್ ಆಧಾರದ ಮೇಲೆ ಪ್ರವೇಶಾತಿ ಹಂಚಿಕೆಯನ್ನು ಮಾಡಲಾಗುತ್ತದೆ. ಐಟಿಐ ಹಾಗೂ ಪಿಯುಸಿ ಪಾಸಾದ ವಿದ್ಯಾರ್ಥಿಗಳು ನೇರವಾಗಿ 2ನೇ ವರ್ಷಕ್ಕೆ ಪ್ರವೇಶ ಪಡೆಯಲು ಅರ್ಹರಾಗಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 7795591601, 9738255123, 6360476824 ಗಳಿಗೆ ಹಾಗೂ ಕಚೇರಿ ದೂರವಾಣಿ ಸಂಖ್ಯೆ 08472–295163ಗೆ ಸಂಪರ್ಕಿಸಲು ಕೋರಲಾಗಿದೆ.

# ಮೇ 23 ರಂದು ನೇರ ಸಂದರ್ಶನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.20– ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಕಲಬುರಗಿ ಸರ್ಕಾರಿ ಐಟಿಐ ಕಾಲೇಜು ಹಿಂದುಗಡೆಯಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಇದೇ ಮೇ 23ರಂದು ಬೆಳಿಗ್ಗೆ 9 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ನೇರ ಸಂದರ್ಶನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಸ್ಟ್ರಿಡ್ಸ್ ಫಾರ್ಮಾ ಸೈನ್ಸ್ ಪ್ರೈ.ಲಿ. ದಲ್ಲಿ ಆಪರೇಟರ್ (ಲರ್ನ್ & ಅರ್ನ್) ಹುದ್ದೆಗೆ ಪಿಯುಸಿ/ಡಿಪ್ಲೋಮಾ ಬಿ.ಎ, ಬಿ.ಕಾಂ., ಬಿ.ಎಸ್.ಸಿ. (1 ಮತ್ತು 2 ವರ್ಷ) ಪಾಸಾಗಿರಬೇಕು. ವಯೋಮಿತಿ 18 ರಿಂದ 22 ವರ್ಷದೊಳಗಿರಬೇಕು.

ಆಸಕ್ತಿಯುಳ್ಳ ಅಭ್ಯರ್ಥಿಗಳು ತಮ್ಮ ಎಲ್ಲಾ ಅಂಕಪಟ್ಟಿಗಳ ಝೆರಾಕ್ಸ್, ರೇಸ್ಯೂಮ್ (ಬಯೋಡೆಟಾ) ಭಾವಚಿತ್ರಗಳು ಹಾಗೂ ಆಧಾರ್‌ಕಾರ್ಡ್‌ದೊಂದಿಗೆ ದಾಖಲೆಗಳೊಂದಿಗೆ ಮೇಲ್ಕಂಡ ದಿನದಂದು ನಡೆಯುವ ನೇರ ಸಂದರ್ಶನದಲ್ಲಿ ಭಾಗವಹಿಸಬೇಕು.

ನೇರ ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಯಾವುದೇ ತರಹದ ಭತ್ಯೆಯನ್ನು ನೀಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯನ್ನು ಹಾಗೂ ಕಚೇರಿ ದೂರವಾಣಿ ಸಂಖ್ಯೆ 08472–274846, ಮೊಬೈಲ್ ಸಂಖ್ಯೆ 9620095270 ಗೆ ಸಂಪರ್ಕಿಸಲು ಕೋರಲಾಗಿದೆ.



ಬಸವಕಲ್ಯಾಣ:– ಹುಲಸೂರು ತಾಲೂಕಿನ ಗೋರ್ಟಾ (ಬಿ) ಗ್ರಾಮದ ರುದ್ರೇಶ್ವರ ದೇವಸ್ಥಾನದಲ್ಲಿ ಸಂಗೀತ ರುದ್ರೇಶ್ವರ ಲಿಂ. ವೀರಮ್ಮ ವಿರೂಪಾಕ್ಷಯ್ಯ ಸ್ವಾಮಿ ಅವರ ಸ್ಮರಣೋತ್ಸವ ಹಾಗೂ ಕಲ್ಯಾಣ ಕರ್ನಾಟಕದ ಪ್ರಾಂತೀಯ 6ನೇ ಸಂಗೀತ ಸಮ್ಮೇಳನದಲ್ಲಿ ಬೀದರ ವಿಶ್ವವಿದ್ಯಾಲಯದ ಕುಲಪತಿ ಜಿ.ಎಸ್ .ಬಿರಾದಾರ ಅವರಿಗೆ ಪಂಡಿತ ವಿರೂಪಾಕ್ಷಯ್ಯ ಸಮ್ಮಾನ ರಾಷ್ಟ್ರೀಯ ಪುರಸ್ಕಾರ ಪ್ರಧಾನ ಮಾಡಿ ಸನ್ಮಾನಿಸಲಾಯಿತು. ಸಂಗೀತ ರುದ್ರೇಶ್ವರ ಮಹಾಸಂಸ್ಥಾನದ ಪೂಜ್ಯ ಶ್ರೀ ಡಾ. ರಾಜಶೇಖರ್ ಶಿವಾಚಾರ್ಯರು ಅಕ್ಕಮಹಾದೇವಿ ಚೈತನ್ಯ ಪೀಠ ಶ್ರೀಶೈಲದ ಕರುಣಾದೇವಿ ಮಾತೆ ಸಂಗೀತ ರುದ್ರೇಶ್ವರ ಮಹಾ ಸಂಸ್ಥಾನದ ಪೂಜ್ಯಶ್ರೀ ಡಾ. ರಾಜಶೇಖರ ಶಿವಾಚಾರ್ಯರು ಪ್ರಸಿದ್ಧ ಸಂಗೀತ ಕಲಾವಿದರಾದ ಸಿದ್ದರಾಮಯ್ಯಾ ಸ್ವಾಮಿ ರಾಮುಲು ಗಾದಗಿ ಸನ್ಮಾನಿತರ ಪರಿಚಯ ನೀಡಿದ ಪ್ರಾಧ್ಯಾಪಕ ರಾಮಚಂದ್ರ ಗಣಾಪುರ ದಿಗಂಬರ ಬಿರಾದರ ಭೂದಾನಿಗಳಾದ ನಾಗಶೆಟ್ಟೆಪ್ಪ ಮಾಲಿ ಪಾಟೀಲ್ ಕರಬಸಪ್ಪಾ ಅಕ್ಕಣ್ಣಾ ಕಮಲಾಬಾಯಿ ಅಕ್ಕಣ್ಣಾ ಶಿವಯ್ಯಾ ಸ್ವಾಮಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಡಿಎಪಿಗೆ ಪರ್ಯಾಯವಾಗಿ ಸಂಯುಕ್ತ ರಸಗೊಬ್ಬರವನ್ನು ಬಳಸಲು ರೈತರಿಗೆ ಸಲಹೆಗಳು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.20–ಕಲಬುರಗಿ ಜಿಲ್ಲೆಯಲ್ಲಿ ತೊಗರಿ, ಹತ್ತಿ, ಹೆಸರು, ಉದ್ದು ಹಾಗೂ ಕಬ್ಬು ಬೆಳೆಗಳು ಪ್ರಮುಖವಾಗಿ ಬೆಳೆಯಲಾಗುತ್ತಿದ್ದು, ಈ ಬೆಳೆಗಳಿಗೆ ಶಿಫಾರಸ್ಸು ಮಾಡಿದ ಪೋಶಕಾಂಶಗಳನ್ನು ಗಮನಿಸಿದಾಗ ಸಮತೋಲನವಾದ ಸಾರಜನಕ, ರಂಜಕ ಹಾಗೂ ಪೋಟಾಷ ಪೋಷಕಾಂಶಗಳ ಜೊತೆಗೆ ಲಘು ಪೋಷಕಾಂಶಗಳಾದ ಜಿಂಕ್, ಬೋರಾನ್, ಕ್ಯಾಲ್ಸಿಯಂ ಹಾಗೂ ಮ್ಯಾಗ್ನೇಷಿಯಂ ಕೂಡ ಬಳಸುವ ಅವಶ್ಯಕತೆ ಇದೆ ಎಂದು ಕಲಬುರಗಿ ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ ಅವರು ತಿಳಿಸಿದ್ದಾರೆ.

ಈಗಾಗಲೇ ಸುಮಾರು ವರ್ಷಗಳಿಂದ ಆಂಕ ರಸಗೊಬ್ಬರ ಬಳಸುತ್ತಿರುವುದರಿಂದ ಹೇರಳವಾಗಿ ರಂಜಕ ಪೋಷಕಾಂಶ ಭೂಮಿಯಲ್ಲಿ ಈಖಫಿಇಆ ಈಔಖಒನಲ್ಲಿ ಇದ್ದು, ಆಂಕ ರಸಗೊಬ್ಬರ ಬದಲಾಗಿ ಸಂಯುಕ್ತ ರಸಗೊಬ್ಬರಗಳಾದ 20:20:0:13 ಹಾಗೂ 14:35:14 ಬಳಕೆ ಮಾಡಬಹುದಾಗಿದೆ. ಹಾಗೂ ಇತರೆ ಸಂಯುಕ್ತ ರಸಗೊಬ್ಬರಗಳಾದ 15:15:15, 10:26:26, 12:32:16, 22:22:11, 14:35:14, 17:17:17, 14:28:14, 19:19:19, 20:10:10, 15:15:15, 15:15:15:9(ಖ) ಇತ್ಯಾದಿ ರಸಗೊಬ್ಬರಗಳನ್ನು ಬಳಸುವುದರಿಂದ ಭೂಮಿಗೆ ಸಮತೋಲನ ಪೋಶಕಾಂಶಗಳನ್ನು ನೀಡಿದಂತಾಗುತ್ತದೆ. ತಾಂತ್ರಿಕವಾಗಿ ಶಿಫಾರಸ್ಸಿನಂತೆ ಬೆಳೆಗಳಿಗೆ ಸಾರಜನಕ: ರಂಜಕ: ಪೊಟ್ಯಾಷ್ ರಸಗೊಬ್ಬರಗಳನ್ನು 4:2:1ರ ಅನುಪಾತದಲ್ಲಿ ಬಳಸಬೇಕಾಗಿರುತ್ತದೆ.

ಆದರೆ ಪ್ರಸ್ತುತ ರೈತರು ಯಥೇಚ್ಛವಾಗಿ ಸಾರಜನಕ ಹಾಗೂ ರಂಜಕ ಹೊಂದಿರುವ (ಆಂಕ) ಹಾಗೂ ಗಖಇಂ ರಸಗೊಬ್ಬರವನ್ನು ಮಾತ್ರ ಬಳಸುತ್ತಿರುವ ಕಾರಣ ಸದರಿ ರಸಗೊಬ್ಬರಗಳ ಜಿಲ್ಲೆಯ ಅನುಪಾತವು 5.08:2.83:1 ಆಗಿರುತ್ತದೆ. ಇದನ್ನು ಸರಿಪಡಿಸಲು ಹಾಗೂ ಭೂಮಿಯ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಮತೋಲನಾತ್ಮಕ ರಸಗೊಬ್ಬರಗಳ ಬಳಕೆಯನ್ನು ಉತ್ತೇಜಿಸಿ, ಸಂಯುಕ್ತ ರಸಗೊಬ್ಬರಗಳನ್ನು ಬಳಸುವುದರಿಂದ ಸರಿದೂಗಿಸಬಹುದಾಗಿರುತ್ತದೆ.

ಆಂಕ ರಸಗೊಬ್ಬರಕ್ಕೆ ಪರ್ಯಾಯವಾಗಿ ರೈತರು ತೊಗರಿ, ಉದ್ದು, ಹೆಸರು, ಹತ್ತಿ ಮತ್ತು ಕಬ್ಬು ಬೆಳೆಗೆ ಗಂಧಕ ಅಂಶ ಒದಗಿಸುವ ಸಂಯುಕ್ತ ರಸಗೊಬ್ಬರಗಳಾದ 20:20:0:13 ಹಾಗೂ ಸಮತೋಲನ ಪೋಷಕಾಂಶ ನೀಡುವ ಮತ್ತು ಭೂಮಿಯ ಆರೋಗ್ಯಕ್ಕೆ ಹಿತವಾದ ಸಂಯುಕ್ತಗೊಬ್ಬರಗಳಾದ 14:35:14, 15:15:15, 10:26:26, 12:32:16, 22:22:11, 14:35:14, 17:17:17, 14:28:14, 19:19:19, 20:10:10, 15:15:15, 15:15:15:9(ಖ) ಇತ್ಯಾದಿ ರಸಗೊಬ್ಬರಗಳನ್ನು ಬಳಸಬಹುದಾಗಿದೆ. ಇದರಿಂದ ಮಣ್ಣಿನ ಆರೋಗ್ಯದಲ್ಲಿ ಸ್ಮಧಾರಣೆ ಮತ್ತು ಬೆಳೆಗಳ ಆರೋಗ್ಯ ಕಾಪಾಡಲು ರೈತಬಾಂದವರು ಆಂಕ ಮತ್ತು ಗಖಇಂ ರಸಗೊಬ್ಬರಗಳ ಜೊತೆಗೆ ಸಂಯುಕ್ತ ರಸಗೊಬ್ಬರಗಳನ್ನು ಬಳಸುವುದರಿಂದ ಉತ್ತಮ ಇಳುವರಿ ಪಡೆಯಲು ಜೊತೆಗೆ ಭೂಮಿಯ ಆರೋಗ್ಯ ಕಾಪಾಡಿಕೊಳ್ಳಲು ಅನುಕೂಲವಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

# ಮೇ 24 ರಂದು ಕ್ಯಾನ್ಸರ್ ಅರಿವು ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.20–ಕಲಬುರಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸರ್ಕಾರಿ ಮಹಿಳಾ ನೌಕರರ ಸಂಘ, ನಾಲ್ಕುಚಕ್ರ ತಂಡ, ಕಿದ್ವಾಯಿ ಆಸ್ಪತ್ರೆ, ಮಣ್ಣೂರ ಆಸ್ಪತ್ರೆ, ಜಿಲ್ಲಾ ಸ್ತ್ರೀರೋಗ ತಜ್ಞರ ಸಂಘ ಇವುಗಳ ಸಹಯೋಗದೊಂದಿಗೆ ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಇವರ ಅಧ್ಯಕ್ಷತೆಯಲ್ಲಿ ಇದೇ ಮೇ 24 ರಂದು ಬೆಳಿಗ್ಗೆ 9 ರಿಂದ ಸಂಜೆ 4.30 ಗಂಟೆಯವರೆಗೆ ಕಲಬುರಗಿ ನಗರದ ಅಪ್ಪಾ ಪಬ್ಲಿಕ್ ಶಾಲೆಯ ಸಭಾಂಗಣದಲ್ಲಿ ಕ್ಯಾನ್ಸರ್ ಅರಿವು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ತಿಳಿಸಿದ್ದಾರೆ.

ಈ ಕ್ಯಾಂಪ್‌ನಲ್ಲಿ ಕ್ಯಾನ್ಸರ್ ಕುರಿತು ಜಾಗೃತಿ ಮೂಡಿಸಲಾಗುವುದು. ಸರ್ವಿಕಲ್ ಕ್ಯಾನ್ಸರ್ ಕಂಡು ಹಿಡಿಯುವ ಠಿಚಿಠಿ, ಟಜಚಿಡಿ ಉಚಿತವಾಗಿ ಮಾಡಲಾಗುತ್ತದೆ. ಸರ್ವಿಕಲ್ ಕ್ಯಾನ್ಸರ್ ಬರದೇ ಹಾಗೆ ತಡೆಯುವ ಹೆಚ್.ಪಿ.ವಿ. (ಊಕಗಿ) ಲಸಿಕೆಯನ್ನು 1500 ರೂ. ದಲ್ಲಿ ನೀಡಲಾಗುತ್ತದೆ. ಕ್ಷಯರೋಗ ನಿರ್ಮೂಲನೆಗೆ ಬಿ.ಸಿ.ಜಿ.(ಃಅಉ) ಲಸಿಕೆ ಉಚಿತವಾಗಿ ನೀಡಲಾಗುತ್ತದೆ. ಸಾಂಕ್ರಾಮಿಕ ರೋಗಗಳಾದ, ಸಕ್ಕರೆ ಕಾಯಿಲೆ, ಉಚಿತವಾಗಿ ರಕ್ತದೊತ್ತಡ ತಪಾಸಣೆ ಮಾಡಲಾಗುತ್ತದೆ. ಉಚಿತ ಕಣ್ಣಿನ ತಪಾಸಣೆ ಮತ್ತು ಉಚಿತ ಕನ್ನಡಕ ನೀಡಲಾಗುವುದು. ಸ್ತನ ಕ್ಯಾನ್ಸರ ತಪಾಸಣೆ ಮಾಡಲಾಗುವುದು. mamogram ಪರೀಕ್ಷೆ ಬೇಕಾದಲ್ಲಿ ಖಿಜಠಿಚಿ ಆಸ್ಪತ್ರೆಯಲ್ಲಿ ಉಚಿತವಾಗಿ ಮಾಡಲಾಗುವುದು. ಉಚಿತವಾಗಿ ದಂತ ಕ್ಯಾನ್ಸರ್ ತಪಾಸಣೆ ಮಾಡಲಾಗುತ್ತದೆ.

ಈ ಶಿಬಿರದಲ್ಲಿ ಎಲ್ಲಾ ನುರಿತ ವೈದ್ಯರು ಹಾಗೂ ಸಿಬ್ಬಂದಿ ವರ್ಗದವರು ತಪಾಸಣೆ ಮಾಡಲಿದ್ದು, ಸಾರ್ವಜನಿಕರು ಈ ಶಿಬಿರದ ಉಪಯೋಗವನ್ನು ಇದರ ಸದುಪಯೋಗ ಪಡೆದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು. ಹೆಚ್ಚಿನ ಮಾಹಿತಿಗಾಗಿ 9972696950, 9741299995, 7411176831, 9845695023, 9886622264 ಮೊಬೈಲ್ ಸಂಖ್ಯೆಗೆ ಸಂಪರ್ಕಿಸಲು ಕೋರಲಾಗಿದೆ.

# ಚಿತ್ತಾಪುರ: ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.20– ಚಿತ್ತಾಪೂರ ತಾಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ ನಂತರದ (ಪಿ.ಯು.ಸಿ. ಮತ್ತು ಪಿ.ಯು.ಸಿ. ಸಮಾನಾಂತರ ಕೋರ್ಸಿನ ವಿದ್ಯಾರ್ಥಿಗಳು) ವಿದ್ಯಾರ್ಥಿ ನಿಲಯಗಲ್ಲಿ 2025–26 ನೇ ಸಾಲಿಗೆ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪ.ಜಾ/ಪ.ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಚಿತ್ತಾಪುರ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ. ಚಿತ್ತಾಪೂರ ತಾಲೂಕಿನ ಎಲ್ಲಾ ವಿವಿಧ ಕಾಲೇಜುಗಳಲ್ಲಿ (ಪಿ.ಯು.ಸಿ. ಮತ್ತು ಪಿ.ಯು. ಸಮಾನಾಂತರ ಕೋರ್ಸಿನ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು www.bcwd.karnataka.gov.in ವೆಬ್‌ಸೈಟ್‌ದಲ್ಲಿ ಆನ್‌ಲೈನ್ ಮೂಲಕ 2025ರ ಜೂನ್ 20 ರೊಳಗಾಗಿ ಅರ್ಜಿ ಸಲ್ಲಿಸಬೇಕು. ನಂತರ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ಅಪ್ಲಿಕೇಶನ್ ಪ್ರಿಂಟ ತೆಗೆದು ವಸತಿ ನಿಲಯದ ಮೇಲ್ವಿಚಾರಕರಿಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwd.hostels@karnataka.gov.in ಇ–ಮೇಲ್ ಮುಖಾಂತರ, ಸಹಾಯವಾಣಿ ಸಂಖ್ಯೆ: 8050770005 ಅಥವಾ ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು/ನಿಲಯ ಮೇಲ್ವಿಚಾರಕರು ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಲು ಕೋರಲಾಗಿದೆ.

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ.20-: ಇಲ್ಲಿನ ಜಿಲ್ಲಾ ಹಿಂದುಳಿದ ವರ್ಗಗಳಕಲ್ಯಾಣ ಇಲಾಖೆಯಿಂದ 2025-26ನೇ ಸಾಲಿನ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಹೊಸದಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಪ್ರವೇಶ ಬಯಸುವ ಪಿ.ಯು.ಸಿ, ಐ.ಟಿ.ಐ ಮತ್ತು ಡಿಪ್ಲೋಮಾ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಕಲ್ಪಿಸಲು ಪ್ರವರ್ಗ-1, 2ಎ, 2ಬಿ, 3ಬಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟವರ್ಗದ ವಿದ್ಯಾರ್ಥಿಗಳು ಇಲಾಖೆಯ ವೆಬ್‌ಸೈಟ್ ವಿಳಾಸ: https:shp.karnataಇಚಿ.ರಠಡಿ.ಟಿeಣ/ಛಛಿತಿಜ ನಲ್ಲಿ ಜೂನ್ 20ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಪ್ರವರ್ಗ-1, ಎಸ್.ಸಿ & ಎಸ್.ಟಿ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯವು 2.5 ಲಕ್ಷ ರೂ. ಹಾಗೂ ಪ್ರವರ್ಗ-2ಎ, 2ಬಿ, 3ಎ, 3ಬಿ ವರ್ಗಗಳ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯವು 1 ಲಕ್ಷ ರೂಪಾಯಿಗಳ ಒಳಗಿರಬೇಕು.

ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ ವಿಳಾಸ: https:shp.karnataka.gor.in/bcwdನ್ನು ನೋಡಬಹುದು.

ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwd-helpline@gmail.com ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ ಅಥವಾ ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 8050770004, 8050770005ಗೆ ಸಂಪರ್ಕಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮುಂದುವರೆದ ವರುಣನ ಅಬ್ಬರ; ಬೇಸಿಗೆ ಮರೆಸಿದ ಮಳೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 20 :- ನಗರ ಸೇರಿದಂತೆ ತಾಲ್ಲೂಕಿನ ಹಲವು ಭಾಗಗಳಲ್ಲಿ ಭಾನುವಾರವೂ ವರುಣನ ಆರ್ಭಟ ಮುಂದುವರೆದಿದೆ.

ಬೆಳಿಗ್ಗೆಯಿಂದ ಮೋಡ ಕವಿದ ವಾತಾವರಣ ಇತ್ತು. ಮಧ್ಯಾಹ್ನ ಗುಡುಗು ಸಹಿತ ಗಂಟೆಗೂ ಹೆಚ್ಚು ಸಮಯ ಬಿರುಸಿನ ಮಳೆಯಾಯಿತು. ಜೋರು ಮಳೆಗೆ ನಗರದ ಹರಳಯ್ಯಾ ವೃತ್ತ, ಹಳೆ ಬಸ್ ನಿಲ್ದಾಣ, ಹಾರೂರಗೇರಿ, ವಿದ್ಯಾನಗರ, ಕುಂಬಾರವಾಡ ಕ್ರಾಸ್, ಗುಂಪಾ ರಿಂಗ್‌ರೋಡ್ ಕ್ರಾಸ್‌ನಲ್ಲಿ ಅಪಾರ ಪ್ರಮಾಣದಲ್ಲಿ ನೀರು ಸಂಗ್ರಹಗೊಂಡಿತು.

ಇದರ ಪರಿಣಾಮ ವಾಹನ ಸಂಚಾರಕ್ಕೆ ತೊಡಕಾಗಿ, ನಿಧಾನವಾಗಿ ಸಂಚರಿಸಿದವು.

ಭಾನುವಾರ ನಗರದ ಬಹುತೇಕ ಕಲ್ಯಾಣ ಮಂಟಪಗಳಲ್ಲಿ ಮದುವೆ ಸೇರಿದಂತೆ ಇತರೆ ಕಾರ್ಯಕ್ರಮಗಳು ಹೆಚ್ಚಿನ ಪ್ರಮಾಣದಲ್ಲಿದ್ದವು. ವಿವಿಧ ಕಡೆಗಳಿಂದ ಬಂದಿದ್ದ ಜನ ಮಳೆಯಲ್ಲಿ ನೆನೆದುಕೊಂಡರು. ತಾಲ್ಲೂಕಿನ ಚಿಟ್ಟಾ, ಘೋಡಂಪಳ್ಳಿ, ಅಮಲಾಪೂರ, ಯದಲಾಪೂರ, ಕಮಠಾಣ ಸೇರಿದಂತೆ ಹಲವು ಕಡೆಗಳಲ್ಲಿ ಜೋರು ಮಳೆ ಬಿದ್ದಿದೆ.

ನಾಲ್ಕೈದು ದಿನಗಳಿಂದ ಮೇಲಿಂದ ಮೇಲೆ ಮಳೆ ಸುರಿಯುತ್ತಿರುವ ಕಾರಣ ಬೇಸಿಗೆ ಮರೆಸಿದೆ. ಸಂಪೂರ್ಣ ಮಳೆಗಾಲದಂತೆ ಭಾಸವಾಗುತ್ತಿದೆ. ವಾತಾವರಣ ಸಂಪೂರ್ಣ ತಂಪಾಗಿದ್ದು, ಗರಿಷ್ಠ ಉಷ್ಣಾಂಶ 32ರಿಂದ 34 ಡಿಗ್ರಿ ಸೆಲ್ಸಿಯಸ್‌ಗೆ ಕುಸಿದಿದೆ. ಬತ್ತಿ ಹೋಗಿದ್ದ ಜಲಮೂಲಗಳಲ್ಲಿ ಮತ್ತೆ ಜೀವ ಜಲ ಚಿಮ್ಮಿದೆ. ಬಾವಿ, ಕೊಳವೆಬಾವಿಗಳಲ್ಲಿ ನೀರಿನ ಪ್ರಮಾಣ ಹೆಚ್ಚಾಗಿದೆ.

ಮಳೆ ಚುರುಕುಗೊಂಡ ಬೆನ್ನಲ್ಲೇ ಕೃಷಿ ಇಲಾಖೆಯು ಬಿತ್ತನೆ ಬೀಜ, ರಸಗೊಬ್ಬರದ ದಾಸ್ತಾನು ಹೆಚ್ಚಿಸಿಕೊಳ್ಳುತ್ತಿದೆ. ಮುಂದಿನ ವಾರದಿಂದ ಬೀಜ ವಿತರಣೆಗೆ ಸಿದ್ಧತೆ ನಡೆಸಿದೆ.

## ಕಾರ್ಯಕರ್ತೆಯರ ತಂಡ ಬಾಲ್ಯ ವಿವಾಹ ತಡೆಯಲು ಯತ್ನಿಸಿ : ಶಾಸಕ ಕಂದಕೂರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ದೇಶ ಸ್ವಾತಂತ್ರಗೊಂಡು 78 ವರ್ಷ ಕಳೆದರು, ಇನ್ನೂ ಸಮಾಜದಲ್ಲಿ ಅನಕ್ಷರತೆ ಪರಿಣಾಮ ಬಾಲ್ಯ ವಿವಾಹಗಳು ನಡೆಯುತ್ತಿವೆ, ಕಾರಣ ಮಹಿಳೆಯರ ಹಾಗೂ ಮಕ್ಕಳ ಆರೋಗ್ಯ ದೃಷ್ಟಿಯಿಂದ ಅಂಗನವಾಡಿ ಕಾರ್ಯಕರ್ತೆಯರ ತಂಡ ತಮ್ಮ-ತಮ್ಮ ಭಾಗದಲ್ಲಿ ಜನರಲ್ಲಿ ಜಾಗೃತಿ ಮೂಡಿಸಿ, ಘಟನೆಗಳು ಜರುಗದಂತೆ ಎಚ್ಚರಿಕೆ ವಹಿಸಬೇಕೆಂದು ಗುರುಮಠಕಲ್ ಮತಕ್ಷೇತ್ರದ ಶಾಸಕ ಶರಣಗೌಡ ಕಂದಕೂರ ಸೂಚಿಸಿದರು.

ನಗರದ ತಮ್ಮ ಶಾಸಕರ ಜನಸಂಪರ್ಕ ಕಛೇರಿಯಲ್ಲಿ ತಾಲ್ಲೂಕಾ ಆಡಳಿತ, ತಾಲ್ಲೂಕಾ ಪಂಚಾಯತ ಗುರುಮಠಕಲ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಾದಗಿರಿ, ಶಿಶು ಅಭಿವೃದ್ಧಿ ಯೋಜನೆ ಗುರುಮಠಕಲ್ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ನೂತನವಾಗಿ ನೇಮಕಗೊಂಡಿರುವ 17 ಅಂಗನವಾಡಿ ಕಾರ್ಯಕರ್ತೆಯರಿಗೆ ಹಾಗೂ 54 ಸಹಾಯಕಿಯರಿಗೆ ನೇಮಕಾತಿ ಆದೇಶ ಪತ್ರಗಳನ್ನು ವಿತರಿಸಿ ಮಾತನಾಡಿದರು.

ಸಮುದಾಯದ ಪ್ರಗತಿಯಲ್ಲಿ ಮಹಿಳಾ ಮತ್ತು ಮಕ್ಕಳ ಇಲಾಖೆ ಶಿಶು ಅಭಿವೃದ್ಧಿ ಯೋಜನೆ ಕಾರ್ಯ ಮಹತ್ವದಾಗಿದೆ, ಕಳೆದ 7 ವರ್ಷಗಳಲ್ಲಿ ಗುರುಮಠಕಲ್ ಮತಕ್ಷೇತ್ರದ ಬಹುತೇಕ ಗ್ರಾಮಗಳಲ್ಲಿ ಹಾಗೂ ತಾಂಡಾಗಳಲ್ಲಿ ಅಗತ್ಯಕ್ಕನುಸಾರವಾಗಿ ಅಂಗನವಾಡಿ ಕೇಂದ್ರಗಳ ಕಟ್ಟಡಗಳನ್ನು ನಿರ್ಮಾಣ ಮಾಡಲಾಗಿದೆ, ಇನ್ನೂ ಕೆಲವು ಕಡೆ ನಿವೇಶನದ ಕೊರತೆಯಿಂದ ನೆನೆಗುದಿಗೆ ಬಿದ್ದೀವೆ, ಅಲ್ಲಿನ ಸ್ಥಳೀಯ ಮುಖಂಡರು ಹಾಗೂ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಕಂದಾಯ ಅಧಿಕಾರಿಗಳು, ಚರ್ಚಿಸಿ, ನಿವೇಶನ ದೊರಕಿಸಿಕೊಟ್ಟಲ್ಲಿ, ಸಮಸ್ಯೆ ಪರಿಹಾರವಾಗುತ್ತದೆ ಎಂದು ಹೇಳಿದರು.

ಈ ಭಾಗದಲ್ಲಿ ಹಿಂದೆ ನಡೆದಿರುವ ಬಾಲ್ಯವಿವಾಹಗಳಿಂದ ಅಪೌಷ್ಟಿಕತೆ ಪರಿಣಾಮ ಮಹಿಳೆಯರು ಹಲವಾರು ಗಂಭೀರ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ, ಅದರಂತೆ ಮಕ್ಕಳು ಕೂಡ ಆರೋಗ್ಯದಿಂದ ಜನನವಾಗಿಲ್ಲ, ನಾನು ಈ ವಿಷಯವನ್ನು ವಿಧಾನಸಭೆ ಅಧಿವೇಶನದಲ್ಲಿ ಗಂಭೀರವಾಗಿ ಪ್ರಸ್ತಾಪ ಮಾಡಿ, ಸಮಸ್ಯೆ ಪರಿಹಾರಕ್ಕೆ ಸರ್ಕಾರದ ಗಮನ ಸೇಳೆದಿದ್ದೇನೆ, ಅದರಂತೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅವರು ಇಲಾಖೆಯಲ್ಲಿ ಹಲವಾರು ಬದಲಾವಣೆಗಳನ್ನು ತರುವ ಮೂಲಕ ಪ್ರಗತಿಗೆ ಶ್ರಮಿಸಿದ್ದಾರೆ ಎಂದು ಅಭಿಪ್ರಾಯಪಟ್ಟರು.

ಗುರುಮಿಠಕಲ್ ಮತಕ್ಷೇತ್ರದಲ್ಲಿ ನಾವೂ ಮೊದಲಿನಿಂದ ಪ್ರಾಮಾಣಿಕವಾಗಿ ಕೆಲಸ ಮಾಡಿಕೊಂಡು ಜನರಿಗೆ ಸರ್ಕಾರದ ಯೋಜನೆಗಳ ಲಾಭ ದೊರಕಿಸಿ, ಅಭಿವೃದ್ಧಿಗೆ ನಿರಂತರ ಶ್ರಮ ಪಡುತ್ತಿದ್ದೇವೆ, ಅರ್ಹ ಅಭ್ಯರ್ಥಿಗಳು ಮಾತ್ರ ಆಯ್ಕೆಯಾಗಿದ್ದಾರೆ, ಇದರಲ್ಲಿ ನಾವೂ ಯಾರು ತಲೆ ಹಾಕಿಲ್ಲ, ಭ್ರಷ್ಟಾಚಾರ ನಡೆದಿಲ್ಲ, ಕಾರಣ ನಿವೇಲ್ಲರೂ ಶಿಶುಗಳ ಹಾಗೂ ಮಹಿಳೆಯರ ಸಮಗ್ರ ಆರೋಗ್ಯ ಬೆಳವಣಿಗೆಗೆ ಶ್ರಮಿಸಿರಿ, ಅಂದಾಗ ಮಾತ್ರ ಆರೋಗ್ಯವಂತ ಸಮಾಜ ನಿರ್ಮಾಣವಾಗಿ ಎಲ್ಲರಿಗೂ ಒಳ್ಳೆಯ ಹೆಸರು ಬರುತ್ತದೆ ಎಂದು ಸಲಹೆ ನೀಡಿದರು.

ಅಧ್ಯಕ್ಷತೆ ವಹಿಸಿದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪ ನಿರ್ದೇಶಕ ವೀರಣ್ಣಗೌಡ ಪಾಟೀಲ್ ಮಾತನಾಡಿ, ಜಿಲ್ಲೆಯಲ್ಲಿ ನಮ್ಮ ಇಲಾಖೆ ಕ್ರೀಯಾಶೀಲವಾಗಿ ಕೆಲಸ ಮಾಡುವ ನಿಟ್ಟಿನಲ್ಲಿ ಸಾಗುತ್ತೀದೆ, ಶಾಸಕರು ಈ ಹಿಂದೆ ಸದನದ ಒಳಗೆ-ಹೊರಗೆ ಮಾನವೀಯ ಕಳಕಳಿಯಿಂದ ಮಹಿಳೆಯರ ಹಾಗೂ ಮಕ್ಕಳ ಸಮಸ್ಯೆಗಳ ಪರಿಹಾರಕ್ಕೆ ಯತ್ನಿಸಿದ್ದಾರೆ, ಅವರ ಸೂಚನೆಯಂತೆ ನಮ್ಮ ಸಿಬ್ಬಂಧಿಗಳು ಎಚ್ಚರಿಕೆಯಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂದು ತಿಳಿಸಿದರು.

ವೇದಿಕೆ ಮೇಲೆ ತಾಲ್ಲೂಕಾ ಸಿಡಿಪಿಓ ಶರಣಬಸವ, ಜೆಡಿಎಸ್ ಜಿಲ್ಲಾಧ್ಯಕ್ಷ ಸುಭಾಶ್ಚಂದ್ರ ಕಟಕಟಿ ಹೊನಗೇರಾ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಶಾಸಕರು ಕೊವೀಡ್ ಸಮಯದಲ್ಲಿ ಮೃತಪಟ್ಟ ಹತ್ತಿಕುಣಿ ಗ್ರಾಮ ಪಂಚಾಯತ ವ್ಯಾಪ್ತಿಯ ಸೌಧಾಗರ ತಾಂಡಾದ ನೀರು ಬಿಡುವ ಪಂಪ್ ಆಪರೇಟರ್ ಮಿಟ್ಟು ನಾಯಕ್ ಪತ್ನಿಗೆ 5 ಲಕ್ಷ ರೂ. ಚೆಕ್‌ನ್ನು ವಿತರಿಸಿದರು.

ಮೇಲ್ವಿಚಾರಕಿ ಉಷಾ ಸ್ವಾಗತಿಸಿದರು, ರೇಣುಕಾ ನಿರೂಪಿಸಿದರೇ, ಶರಣಮ್ಮ ವಂದಿಸಿದರು.

## ಕೊಪ್ಪಳ: ಅಶೋಕ ವೃತ್ತದಲ್ಲಿ ನಾಲ್ಕು ಲೇಬರ್ ಕೋಡ್ ಗಳ ಜಾರಿಯನ್ನು ವಿರೋಧಿಸಿ ಪ್ರತಿಭಟನೆ.




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಂಟಿ ಕಾರ್ಮಿಕ ಸಂಘಟನೆಗಳ ಸಮನ್ವಯ ಸಮಿತಿ(ಜೆಸಿಟಿಯು) ಹಾಗೂ ಸಂಯುಕ್ತ ಕಿಸಾನ್ ಮೋರ್ಚಾ ಜಂಟಿಯಾಗಿ ಕಾರ್ಮಿಕ ವಿರೋಧಿ ನಾಲ್ಕು ಲೇಬರ್ ಕೋಡ್ ಗಳ ಜಾರಿಯನ್ನು ವಿರೋಧಿಸಿ ನಗರದ ಅಶೋಕ ವೃತ್ತದಲ್ಲಿ ಮಂಗಳವಾರ ಪ್ರತಿಭಟನೆ ನಡೆಸಿ ರಾಷ್ಟ್ರಪತಿಗಳಿಗೆ ತಹಶೀಲ್ ಕಛೇರಿಯ ಉಪ ತಹಶೀಲ್ದಾರ್ ಗವಿಸಿದ್ದಪ್ಪ ಮಣ್ಣೂರ ಮತ್ತು ಮಹಾವೀರ ಅಳ್ಳಳ್ಳಿ ಅವರ ಮೂಲಕ ಮನವಿ ರವಾನಿಸಲಾಯಿತು.

ಮನವಿಯಲ್ಲಿ ರೈತ ವಿರೋಧಿ ನೀತಿಗಳನ್ನು ರದ್ದುಗೊಳಿಸಿ. ದುಡಿಯುವ ವರ್ಗದ ಹಕ್ಕೊತ್ತಾಯಗಳ ಈಡೇರಿಕೆಗಾಗಿ ಒತ್ತಾಯಿಸಿ ಮೇ 20, 2025, ಮಂಗಳವಾರ ರಂದು ದೇಶವ್ಯಾಪಿ ಬೃಹತ್ ಹೋರಾಟಕ್ಕೆ ಕರೆ ನೀಡಿದ ಹಿನ್ನೆಲೆ ಕೊಪ್ಪಳ ನಗರದಲ್ಲಿ ಪ್ರತಿಭಟನೆ ನಡೆಯಿತು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳೆರಡೂ ದುಡಿಯುವ ಜನರ ಬದುಕನ್ನು ಛಿದ್ರಗೊಳಿಸುವ, ಕಾರ್ಪೋರೇಟ್ ಕಂಪನಿಗಳ ಲೂಟಿಗೆ ರತ್ನಗಂಬಳಿ ಹಾಸುವ ಶ್ರಮ ವಿರೋಧಿ ಕಾಯ್ದೆಗಳನ್ನು ತರಲು ಹೊರಟಿವೆ. ದುಡಿಯುವ ಜನರ ಬದುಕಿನ ಮೇಲೆ ನಡೆಯಲಿರುವ ಈ ಪ್ರಹಾರವನ್ನು ವಿರೋಧಿಸಿ ಜೆಸಿಟಿಯು [ಜಾಯಿಂಟ್ ಕಮಿಟಿ ಆಫ್ ಟ್ರೇಡ್ ಯೂನಿಯನ್] ಮತ್ತು ಎಸ್.ಕೆ.ಎಂ. [ಸಂಯುಕ್ತ ಕಿಸಾನ್ ಮೋರ್ಚಾ] ಜಂಟಿ ನೇತೃತ್ವದಲ್ಲಿ ದೇಶವ್ಯಾಪಿ ಬೃಹತ್ ಹೋರಾಟಕ್ಕೆ ಕರೆ ನೀಡಲಾಗಿದ್ದು, ದೇಶವ್ಯಾಪಿಯಾಗಿ ರೈತರು ಮತ್ತು ಕಾರ್ಮಿಕರು ಕೇಂದ್ರ ಸರ್ಕಾರದ ನೀತಿಗಳ ವಿರುದ್ಧ ಹೋರಾಟಕ್ಕಿಳಿದಿದ್ದಾರೆ. ಕರ್ನಾಟಕ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವೂ ಬಿಜೆಪಿ ತಂದಿದ್ದ ನೀತಿಗಳನ್ನೇ ಮುಂದುವರೆಸುತ್ತಿರುವುದರಿಂದ ಮತ್ತು ಚುನಾವಣಾ ಪೂರ್ವ ಪ್ರಣಾಳಿಕೆಯಲ್ಲಿ ಕೊಟ್ಟ ಮಾತುಗಳನ್ನೆಲ್ಲಾ ಮರೆತಿರುವುದರಿಂದ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳ ವಿರುದ್ಧವೂ ರೈತ-ಕಾರ್ಮಿಕರು ಸೇರಿ ತೀವ್ರಸ್ವರೂಪದ ಪ್ರತಿಭಟನೆ ದಾಖಲಿಸಬೇಕಿದೆ. ಭಾರತದ ಕಾರ್ಮಿಕರೆಂದರೆ ಯಾವುದೇ ಭದ್ರತೆ ಇಲ್ಲದೆ, ಮಾಲೀಕರಿಗೆ ಯಾವುದೇ ಹೊಣೆಗಾರಿಕೆ ಇಲ್ಲದೆ, ಅಗ್ಗದ ಕೂಲಿ ದರದಲ್ಲಿ ಅತಿ ಹೆಚ್ಚು ಗಂಟೆ ದುಡಿಯುವ, ಅಪಾಯಕಾರಿ ಪರಿಸ್ಥಿತಿಗಳಲ್ಲೂ ಕೆಲಸ ಮಾಡುವ ನವಗುಲಾಮರನ್ನಾಗಿ ಮಾಡುವುದು. ಮನಬಂದಂತೆ ಕಾರ್ಮಿಕರನ್ನು ದುಡಿಸಿಕೊಳ್ಳುವ, ಬೇಡವಾದರೆ ಬಿಸಾಕುವ ಸಂಪೂರ್ಣ ಸ್ವಾತಂತ್ರ್ಯ ಮಾಲೀಕರಿಗೆ ನೀಡುವುದು. ಅಗ್ಗದ ದರದಲ್ಲಿ ಭೂಮಿ, ಉಚಿತ ಕ-ರೆಂಟು - ನೀರು ಒದಗಿಸಿ, ತೆರಿಗೆಯಲ್ಲಿ ಸಬ್ಸಿಡಿ ನೀಡಿ, ಬ್ಯಾಂಕ್ ಲೋನ್ ಮನ್ನಾ ಮಾಡಿ, ಹೊಸ ಕಂಪನಿಗಳಿಗೆ 20 ಲಕ್ಷ ಕೋಟಿಯವರೆಗೂ ಉತ್ತೇಜನ ನಿಧಿ ಕೊಟ್ಟು ಪ್ರೋತ್ಸಾಹಿಸಲಾಗುತ್ತದೆ. ಸರ್ಕಾರದ ಒಡೆತನದಲ್ಲಿದ್ದ ರಸ್ತೆ, ವಿದ್ಯುಚ್ಛಕ್ತಿ, ಪೆಟ್ರೋಲ್, ಡೀಸೆಲ್, ಗ್ಯಾಸ್, ಮಿಲಿಟರಿ ಉತ್ಪಾದನೆ, ವಿಮಾನ, ರೈಲ್ವೆ, ಸ್ಟೀಲ್ - ಉಕ್ಕು - ಕಲ್ಲಿದ್ದಲನ್ನು ತಯಾರಿಸುವ ಕೈಗಾರಿಕೆಗಳು, ಬ್ಯಾಂಕ್ - ಎಲ್ ಐ ಸಿ, ಎಲ್ಲವುಗಳನ್ನೂ ಖಾಸಗೀಕರಣ ಮಾಡಿ ಖಾಸಗೀ ಖದೀಮರಿಗೆ ಅರ್ಪಿಸುವುದು. ಸರ್ವಂ ಕಾರ್ಪೋರೇಟ್ ಮಯಂ. ಕಾರ್ಮಿಕರ ಪಾಲಿಗೆ ಸರ್ವಂ ಸರ್ವನಾಶಂ. ಸಾರ್ವಜನಿಕರ ಮತ್ತು ದೇಶದ ಸಕಲ ಸಂಪತ್ತು ಅದಾನಿ - ಅಂಬಾನಿ ಸ್ವಾಹಂ ಸ್ವಾಹಂ ವಾಗುತ್ತಿದೆ. ಮಿಲಿಯಂತರ ಜನ ಹಸಿವು, ಬಡತನ, ನಿರುದ್ಯೋಗ, ಶಿಕ್ಷಣ, ಇನ್ನಿತರ ಸಮಸ್ಯೆಗಳಿಂದ ಜನ ಜರ್ಜರಿತರಾಗಿದ್ದಾರೆ .

ಕನಿಷ್ಠ ಶಿಕ್ಷಣ, ಆರೋಗ್ಯ, ಉದ್ಯೋಗ ಎಲ್ಲವೂ ಮಾರಾಟದ ವಸ್ತುವಾಗುತ್ತಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ದುಡಿಯುವ ಕಾರ್ಮಿಕವರ್ಗಕ್ಕೆ, ರೈತರಿಗೆ ವಿದ್ಯಾರ್ಥಿ ಯುವ ಜನ, ಮಹಿಳೆಯರಿಗೆ ನೀಡಿದ ಎಲ್ಲಾ ಭರವಸೆಗಳನ್ನು ಕೂಡಲೇ ಜಾರಿಗೆ ತರಬೇಕೆಂದು ಜೆಸಿಟಿಯು ಮತ್ತು ಎಸ್ ಕೆ ಎಮ್ ವತಿಯಿಂದ ಈ ಮೂಲಕ ಒತ್ತಾಯಿಸುತ್ತದೆ.

ಮುಖ್ಯವಾಗಿ ನಮ್ಮ ಬೇಡಿಕೆಗಳಾದ ಕೇಂದ್ರ ಸರ್ಕಾರವು ಜಾರಿ ಮಾಡಲು ಬಯಸುತ್ತಿರುವ "4 ಲೇಬರ್ ಕೋಡ್" ಗಳನ್ನು ಹಾಗೂ "ಕೃಷಿ ಉತ್ಪನ್ನಗಳ ಮಾರುಕಟ್ಟೆಗಾಗಿ ರಾಷ್ಟ್ರೀಯ ಚೌಕಟ್ಟು ನೀತಿ"ಯನ್ನು ಈ ಕೂಡಲೇ ಹಿಂಪಡೆಯಬೇಕು. ಕೇಂದ್ರ ರಾಜ್ಯ ಸರ್ಕಾರ ಕೊಟ್ಟ ಮಾತಿನಂತೆ ರೈತರಿಗೆ ಬೆಂಬಲ ಬೆಲೆ ಕಾನೂನು ಜಾರಿ ಮಾಡಬೇಕು. ಹಾಗೂ "ಭೂ ತಿದ್ದುಪಡಿ ಕಾಯ್ದೆ", "ಎಪಿಎಂಸಿ ಕಾಯ್ದೆ", "ಜಾನುವಾರು ಕಾಯ್ದೆ", ಬಗರ್ ಹುಕುಂ ರೈತರಿಗೆ ಹಕ್ಕುಪತ್ರ, ರೈತರ ಸಾಲಮನ್ನಾ ಮುಂತಾದ ಹಕ್ಕೊತ್ತಾಯಗಳ ಕುರಿತು ಚರ್ಚಿಸಲು ರೈತ ಮತ್ತು ಕಾರ್ಮಿಕ ಸಂಘಟನೆಗಳ ಜೊತೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕೂಡಲೇ ಸಭೆ ಕರೆಯಬೇಕು. ಎಲ್ಲಾ ಅಸಂಘಟಿತ ವಲಯದ ಕಾರ್ಮಿಕರಿಗೆ ಕಲ್ಯಾಣ ಮಂಡಳಿಯನ್ನು ಸ್ಥಾಪಿಸಿ ಸಾಮಾಜಿಕ ಭದ್ರತೆ, ಸವಲತ್ತುಗಳನ್ನು ಖಾತ್ರಿಪಡಿಸಿ. ದಿನದ ದುಡಿಮೆಯ ಅವಧಿಯನ್ನು 8 ಗಂಟೆಯಿಂದ 12 ಗಂಟೆಗೆ ಏರಿಸುವ ಕಾರ್ಮಿಕ ವಿರೋಧಿ ನಿಲುವು ಹಿಂಪಡಿಯಬೇಕು. ಎಲ್ಲಾ ನಿರುದ್ಯೋಗಿಗಳಿಗೆ ಉದ್ಯೋಗ ನೀಡಿ, ಉದ್ಯೋಗದ ಹಕ್ಕನ್ನು ಮೂಲಭೂತ ಸಾಂವಿಧಾನಿಕ ಹಕ್ಕನ್ನಾಗಿ ಮಾಡಿ, ಆಶಾ, ಅಂಗನವಾಡಿ, ಬಿಸಿಯೂಟ ಕಾರ್ಮಿಕರ ಸೇವೆಗಳನ್ನು ಖಾಯಂಗೊಳಿಸಿ, ಸರ್ಕಾರಿ ನೌಕರರನ್ನಾಗಿ ಪರಿಗಣಿಸಿ.

ಅನಾಹುತಕಾರಿ ಕಾರ್ಖಾನೆಗಳಲ್ಲಿ ಮಹಿಳೆಯರನ್ನು ದುಡಿಸುವುದು ಮಹಿಳಾ ಕಾರ್ಮಿಕರು ರಾತ್ರಿ ಪಾಳಿಯದಲ್ಲೂ ಕೆಲಸ ಮಾಡಿಸುವ ವಿಚಾರ ಕೈಬಿಡಬೇಕು. ಕಾರ್ಮಿಕರಿಗೆ ಪೆನ್ಷನ್, ಪಿಎಫ್, ಇಎಸ್‌ಐ ವೇಗವಾಗಿ ಜಾರಿಯಾಗಬೇಕು, ಕಂಪನಿಗಳಲ್ಲಿ ಉದ್ಯೋಗಿಗಳನ್ನು ವಜಾಗೊಳಿಸಬಾರದು ಎಂದು ಕೊಪ್ಪಳ ಜಿಲ್ಲಾ ಜಂಟಿ ಕಾರ್ಮಿಕ ಸಂಘಟನೆಗಳ ಸಮನ್ವಯ ಸಮಿತಿ ನೇತೃತ್ವದಲ್ಲಿ ಮುಖಂಡರಾದ ಎಐಯುಟಿಯುಸಿ ಶರಣು ಗಡ್ಡಿ ,ಸಿಐಟಿಯು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕಾಸಿಂ ಸರ್ದಾರ್, ಎಐಟಿಯುಸಿ ಜಿಲ್ಲಾ ಅಧ್ಯಕ್ಷ ಬಸವರಾಜ್ ಶೀಲವಂತರ್, ಜನಪರ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಎಸ್.ಎ.ಗಫಾರ್, ಪಾಸ್ಟರ್ಸ್ ಅಸೋಸಿಯೇಷನ್ ಜಿಲ್ಲಾ ಅಧ್ಯಕ್ಷ ಚನ್ನಬಸಪ್ಪ ಅಪ್ಪಣ್ಣವರ್, ಆಶಾ ಸಂಘದ ಕೊಪ್ಪಳ ತಾಲ್ಲೂಕ ಅಧ್ಯಕ್ಷೆ ಸುನೀತಾ ಆಚಾರ,

ಮುಖಂಡ ಗಾಳೆಪ್ಪ ಮುಂಗೋಲಿ, ಮುದುಕಪ್ಪ, ಈರಪ್ಪ, ವೇಕಟೇಶ್ ರೆಡ್ಡಿ, ಗ್ರಾಮ ಪಂಚಾಯತಿ ನೌಕರ ಸಂಘದ ತಾಲೂಕಾಧ್ಯಕ್ಷ ಅಂಬರೀಶ್ ಗಾಣಿಗ, ಸ್ವಚ್ಛ ವಾಹಿನಿಯ ಸಂಚಾಲಕಿ ರತ್ನ ಕೇಸ್ಲಾಪುರ್, ರಂಗಮ್ಮ, ತಾಜುದ್ದೀನ್ ಬೆಳಗಟ್ಟಿ, ಮಂಜುನಾಥ್, ಶಾಂತಮ್ಮ ಎಲಿಗಾರ್, ಪ್ರದೀಪ್ ಮುಂತಾದವರು ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಿದರು.

### ಪರಿಶಿಷ್ಟ ಜಾತಿ ಒಳ ಮೀಸಲಾತಿ ಸಮೀಕ್ಷೆ:

## ಆನ್ ಲೈನ್ ಮೂಲಕ ಸ್ವಯಂ ಘೋಷಣೆ ನೀಡಲು ಡಿ.ಸಿ. ಮನವಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.20-ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕವಾಗಿ ಹಿಂದುಳಿದವರನ್ನು ಗುರುತಿಸಲು ಪರಿಶಿಷ್ಟ ಜಾತಿಗಳಲ್ಲಿ (ಎಸ್‌ಸಿ) ಆಂತರಿಕ ಮೀಸಲಾತಿಯ ಬೇಡಿಕೆಗಳನ್ನು ಪರಿಹರಿಸಲು ಸರ್ಕಾರ ಪರಿಶಿಷ್ಟ ಒಳ ಮೀಸಲಾತಿ ಸಮೀಕ್ಷೆ ನಡೆಸುತ್ತಿದ್ದು, ಜಿಲ್ಲೆಯ ಜನತೆ https://schedule-castesurvey.karnataka.gov.in/selfdeclaration ಲಿಂಕ್ ಮೂಲಕ ಸ್ವಯಂ ಘೋಷಣೆ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ಬಿ.ಫೌ-ಜಿಯಾ ತರನ್ನುಮ್ ಮನವಿ ಮಾಡಿದ್ದಾರೆ.

ಮೇ 19 ರಿಂದ 25ರ ವರೆಗೆ ಅನ್ ಲೈನ್ ಮೂಲಕ ಮಾಹಿತಿ ಸಲ್ಲಿಸಲು ಅವಕಾಶ ನೀಡಿದ್ದು, ಆನ್ ಲೈನ್ ನೋಂದಣಿಗೆ ಆಧಾರ್ ಕಾರ್ಡ್, ಜಾತಿ ಪ್ರಮಾಣ ಪತ್ರದ ಆರ್.ಡಿ. ಸಂಖ್ಯೆ ಅವಶ್ಯಕವಾಗಿರುತ್ತದೆ. ಜಿಲ್ಲೆಯ ಪರಿಶಿಷ್ಟ ಜಾತಿಯ ಸಮುದಾಯ ನಿಗಧಿತ ಅವಧಿಯಲ್ಲಿ ಮಾಹಿತಿ ಸಲ್ಲಿಸುವ ಮೂಲಕ ಸಾಮಾಜಿಕ ಜವಾಬ್ದಾರಿಯಲ್ಲಿ ಭಾಗವಹಿಸಬೇಕೆಂದು ಅವರು ಕೋರಿದ್ದಾರೆ.

ನ್ಯಾಯಯುತ ಒಳ ಮೀಸಲಾತಿ ಹಂಚಿಕೆಗಾಗಿ ಸರ್ಕಾರ ನ್ಯಾಯಮೂರ್ತಿ ಡಾ. ಹೆಚ್.ಎನ್.ನಾಗಮೋಹನ ದಾಸ್ ನೇತೃತ್ವದಲ್ಲಿ ಏಕ ಸದಸ್ಯ ಆಯೋಗ ರಚಿಸಿದ್ದು, ಸರ್ಕಾರದ ಮಹತ್ವಾಕಾಂಕ್ಷೆಯ ದಿಟ್ಟ ಹೆಜ್ಜೆಯಾಗಿದೆ. ಪರಿಶಿಷ್ಟ ಜಾತಿಗೆ ಸೇರಿದವರು ತಮ್ಮ ಮೂಲ ಜಾತಿ, ಶಿಕ್ಷಣ, ವರಮಾನ, ಉದ್ಯೋಗ ಮತ್ತು ಇನ್ನಿತರ ನಿಖರ ಮಾಹಿತಿ ನೀಡುವ ಮೂಲಕ ಸಮೀಕ್ಷಾ ಕಾರ್ಯಕ್ಕೆ ಸಹಕರಿಸಬೇಕೆಂದು ತಿಳಿಸಿದ್ದಾರೆ. ಇನ್ನು ತಮ್ಮ ಜಾತಿ ಆದಿ ಕರ್ನಾಟಕ, ಆದಿ ದ್ರಾವಿಡ, ಆದಿ ಆಂಧ್ರ ಎಂದಾದಲ್ಲಿ ಮೂಲ ಜಾತಿ ನಮೂದಿಸುವುದು ಅಗತ್ಯ ಎಂದು ಜಿಲ್ಲಾಧಿಕಾರಿ ಬಿ.ಫೌ-ಜಿಯಾ ತರನ್ನುಮ್ ತಿಳಿಸಿದ್ದಾರೆ.

## ಅಫಜಲಪುರ ತಾತ್ಕಾಲಿಕ ಪಟ್ಟಿ ಪ್ರಕಟ: ಆಕ್ಷೇಪಣೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.20- 2022-23ನೇ ಸಾಲಿಗೆ ಅಫಜಲಪೂರ ಶಿಶು ಅಭಿವೃದ್ಧಿ ಯೋಜನೆಯಲ್ಲಿ ಖಾಲಿ ಇರುವ 01 ಅಂಗನವಾಡಿ ಕಾರ್ಯಕತೆ-ೞಯರ ಹಾಗೂ 02 ಸಹಾಯಕಿಯರ ಹುದ್ದೆಗಳಿಗೆ ಆಫ್‌ಲೈನ್ ಮೂಲಕ ಹಾಗೂ 2024-25ನೇ ಸಾಲಿಗೆ 16 ಅಂಗನವಾಡಿ ಕಾರ್ಯಕರ್ತೆಯರ ಹಾಗೂ 25 ಸಹಾಯಕಿಯರ ಹುದ್ದೆಗಳಿಗೆ ಆನ್‌ಲೈನ್ ಮೂಲಕ ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿ, ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಅಫಜಲಪೂರ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಪ್ರಕಟಿಸಲಾಗಿದೆ.

ಈ ತಾತ್ಕಾಲಿಕ ಆಯ್ಕೆಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ 2025ರ ಮೇ 28ರ ಮಧ್ಯಾಹ್ನ 1.30 ಗಂಟೆಯೊಳಗಾಗಿ ಅಫಜಲಪೂರ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಆಕ್ಷೇಪಣೆಗಳನ್ನು ಸಲ್ಲಿಸಬೇಕೆಂದು ಅಫಜಲಪೂರ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಹಾಪುರ ಆಸ್ಪತ್ರೆ ಆಡಳಿತ ವೈದ್ಯಾಧಿಕಾರಿಗಳಿಗೆ ಅತ್ಯುತ್ತಮ ಅಧಿಕಾರಿ ಗರಿ!



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ, ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ಉತ್ತಮ ಸೇವೆ ನೀಡಲೆಂದು ಕ್ಷೇತ್ರದ ಸಣ್ಣ ಕೈಗಾರಿಕಾ ಸಾರ್ವಜನಿಕ ಉಧ್ಯಮಗಳ ಮಂತ್ರಿಗಳಾದ ಶರಣಬಸ್ಸಪ್ಪಗೌಡ ದರ್ಶನಾಪುರವರು ದೂರ ದೃಷ್ಟಿಯಂತೆ ವಿವಿಧ ಯೋಜನೆಗಳಲ್ಲಿ ಅನುಧಾನಗಳ ನೀಡಿ ಆಸ್ಪತ್ರೆಯ ಮೂಲಭೂತ ಸೌಕರ್ಯಗಳಿಗೆ ಕಾರಣರಾಗಿದ್ದಾರೆ, ಅವರ ಮಾರ್ಗದರ್ಶನದಲ್ಲಿ ಇಂದು ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿಗಳಾದ ಡಾ, ಪದ್ಮಾನಂದ ಗಾಯಕವಾಡರವರಿಗೆ ರಾಷ್ಟ್ರೀಯ ಲಕ್ಷ ಯೋಜನಡಿಯಲ್ಲಿ ಅತ್ಯುತ್ತಮ ಮುಖ್ಯ ಆಡಳಿತ ಅಧಿಕಾರಿಗಳೆಂದು ಪ್ರಶಸ್ತಿ ನೀಡಲಾಯಿತು, ಆಸ್ಪತ್ರೆಯಲ್ಲಿ ಕಳೆದ ಒಂಬತ್ತು ತಿಂಗಳಿಂದಲೂ ನೆನೆಗುದಿಗೆ ಬಿದ್ದಿದ್ದ ಅಲ್ಟ್ರಾಸೌಂಡ್, ಸಿ,ಟಿ, ಸ್ಕ್ಯಾನಿಂಗ್, ಐಸಿಯೂ ಕೋಣೆ, ಮತ್ತು ಮಕ್ಕಳ ಸಂತನ ಹರಣ ಶಸ್ತ್ರಚಿಕಿತ್ಸೆ. ಗರ್ಭಿಣಿ ತಾಯಿಂದಿರಿಗೆ ತರ್ತು ಚಿಕಿತ್ಸೆ 24/7 ಸೇರಿದಂತೆ ಹಲವಾರು ಬಗೆಯ ಜನಪಯೋಗಿ ಆರೋಗ್ಯ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ, ಎನ್ನುವ ಮಾತು ಸಾರ್ವಜನಿಕ ವಲಯಗಳಲ್ಲಿ ಕೇಳಿ ಬರುತ್ತಿದೆ, ಅಲ್ಲದೆ ಆಸ್ಪತ್ರೆಯಲ್ಲಿ ಅಫಘಾತ, ಸಹಜ ಕಾಯಿಲೆಗಳಿಗೆ ನುರಿತ ತಜ್ಞ ವೈಧ್ಯರು ಸೂಕ್ತ ಅರೋಗ್ಯತಪಾಷಣೆ ಮಾಡುವದರ ಮುಖಾಂತರ ಜನಮನಾದಳದಲ್ಲಿ ಆಸ್ಪತ್ರೆಯ ಹೆಸರು ಕೇಳಿ ಬರುತ್ತಿದೆ, ಆಕ್ಷಿನ ಪ್ಲಾಂಟ್, ತಕ್ಷಣದಲ್ಲಿ ಪ್ರಯೋಗಾಲಯದ ವರದಿ, ಅಲ್ಲದೆ ಪ್ರಥಮ ಚಿಕಿತ್ಸೆಗೆಂದು ಎಕ್ಷರೆ ಮಾಡಿ ಮೂಳೆಗಳ ಕಲ್ಪನೆಗಳನ್ನು ಕಂಡು ಸೂಕ್ತ ಚಿಕಿತ್ಸೆ ನೀಡಲಾಗುತ್ತಿದೆ ಅಲ್ಲದೆ ಪ್ರತಿ ಮಂಗಳವಾರದಂದು ಸಂತಾನ ಹರಣ ಶಸ್ತ್ರಚಿಕಿತ್ಸೆ ಮಾಡಲಾಗುತ್ತದೆ ಮತ್ತು ಇನ್ನಿತರ ಹೊಟ್ಟೆಗಳಲ್ಲಿ ಗಡ್ಡೆ ಇತರೆ ಶಸ್ತ್ರ ಚಿಕಿತ್ಸೆಗಳು ನಿತ್ಯ ನಡೆಯುತ್ತಿವೆ ಎಂದು ಇಲ್ಲಿನ ಆರೋಗ್ಯ ಅಧಿಕಾರಿಗಳು ತಿಳಿಸಿದರು,

> "ಆಸ್ಪತ್ರೆಯಲ್ಲಿ ಪ್ರತಿ ವೈಧ್ಯರು ಪರಿಶ್ರಮದಿಂದ ಕರ್ತವ್ಯ ನಿರ್ವಹಣೆ ಮಾಡುತ್ತಿದ್ದರೂ, ಕರ್ತವ್ಯಗಳಿಗೆ ಅಡ್ಡಿಪಡಿಸುವ ಚಟುವಟಿಕೆಗಳು ನಡೆಯುತ್ತಿವೆ. ಈ ಅವ್ಯವಸ್ಥೆಯಿಂದ ಕರ್ತವ್ಯದಲ್ಲಿರುವ ಅಧಿಕಾರಿಗಳಿಗೆ ಮಾನಸಿಕ ಹಿಂಸೆಗೊಂಡು ಮನಸ್ಸು ಕ್ಷೀಣತೆಗೊಳ್ಳುತ್ತದೆ, ಸರ್ಕಾರದ ಮೇಲಾಧಿಕಾರಿಗಳು ನಿಯಮನುಸಾರವಾಗಿ ಸಾರ್ವತ್ರಿಕ ಕರ್ತವ್ಯ ನಿರ್ವಹಣೆಯಲ್ಲಿ ತೊಂದರೆ ಉಂಟಾದಲ್ಲಿ ಪರಿಗಣಿಸಿಬೇಕು, ಸಾರ್ವಜನಿಕ ಸೇವೆ ಮಾಡಲು ಆಸಕ್ತಿ ತುಂಬುವ ಕಾರ್ಯಕ್ಕೆ ಮುಂದಾದಲ್ಲಿ ಆರೋಗ್ಯ ಸಾಮಾಜ ನಿರ್ಮಾಣ ಸಾಧ್ಯವಾಗುತ್ತದೆ,

## ಡಯಟ್: ವಿವಿಧ ಕೋರ್ಸುಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ.20: ಇಲ್ಲಿನ ಯರಮರಸ್ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯಿಂದ 2025-26ನೇ ಸಾಲಿನ ಡಿ.ಇಎಲ್.ಇಡಿ ಹಾಗೂ ಡಿ.ಪಿ.ಇಡಿ ಕೋರ್ಸುಗಳಿಗೆ ಸರ್ಕಾರಿ ಕೋಟಾದ ಸೀಟುಗಳ ಪ್ರವೇಶಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಡಿ.ಇಎಲ್.ಇಡಿ. ಕೋರ್ಸಿನ ವಿವಿಧ ಮಾಧ್ಯಮಗಳು ಹಾಗೂ ಡಿ.ಪಿ.ಇಡಿ ಕೋರ್ಸಿನ ಪ್ರಥಮ ವರ್ಷದ ವ್ಯಾಸಂಗಕ್ಕಾಗಿ ಪ್ರವೇಶ ಬಯಸುವ ಅಭ್ಯರ್ಥಿಗಳು ಇಲಾಖೆಯ ವೆಬ್‌ಸೈಟ್ ವಿಳಾಸ: www.schooleducation.kar.nic.in ಅಂತರ್ಜಾಲದ ಮುಖಪುಟದಲ್ಲಿ ಪ್ರಕಟವಾಗುವ Application for Admission to D.el.Ed/ DpedCourse-2025-26 ಎಂಬುದನ್ನು ಕ್ಲೀಕ್ ಮಾಡಿದ ನಂತರ ಮೇಲೆ ಪ್ರಕಟವಾಗುವ ಅರ್ಜಿಯನ್ನು ಮುದ್ರಣ ಮಾಡಿ ಅರ್ಜಿ ಭರ್ತಿಮಾಡಿ ಹಾಗೂ ಬ್ಯಾಂಕ್ ಡಿ.ಡಿಯೊಂದಿಗೆ ಡಯಟ್ ಯರಮರಸ್ ಕಚೇರಿಗೆ ಜೂನ್ 05ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಅಭ್ಯರ್ಥಿಗಳು ಕೊನೆಯ ದಿನಾಂಕದವರೆಗೆ ಕಾಯದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ ಸಿಂಧನೂರನಲ್ಲಿ ಕಲಿಕಾ ಸೌಲಭ್ಯಗಳಿರುತ್ತವೆ.

ಹೆಚ್ಚಿನ ಮಾಹಿತಿಗಾಗಿ ರಾಯಚೂರಿನ ಯರಮರಸ್ ಶಾಲಾ ಶಿಕ್ಷಣ ಇಲಾಖೆಯ (ಡಯಟ್) ಉಪನಿರ್ದೇಶಕರು (ಅಭಿವೃದ್ಧಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 30 ವರ್ಷ ಮೇಲ್ಪಟ್ಟ ಪ್ರತಿಯೊಬ್ಬರು ನಿರಂತರ ರಕ್ತದೊತ್ತಡ ಪರೀಕ್ಷೆ ಮಾಡಿಸಿಕೊಳ್ಳಿ – ಡಾ.ನಂದಕುಮಾರ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: 30 ವರ್ಷ ಮೇಲ್ಪಟ್ಟ ಪ್ರತಿಯೊಬ್ಬರು ನಿರಂತರ ರಕ್ತದೊತ್ತಡ ಪರೀಕ್ಷೆ ಮಾಡಿಸಿಕೊಳ್ಳಬೇಕು. ಅಧೀಕ ರಕ್ತದೊತ್ತಡ ಕಂಡುಬಂದರೆ ನಿಯಂತ್ರಣಕ್ಕಾಗಿ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಚಿಕಿತ್ಸೆ ನೀಡಲಾಗುತ್ತದೆ ಎಂದು ಕೊಪ್ಪಳ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ನಂದಕುಮಾರ ಹೇಳಿದರು



ಅವರು ಶನಿವಾರ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಕೊಪ್ಪಳ ವಿಭಾಗಿಯ ಕಛೇರಿಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾ ಅಧಿಕಾರಿಗಳ ಘಟಕ, ಜಿಲ್ಲಾ ಎನ್.ಸಿ.ಡಿ ವಿಭಾಗ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ, ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ವಿಶ್ವರಕ್ತದೊತ್ತಡ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಜೀವನ ಶೈಲಿಯಿಂದ ಬರುವ ರೋಗಗಳಾದ, ಮಧುಮೇಹ, ಕ್ಯಾನ್ಸರ್, ಅಧೀಕ ರಕ್ತದೊತ್ತಡ, ಹೃದಯಘಾತ ಹಾಗೂ ಪಾರ್ಶ್ವವಾಯುಗಳಲ್ಲಿ ಅಧೀಕ ರಕ್ತದೊತ್ತಡ ಒಂದಾಗಿದೆ. ವಿಶ್ವ ಆರೋಗ್ಯಸಂಸ್ಥೆಯು ರಕ್ತದೊತ್ತಡದ ಬಗ್ಗೆ ಜಾಗೃತಿ ಮೂಡಿಸಲು ಪ್ರತಿ ವರ್ಷ ಮೇ 17 ರಂದು ವಿಶ್ವ ರಕ್ತದೊತ್ತಡ ದಿನಾಚರಣೆ ಕಾರ್ಯಕ್ರಮವನ್ನು ಆಚರಿಸಲು ನಿರ್ದೇಶನ ನೀಡಿರುತ್ತದೆ. ಸಾರ್ವಜನಿಕರಿಗೆ ಅಧೀಕರಕ್ತದೊತ್ತಡ ನಿಯಂತ್ರಣ ಹಾಗೂ ಉತ್ತಮ ಜೀವನ ಶೈಲಿಯ ಕುರಿತು ಅರಿವು ಮೂಡಿಸುವುದು ಈ ಕಾರ್ಯಕ್ರಮದ ಇದರ ಉದ್ದೇಶವಾಗಿದೆ. "ನಿಮ್ಮ ರಕ್ತದೊತ್ತಡವನ್ನು ನಿಖರವಾಗಿ ಅಳೆಯಿರಿ ಅದನ್ನು ನಿಯಂತ್ರಿಸಿ, ಹೆಚ್ಚು ಕಾಲ ಬದುಕಿ" ಎಂಬ ಈ ವರ್ಷದ ಘೋಷವಾಕ್ಯದೊಂದಿಗೆ ಕಾರ್ಯಕ್ರಮವನ್ನು ಆಚರಿಸಲಾಗುತ್ತದೆ ಎಂದರು.

ಅಧೀಕ ರಕ್ತದೊತ್ತಡ ಭಾರತದಲ್ಲಿ ಒಂದು ದೊಡ್ಡ ಸಾರ್ವಜನಿಕ ಆರೋಗ್ಯ ಸವಾಲಾಗಿದೆ. ನಗರ ಮತ್ತು ಗ್ರಾಮೀಣ ಪ್ರದೇಶಗಳ ಜನಸಂಖ್ಯೆಯಲ್ಲಿ ಇದರ ವ್ಯಾಪಕತೆ ಹೆಚ್ಚಾಗುತ್ತಿದೆ. ಭಾರತದಲ್ಲಿ ಇದ–ರಿಂದ ಹೃದಯಘಾತ ಮತ್ತು ಪಾರ್ಶ್ವವಾಯುನಂತಹ ಆರೋಗ್ಯ ಸಮಸ್ಯಗಳು ಉಂಟಾಗುತ್ತವೆ. 30 ವರ್ಷ ಮೇಲ್ಪಟ್ಟವರು ರಕ್ತದೊತ್ತಡ ಪರೀಕ್ಷೆಮಾಡಿಸಿಕೊಳ್ಳಬೇಕು. ಅಧೀಕ ರಕ್ತದೊತ್ತಡ ಕಂಡುಬಂದಲ್ಲಿ ಸಮೀಪದ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಚಿಕಿತ್ಸೆ ಪಡೆಯಬಹುದು. ವಿವಿಧ ಹಂತಗಳಲ್ಲಿ ಕೆಲಸ ಮಾಡುವ ಉದ್ಯೋಗಿಗಳು ಆರೋಗ್ಯದ ಕಡೆ ನಿರ್ಲಕ್ಷ್ಯ ಮಾಡದೇ ನಿರಂತರ ಪರೀಕ್ಷೆ ಮಾಡಿಸಿಕೊಳ್ಳಬೇಕು. ದಿನನಿತ್ಯ ಸೇವಿಸುವ ಆಹಾರದಲ್ಲಿ ಉಪ್ಪು ಮತ್ತು ಕೊಬ್ಬಿನಾಂಶಗಳು ಸೀಮಿತವಾಗಿರಬೇಕು. ಪೌಷ್ಠಿಕ ಆಹಾರ ಸೇವಿಸಬೇಕು. ಪ್ರತಿದಿನ ಕನಿಷ್ಠ ಪಕ್ಷ ಒಂದುಗಂಟೆ ಕಾಲ ದೈಹೀಕ ಚಟುವಟಿಕೆ ನಡೆಸುವುದು, ಯೋಗ, ದ್ಯಾನ ಮಾಡುವುದು ಮತ್ತು ಹೊರಗಿನ ಆಹಾರ ಪದಾರ್ಥಗಳ ಸೇವನೆ ಮಾಡಬಾರದು. ಧೂಮಪಾನ–ಮಧ್ಯಪಾನ ತೆಜಿಸಿ, ಉತ್ತಮ ಆಹಾರ ಪದ್ದತಿಯನ್ನು ಅನುಸರಿಸಬೇಕೆಂದು ಹೇಳಿದರು.

ಕೊಪ್ಪಳ ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ. ಹೆಚ್.ಪ್ರಕಾಶ ಅವರು, ಮನುಷ್ಯನ ಜೀವಿತ ಅವಧಿಯ ಬಗ್ಗೆ ಟೆಲಿ ಮನಸ್, ಇ–ಸಂಜೀವಿನ ಕುರಿತು ವಿವರವಾಗಿ ಮಾತನಾಡಿದರು.

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಕೊಪ್ಪಳ ವಿಭಾಗಿಯ ತಾಂತ್ರಿಕ ಶಿಲ್ಪಿ ಡಾ. ಬಿ.ವಿ ಭಟ್ಟರ್ ಅವರು ಮಾತನಾಡಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಹಮ್ಮಿಕೊಳ್ಳಲಾದ ಈ ಕಾರ್ಯಕ್ರಮ ಇಂದಿನ ಅಧಿಕಾರಿ, ಸಿಬ್ಬಂದಿಗಳಿಗೆ ಬಹಳ ಪ್ರಯೋಜನವಾಗಿವೆಣಟಿಜಜಜಿಟಿಜಜ. ನೌಕರರು ವಿವಿಧ ಅಸಾಂಕ್ರಾಮಿಕ ರೋಗಗಳ ಬಗ್ಗೆ ಮಾಹಿತಿಯ ಪಡೆದುಕೊಂಡು ತಮ್ಮ ತಮ್ಮ ಗ್ರಾಮಗಳಲ್ಲಿ, ವಾರ್ಡ್‌ಗಳಲ್ಲಿ ಹಾಗೂ ಸುತ್ತ–ಮುತ್ತಲಿನ ಸಾರ್ವಜನಿಕರಿಗೆ ಅರಿವು ಮೂಡಿಸುವಂತೆ ಕರೆ ನೀಡಿದರು.

ಈ ಕಾರ್ಯಕ್ರಮದಲ್ಲಿ ಕೊಪ್ಪಳ ವೈದ್ಯಕೀಯ ಮಹಾವಿದ್ಯಾಲಯದ ಕಮಿನ್ಯೂಟಿ ಮೆಡಿಸಿನ್ ವಿಭಾಗದ ವೈದ್ಯಾಧಿಕಾರಿಗಳಾದ ಡಾ.ಮನು, ಡಾ.ಅಂಜನಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವ್ಹಿ.ಪಿ., ಕ.ಕ.ರ.ಸಾ.ನಿ ಕೊಪ್ಪಳ ವಿಭಾಗದ ಸಹಾಯಕ ಆಡಳಿತಾಧಿಕಾರಿ ಸಂಜೀವ್‌ಕುಮಾರ, ಅಂಕಿಸಂಖ್ಯೆಗಳ ಅಧಿಕಾರಿ ಕೆ.ದೇವರಾಜ, ಭದ್ರತಾ ಅಧಿಕಾರಿ ಶ್ರೀದೇವಿ, ಎನ್.ಸಿ.ಡಿ ಕಾರ್ಯಕ್ರಮದ ಸಲಹೆಗಾರ ಡಾ. ಜಯಶ್ರೀ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಲ್.ವಿ ಸಜ್ಜನರ್, ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿಗಳಾದ ರಾಜಕುಮಾರ ಹಾಗೂ ಸುಧೀರ್, ಆಪ್ತಸಮಾಲೋಚಕಿ ಕೆ.ಶಾಂತಮ್ಮ ಸೇರಿದಂತೆ ಇತರೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದ ನಂತರ ಕ.ಕ.ರ.ಸಾ.ನಿ ಕೊಪ್ಪಳ ವಿಭಾಗದ ಕಛೇರಿಯ ಎಲ್ಲಾ ಅಧಿಕಾರಿ, ಸಿಬ್ಬಂದಿಗಳಿಗೆ ಆರೋಗ್ಯತಪಾಸಣಾ ಶಿಬಿರ ಹಮ್ಮಿಕೊಂಡು, ಚಿಕಿತ್ಸೆ ನೀಡಲಾಯಿತು.

## ಬಿಎಸ್‌ಪಿಎಲ್/ಎಂಎಸ್‌ಪಿಎಲ್ ಸೇರಿ ಕಾರ್ಖಾಗಳ ವಿರುದ್ಧ 'ಪೇಂಟ್ ಅಭಿಯಾನ'




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ನಗರಕ್ಕೆ ಹೊಂದಿಕೊಂಡು ಸ್ಥಾಪನೆಗೆ ಸಿದ್ಧವಾದ ಎಂಎಸ್‌ಪಿಎಲ್ ಅಥವಾ ಬಿಎಸ್‌ಪಿಎಲ್ ಹಾಗೂ ಕಿರ್ಲೋಸ್ಕರ್, ಕಲ್ಯಾಣ ಸೇರಿ ಇತರೆ ಕಾರ್ಖಾನೆಗಳ ಆರಂಭ, ವಿಸ್ತರಣೆ ವಿರೋಧಿಸಿ ನಡೆಯುತ್ತಿರುವ ಜನಾಂದೋಲನಕ್ಕೆ ಮತ್ತೊಂದು ರೀತಿಯ ಹೋರಾಟ ಸೇರ್ಪಡೆಯಾಗಿದ್ದು ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ವತಿಯಿಂದ "ಪೇಂಟ್ ಅಭಿಯಾನ"ವನ್ನು ಆರಂಭಿಸಲಾಗಿದೆ.

ಕೊಪ್ಪಳದ ವಿವಿದೆಡೆ ಮತ್ತು ಬಾದಿತ ಪ್ರದೇಶಗಳ ಹಳ್ಳಿಗಳಲ್ಲಿ ಕಾರ್ಖಾನೆ ವಿರುದ್ಧ ಮತ್ತು ಅದ–ರಿಂದ ಆಗುತ್ತಿರುವ ಹಾನಿಯ ಬಗ್ಗೆ ಜನಜಾಗೃತಿ ಗೋಡೆ ಬರಹಗಳನ್ನು ಬರೆಯುವ ಉದ್ದೇಶ ಈ ಪೇಂಟ್ ಅಭಿಯಾನ ಹೊಂದಿದ್ದು, ಈ ಪೇಂಟ್ ಅಭಿಯಾನವನ್ನು ಜನಾಂದೋಲನವಾಗಿ ಸಹಕಾರದ ತತ್ವದಲ್ಲಿ ಮಾಡುವ ಉದ್ದೇಶದಿಂದ ಎಲ್ಲರನ್ನೂ ಒಳಗೊಳ್ಳುವ ಉದ್ದೇಶದಿಂದ ಗೋಡೆ ಬರಹಕ್ಕೆ ಅಗತ್ಯ ಇರುವ ಬಣ್ಣಗಳನ್ನು ಕೊಪ್ಪಳ ಭಾಗ್ಯನಗರದ ವಿವಿಧ ಬಣ್ಣದ ವ್ಯಾಪಾರಿಗಳಿಂದ ದೇಣಿಗೆ ರೂಪದಲ್ಲಿ ಪಡೆದು ಗೋಡೆ ಬರಹಗಳನ್ನು ಮಾಡಲು ಸಮಿತಿ ನಿರ್ಧರಿಸಿ ಇಂದು ಅದಕ್ಕೆ ಚಾಲನೆ ನೀಡಲಾಗಿದೆ.

ಮೊದಲು ನಗರದ ಕುಷ್ಟಗಿ

## ವರುಣನ ಆಗಮನಕ್ಕೆ ನರೇಗಾ ನಾರಿಯರ ನೃತ್ಯ ಸಂಗಮ





ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಕುಕನೂರ ತಾಲೂಕಿನ ಇಟಗಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಅನುಷ್ಠಾನಗೊಂಡ ಸಾಮೂಹಿಕ ಬದು ನಿರ್ಮಾಣ ಕಾಮಗಾರಿಗಳಲ್ಲಿ ನೀರು ತುಂಬಿದ್ದರಿಂದ ಕೂಲಿಕಾರರು ಕಾಮಗಾರಿ ಸ್ಥಳದಲ್ಲಿ ಹಾಡು ಹಾಡಿ, ಹಾಡಿಗೆ ನೃತ್ಯ ಮಾಡಿ ಮಳೆರಾಯನಿಗೆ ಧನ್ಯವಾದ ಹೇಳಿ ಸಂಭ್ರಮದಿಂದ ನೃತ್ಯ ಮಾಡಿದ್ದಾರೆ.

ಇಳಿಗೆ ಮಳೆ ಮಳೆಯಿಂದ ಭೂರಮೆಗೆ ಜೀವಕಳೆ ಎಂಬಂತೆ ಮಳೆಯಿಂದ ಕಾಮಗಾರಿಯಲ್ಲಿ ನೀರು ತುಂಬಿದ್ದರಿಂದ ಭೂರಮೆ ಸುಂದರವಾಗಿ ಕಾಣುವುದರೊಂದಿಗರ ಅನ್ನದಾತನ ಕಣ್ಣಿನಲ್ಲಿ ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ. ನರೇಗಾ ಕೂಲಿಕಾರರು ಮಾಡಿದ ಕೆಲಸಕ್ಕೆ ಕೂಲಿ, ಕೂಲಿ ಕೆಲಸದಲ್ಲಿ ನೆಮ್ಮದಿಯ ಬದುಕು, ಮಾಡಿದ ಕೆಲಸಕ್ಕೆ ಸಾರ್ಥಕತೆ ಒದಗಿದ್ದಕ್ಕೆ ನರೇಗಾ ಯೋಜನೆಗೆ ಧನ್ಯವಾದ ಹೇಳಿದ್ದಾರೆ.

### ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಸಮೀಕ್ಷೆ:

## ಆನ್‌ಲೈನ್ ಮೂಲಕ ಸ್ವಯಂಘೋಷಣೆಗೆ ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ20–ನ್ಯಾಯಮೂರ್ತಿ ಡಾ. ಹೆಚ್.ಎನ್.ನಾಗಮೋಹನ ದಾಸ್ ಅವರ ಏಕ ಸದಸ್ಯ ವಿಚಾರಣಾ ಆಯೋಗದ ನಿರ್ದೇಶನದಂತೆ ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಸಮೀಕ್ಷೆ ಕಾರ್ಯವು ಪ್ರಸ್ತುತ ಪ್ರಗತಿಯಲ್ಲಿದೆ. ಮೇ 05 ರಿಂದ ಮನೆ–ಮನೆ ಸಮೀಕ್ಷೆ ನಡೆಸುತ್ತಿದ್ದು, ಸಮೀಕ್ಷೆಯಲ್ಲಿ ಒಂದು ವೇಳೆ ಕೈಬಿಟ್ಟು ಹೋದಂತಹ ಪರಿಶಿಷ್ಟ ಜಾತಿಯ ಕುಟುಂಬದವರು ಈ ಕೆಳಕಂಡಂತೆ ಆನ್‌ಲೈನ್ ಲಿಂಕ್ ಮೂಲಕ ಸ್ವಯಂಘೋಷಣೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

**ಆನ್‌ಲೈನ್ ಮೂಲಕ ಸ್ವಯಂ ಘೋಷಣೆ:** ಮನೆ–ಮನೆ ಭೇಟಿ ಸಂದರ್ಭದಲ್ಲಿ ತಮ್ಮ ಮಾಹಿತಿಯನ್ನು ನೀಡದವರು ನೇರವಾಗಿ ಆನ್‌ಲೈನ್ ಲಿಂಕ್ (https://schedulecastesurvey,karnataka.gov.in/selfdeclaraion) ರ ಮೂಲಕ ಮೇ 19 ರಿಂದ ಮೇ 28 ರವರೆಗೆ ಸ್ವಯಂಘೋಷಣೆ ಮಾಡಿಕೊಳ್ಳಲು ಕಲ್ಪಿಸಲಾಗಿದೆ.

ಆನ್‌ಲೈನ್‌ನಲ್ಲಿ ಸ್ವಯಂಘೋಷಣೆ ಹೇಗೆ ಮಾಡಿಕೊಳ್ಳಬೇಕು ಎಂಬುದರ ಬಗ್ಗೆ ಯೂಟ್ಯೂಬ್ ಲಿಂಕ್ (https://youtu.be/VASEcMhL930) ಮೂಲಕ ತಿಳಿದುಕೊಳ್ಳಬಹುದು.

ಎಲ್ಲಾ ಪ.ಜಾತಿ ಬಾಂದವರು ತಮ್ಮ ಜಾತಿ, ಉಪಜಾತಿ ವಿವರಗಳನ್ನು ದಾಖಲಾತಿಗಳನ್ನು ಉಪಯೋಗಿಸಿಕೊಳ್ಳಲು ಸ್ವ–ಯಂದೃಢೀಕರಣ ಮಾಡಿಕೊಳ್ಳಬುಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಬಿ.ಮಲ್ಲಿಕಾರ್ಜುನ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ. 22 ರಂದು ಕೊಪ್ಪಳ ಗವಿಮಠ ಕ್ಯಾಂಪಸ್ ನಲ್ಲಿ ಬೃಹತ್ ಉದ್ಯೋಗ ಮೇಳ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬಳ್ಳಾರಿಯ ಸಮರ್ಥನಂ ಅಂಗವಿಕಲರ ಸಂಸ್ಥೆ ಹಾಗೂ ಕೊಪ್ಪಳದ ಶ್ರೀ ಗವಿಸಿದ್ದೇಶ್ವರ ಕಾಲೇಜ್ ಆಫ್ ಎಜ್ಯುಕೇಶನ್ (ಬಿ.ಇಡಿ) ಇವರ ಸಂಯುಕ್ತಾಶ್ರಯದಲ್ಲಿ ಬೃಹತ್ ಉದ್ಯೋಗ ಮೇಳವನ್ನು ಗವಿಮಠ ಕ್ಯಾಂಪಸ್ ನಲ್ಲಿ ಮೇ. 22 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ಹಮ್ಮಿಕೊಳ್ಳಲಾಗಿದೆ.

ಈ ಬೃಹತ್ ಉದ್ಯೋಗ ಮೇಳದಲ್ಲಿ ಕೊಪ್ಪಳ, ಹುಬ್ಬಳ್ಳಿ, ಬೆಂಗಳೂರು, ಬೆಳಗಾವಿ, ಬಳ್ಳಾರಿ, ಹಾಸನ, ಶಿವಮೊಗ್ಗ ಹಾಗೂ ಇತರೆ ಭಾಗಗಳ ಪ್ರತಿಷ್ಠಿತ ಕಂಪನಿಗಳು ಭಾಗವಹಿಸಲಿದ್ದು, ತಮ್ಮಲ್ಲಿನ ಹುದ್ದೆಗಳನ್ನು ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲಿದ್ದಾರೆ. 18 ರಿಂ 35 ವರ್ಷದ ಆಸಕ್ತ ನಿರುದ್ಯೋಗ ಪುರುಷ, ಮಹಿಳಾ ಹಾಗೂ ವಿಕಲಚೇತನ ಅಭ್ಯರ್ಥಿಗಳು ಈ ಬೃಹತ್ ಉದ್ಯೋಗ ಮೇಳದಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬಹುದಾಗಿದೆ.

ವಿದ್ಯಾರ್ಹತೆ: ಎಸ್.ಎಸ್.ಎಲ್.ಸಿ, ಪಿಯುಸಿ, ತತ್ಸಮಾನ, ಐ.ಟಿ.ಐ, ಡಿಪ್ಲೊಮಾ, ಕಂಪ್ಯೂಟರ್ ತರಬೇತಿ ಹಾಗೂ ಯಾವುದೇ ಪದವಿ ಅಭ್ಯರ್ಥಿಗಳು, ತಮ್ಮ ವಿದ್ಯಾರ್ಹತೆಯ ಎಲ್ಲ ಪ್ರಮಾಣ ಪತ್ರಗಳ 10 ಪ್ರತಿಗಳೊಂದಿಗೆ ಮತ್ತು ಆಧಾರ ಕಾರ್ಡಿನ ಪ್ರತಿ, ಬಯೋಡಾಟಾ(ಖಜಣಟಜ) ಹಾಗೂ ಪಾಸ್ ಪೋರ್ಟ್ ಅಳತೆಯ 2 ಭಾವಚಿತ್ರಗಳೊಂದಿಗೆ ಬೃಹತ್ ಉದ್ಯೋಗ ಮೇಳದಲ್ಲಿ ಭಾಗವಹಿಸಿ, ಉದ್ಯೋಗದ ನೆರವನ್ನು ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕೊಪ್ಪಳ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಕಛೇರಿ ಮೊ.ನಂ:9353515518ಗೆ ಸಂಪರ್ಕಿಸುವಂತೆ ಕೊಪ್ಪಳ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ಸೇಲ್ ಡೀಡ್ ಡಾಕುಮೆಂಟ್ ಕಳೆದಿವೆ.

ನಾನು ಅಂದರೆ ಶಿವರಾಜ ತಂದೆ ಮಲ್ಲಿಕಾರ್ಜುನ ತ್ರಿಪುರಾಂತನ ನಿವಾಸಿಯಾಗಿದ್ದು, ನನ್ನ ಮನೆಯ ಸೇಲ್ ಡೀಡ್ ದಾಖಲೆಗಳು ಸರಸ್ವತಿ ಗಂಡ ಮಲ್ಲಿಕಾರ್ಜುನ ಇವರ ಹೆಸರಿನ ದಾಖಲೆ; ಸಂಖ್ಯೆ 2028/2001-2002 ದಿನಾಂಕ 02-08-2001 ಈ ಸಂಖ್ಯೆಯ ದಾಖಲೆಗಳು ದಿನಾಂಕ 10-5-2025 ರಂದು ಅಂಬೇಡ್ಕರ ವೃತ್ತದಲ್ಲಿ ಇರುವ ಅಂಗಡಿಗೆ ಝುರಾಕ್ಸ್ ಮಾಡಿಸಲು ಹೋದಾಗ ಕಳೆದು ಹೋಗಿರುತ್ತವೆ. ಕಾಂಪ್ಲೇಂಟ್ ಸಂಖ್ಯೆ; 1608077/2025 ದಿ: 15-05-2025 ಇದ್ದು, ಯಾರಿಗಾದರು ಸಿಕ್ಕರೆ ದಯವಿಟ್ಟು ಈ ವಿಳಾಸಕ್ಕೆ ತಲುಪಿಸಬೇಕೆಂದು ಮನವಿ.

ಶಿವರಾಜ ತಂದೆ ಮಲ್ಲಿಕಾರ್ಜುನ ಪೂಜಾರಿ ಮನೆ ಸಂಖ್ಯೆ; 8684/23, ತ್ರಿಪುರಾಂತ ಬಸವಕಲ್ಯಾಣ. **ಮೋ; 9008132686**


### ಕಲಬುರಗಿ: ಮೆಟ್ರಿಕ್ ನಂತರ ವಿದ್ಯಾರ್ಥಿ

## ನಿಲಯಗಳಲ್ಲಿ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.20–ಕಲಬುರಗಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ 2025–26ನೇ ಸಾಲಿಗೆ (ಪಿ.ಯು.ಸಿ, ಐ.ಟಿ.ಐ. ಮತ್ತು ಡಿಪ್ಲೋಮಾ ವಿದ್ಯಾರ್ಥಿಗಳಿಗೆ ಮಾತ್ರ) ಹೊಸದಾಗಿ ಪ್ರವೇಶ ಪಡೆಯಲು ಪ್ರವರ್ಗ–1, 2ಎ, 2ಬಿ, 3ಎ, 3ಬಿ ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

## ಕೆರೆಯಾಗಿ ಪರಿವರ್ತನೆ ಕಣ್ಮುಚ್ಚಿ ಕುಳತಿರುವ ಅಧಿಕಾರಿಗಳು

ಮಲ್ಲಮ್ಮ ನುಡಿ ವಾರ್ತೆ



ಕೊಪ್ಪಳ : ಕುಷ್ಟಗಿ ಕೊಪ್ಪಳ ಹೆದ್ದಾರಿ ಕೊಪ್ಪಳ ತಾಲೂಕಿನ ಇಲಕಲ್ ಗಡ ಗ್ರಾಮದಲ್ಲಿ ಹಾದು ಹೋಗಿರುವ ಕುಷ್ಟಗಿ ಕೊಪ್ಪಳ ಹೆದ್ದಾರಿಯ ಪರಿಸ್ಥಿತಿ ಇಲಕಲಗಡ ಬಸ್ ನಿಲ್ದಾಣದ ಮುಂಭಾಗದಲ್ಲಿರುವ ರಸ್ತೆಯಲ್ಲಿ ಸುಮಾರು ವರ್ಷಗಳಿಂದ ಈ ಸಮಸ್ಯೆ ಕಾಡುತ್ತಿದೆ ಈ ಸಮಸ್ಯೆಗೆ ಸಾಕಷ್ಟು ಬಾರಿ ಸಂಬಂಧ ಪಟ್ಟ ಅಧಿಕಾರಿಗಳಿಗೆ ಮತ್ತು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಗಮನಕ್ಕೆ ತಂದರು ತೇಪೆ ಹಾಕುವ ಕೆಲಸವನ್ನು ಮಾಡುತ್ತಿದ್ದಾರೆ ಮಳೆ ಬಂದರೆ ಸಾಕು ರಸ್ತೆ ಕೆರೆಯಂತಾಗುತ್ತದೆ ದಿನಾಲು ನೂರಾರು ಗಾಡಿಗಳು ಓಡಾಡುವ ರಸ್ತೆಯಾಗಿದ್ದು ಸಾಕಷ್ಟು ಅವಗಡುಗಳು ಸಂಭವಿಸಿರುತ್ತವೆ . ಈ ನೀರಿನಲ್ಲಿ ತಗ್ಗು ಇರುವುದು ಕಾಣದೆ ವಾಹನ ಸವಾರರು ಅದರಲ್ಲಿ ಕುಟುಂಬ ಸಮೇತ ಬಿದ್ದಿರುವ ಉದಾಹರಣೆಗಳು ಸಾಕಷ್ಟಿವೆ ವರದಿಗಾರರೊಂದಿಗೆ ತಮ್ಮ ಸಮಸ್ಯೆಯನ್ನು ಹಂಚಿಕೊಂಡ ನಾಗರಾಜ್ ಕಟ್ಟಿಮನಿ, ಸುಮಾರು ವರ್ಷಗಳಿಂದ ಈ ಸಮಸ್ಯೆ ನಮ್ಮನ್ನು ಕಾಡುತ್ತಿದೆ ಸಾಕಷ್ಟು ದುರ್ಘಟನೆಗಳು ನಡೆದಿದೆ ಇನ್ನುಂದಾದರೂ ಎಚ್ಚೆತ್ತುಕೊಂಡು ರಸ್ತೆಯನ್ನು ಸರಿಪಡಿಸದಿದ್ದರೆ ಮುಂದಿನ ದಿನಗಳಲ್ಲಿ ಉಗ್ರವಾದ ಹೋರಾಟವನ್ನು ಮಾಡುತ್ತೇವೆ ಎಂದು ತಮ್ಮ ಅಳಲನ್ನು ತೋಡಿ–ಕೊಂಡರು . ಈ ಸಂದರ್ಭದಲ್ಲಿ ನಿತೀಶ್ ಗೌಡರ್ ಪ್ರದೀಪ್ ಮನ್ನಾಪುರ್ ಉದಯ್ ಕುಮಾರ್ ಶರಣಪ್ಪ ಬೇಕರಿ ವೆಂಕನಗೌಡ ಮೇಟಿ ಶಂಕರ್ ನಾಯಕ್ ಉಪಸ್ಥಿತರಿದ್ದರು.

## ಅಪೌಷ್ಠಿಕತೆ ನಿವಾರಣೆಗೆ ಪಾಲಕರು ಸಹಕರಿಸಿ: ಡಿಹೆಚ್‌ಓ ಡಾ.ಯಲ್ಲಾ ರಮೇಶಬಾಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 19–ಮಕ್ಕಳಿಗೆ ವಯೋಸಹಜ ತೂಕ ಹಾಗೂ ಆರೋಗ್ಯ ಸುರಕ್ಷತೆಗಾಗಿ ವಿಶೇಷ ಬಾಲಚೈತನ್ಯ ಮಕ್ಕಳ ಆರೈಕೆ–ಯಡಿ ಮಕ್ಕಳ ತಜ್ಞರಿಂದ ಪರೀಕ್ಷೆ ಮಾಡಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಸೋಮವಾರದಂದು ಬಳ್ಳಾರಿ ತಾಲ್ಲೂಕಿನ ಕೊಳಗಲ್ಲು ಗ್ರಾಮದಲ್ಲಿ ಐದು ವರ್ಷದೊಳಗಿನ ಮಕ್ಕಳ ಮನೆಗೆ ಭೇಟಿ ನೀಡಿ ಪಾಲಕರ ಜೊತೆ ಮಕ್ಕಳ ಆರೋಗ್ಯ ವಿಚಾರಿಸಿ ಅವರು ಮಾತನಾಡಿದರು.

ಹುಟ್ಟಿದ ಮಗುವಿನ ಸಹಜ ತೂಕ 2.5 ಕೆ.ಜಿ ಇದ್ದರೆ ಆ ಮಗು ಸಹಜ ತೂಕದ ಮಗುವಾಗಿರುತ್ತದೆ. ಒಂದು ವೇಳೆ ಕಡಿಮೆ ಇದ್ದರೆ ಸೂಕ್ತ ಚಿಕಿತ್ಸೆಗೆ ಒಳಪಡಿಸಲಾಗುತ್ತದೆ. ಐದು ವರ್ಷದ ಮಗುವಿನ ಆರೋಗ್ಯದ ದೃಷ್ಠಿಯಿಂದ ಬಾಲಚೈತನ್ಯ ಕಾರ್ಯಕ್ರಮದಡಿ ತಾಲ್ಲೂಕು ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಮಕ್ಕಳ ತಜ್ಞ ವೈದ್ಯರ ಮೂಲಕ ಮಾಡಲಾಗುವ ತಪಾಸಣಾ ಶಿಬಿರದಲ್ಲಿ ಪಾಲಕರು ಮಕ್ಕಳ ಪರೀಕ್ಷೆ ಮಾಡಿಸಬೇಕು ಎಂದು ಅವರು ತಿಳಿಸಿದರು.

ಸಾಮಾನ್ಯವಾಗಿ ಒಂದು ವರ್ಷದ ಮಗು 10 ಕೆ.ಜಿ ಮೇಲ್ಪಟ್ಟು, ಎರಡು ವರ್ಷದ ಮಗು 12 ಕೆ.ಜಿ, ಮೂರು ವರ್ಷದ ಮಗು 14 ಕೆ.ಜಿ, 4 ವರ್ಷದ ಮಗು 16 ಕೆ.ಜಿ ಮತ್ತು 5 ವರ್ಷದ ಮಗು 18 ಕೆ.ಜಿ ಇರುವುದು ಮಗುವಿನ ಸಹಜ ತೂಕ ಮತ್ತು ಉತ್ತಮ ಆರೋಗ್ಯವನ್ನು ಸೂಚಿಸುತ್ತದೆ ಎಂದು ತಿಳಿಸಿದರು.

ಮಕ್ಕಳ ಆರೋಗ್ಯದಲ್ಲಿ ಬೇರೆ ಯಾವುದಾದರೂ ಅರೋಗ್ಯ ಸಮಸ್ಯೆ ಕಂಡುಬಂದಲ್ಲಿ, ಬೆಳವಣಿಗೆ ಕುಂಟಿತವಾದಲ್ಲಿ, ಆಹಾರ ಸೇವನೆಗೆ ಹಿಂದೇಟು ಹಾಕುತ್ತಿದ್ದರೆ, ಪದೇಪದೇ ಕಾಯಿಲೆಗೆ ಒಳಗಾಗುತ್ತಿದ್ದರೆ ಮಗುವಿನ ಬೆಳವಣಿಗೆಗೆ ಅಡ್ಡಿಯುಂಟಾಗುತ್ತದೆ. ಈ ಹಿನ್ನಲೆಯಲ್ಲಿ ವೈದ್ಯರು ಸೂಚಿಸಿದ ಔಷಧಿ ಹಾಗೂ ಮಗುವಿನ ವಯಸ್ಸು 06 ತಿಂಗಳು ತುಂಬುವವರೆಗೆ ತಾಯಿ ಹಾಲು ನೀಡಬೇಕು. ನಂತರದಲ್ಲಿ ಪೂರಕ ಪೌಷ್ಟಿಕ ಆಹಾರ ಉಣಿಸುವ ಮೂಲಕ ಮಕ್ಕಳ ಆರೋಗ್ಯವಂತರನ್ನಾಗಿ ಮಾಡಲು ಪಾಲಕರು ವಿಶೇಷ ಆರೈಕೆ ಕೈಗೊಳ್ಳಬೇಕು ಎಂದು ಅವರು ತಿಳಿಸಿದರು.

ಪೌಷ್ಠಿಕ ಪುನಶ್ವೇತನ ಕೇಂದ್ರ: ಒಂದುವೇಳೆ ಮೇಲಿನವುಗಳೆಲ್ಲವೂಗಳ ಆರೈಕೆಯಿಂದ ಮಗುವಿನ ತೂಕದಲ್ಲಿ ಏರಿಕೆ, ಆರೋಗ್ಯದಲ್ಲಿ ಸುಧಾರಣೆ ಕಂಡುಬರದೇ ಇದ್ದಲ್ಲಿ ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರದಲ್ಲಿ ಪೌಷ್ಟಿಕ ಪುನಶ್ವೇತನ ಕೇಂದ್ರ ಇದ್ದು, ಇಲ್ಲಿ 14 ದಿನಗಳ ವರೆಗೆ ಮಗುವಿನ ಸೂಕ್ತ ಆರೈಕೆಗಾಗಿ ತಾಯಿಯು ವಸತಿ ಕೈಗೊಳ್ಳಲು ಅವಕಾಶದೊಂದಿಗೆ ಮಗುವಿನ ಎಲ್ಲ ಪರೀಕ್ಷೆಗಳನ್ನು ಕೈಗೊಳ್ಳಲು ಕ್ರಮವಹಿಸಲಾಗುವುದು. ಅದೇರೀತಿಯಾಗಿ ಸಂಡೂರು, ಸಿರುಗುಪ್ಪ, ಕಂಪ್ಲಿ ತಾಲ್ಲೂಕು ಸರಕಾರಿ ಆಸ್ಪತ್ರೆಗಳಲ್ಲಿ ಸಹ ಈ ಸೌಲಭ್ಯವಿದ್ದು ಇದರು ಸದುಪಯೋಗ ಪಡೆಯಲು ಎಂದು ಡಿಹೆಚ್‌ಓ ವಿನಂತಿಸಿದರು.

ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣಾಧಿಕಾರಿ ಮತ್ತು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಆರ್.ಅಬ್ದುಲ್ಲಾ ಅವರು ಮಾತನಾಡಿ ಮಕ್ಕಳಿಗೆ ಹುಟ್ಟಿನಿಂದ 01 ವರ್ಷದೊಳಗೆ 12 ಮಾರಕ ರೋಗಗಳ ವಿರುದ್ಧದ ನೀಡುವ ಎಲ್ಲಾ ಲಸಿಕೆಗಳನ್ನು ತಪ್ಪದೆ ಹಾಕಿಸಬೇಕು. ಇದರಿಂದ ರೋಗ ನಿರೋಧಕ ಶಕ್ತಿ ದೊರಕುತ್ತದೆ ಎಂದು ಹೇಳಿದರು.

ಮಾರ್ಬಿಲೀ ವೈರಸ್ ಪ್ರಬೇಧದ ರುಬೆಲ್ಲಾ ವೈರಸ್‌ನಿಂದ ಹರಡುವ ದಡಾರವು ವೈರಾಣುವಿನಿಂದ ಉಂಟಾಗುವ ಒಂದು ಸೋಂಕು ರೋಗವಾಗಿದ್ದು, ಸಾಮಾನ್ಯವಾಗಿ ಇದು ಮಕ್ಕಳಲ್ಲಿ ಕಾಣಿಸಿಕೊಳ್ಳುತ್ತಿದೆಯಾದರೂ ಹದಿಹರೆಯದವರು ಮತ್ತು ಪ್ರೌಢರನ್ನು ಕೂಡ ಬಾಧಿಸುತ್ತದೆ. ಈ ಹಿನ್ನಲೆಯಲ್ಲಿ ಮಗುವಿನ ವಯಸ್ಸು ದಡಾರ ಲಸಿಕೆಯ ಮೊದಲು ಡೋಸನ್ನು 9–12 ತಿಂಗಳು ವಯಸ್ಸಿನಲ್ಲಿ ಮತ್ತು ಎರಡನೇ ಡೋಸನ್ನು 16–24 ತಿಂಗಳು ವಯಸ್ಸಿನಲ್ಲಿ ಹಾಕಿಸುವ ಮೂಲಕ ದಡಾರ ರೋಗವನ್ನು ನಿಯಂತ್ರಿಸಲು ಕೈ ಜೋಡಿಸಬೇಕೆಂದು ವಿನಂತಿಸಿದರು.

ಈ ವೇಳೆ ಸಿದ್ದಮ್ಮನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ದಿವ್ಯಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಡಿಎನ್‌ಓ ಗಿರೀಶ್, ಐಸಿಡಿಎಸ್ ಮೇಲ್ವಿಚಾರಕಿ ಕಲ್ಯಾಣಮ್ಮ, ಗ್ರಾಪಂ ಕಾರ್ಯದರ್ಶಿ ಪ್ರಭಾಕರ ರೆಡ್ಡಿ, ಗ್ರಾಮ ಆಡಳಿತಾಧಿಕಾರಿ ಮಂಜುನಾಥ, ಸಮುದಾಯ ಅರೋಗ್ಯ ಅಧಿಕಾರಿ ರ್ರಿಸ್ವಾಮಿ, ಅಂಗನವಾಡಿ ಕಾರ್ಯಕರ್ತೆ ರಾಧಾ, ಆಶಾ ಕಾರ್ಯಕರ್ತೆ ಹೆಚ್.ಕವಿತಾ, ಆರೊಗ್ಯ ಮೇಲ್ವಿಚಾರಣಾಧಿಕಾರಿ ವಿರುಪಾಕ್ಷಿ ಸೇರಿದಂತೆ ತಾಯಂದಿರು, ಸಿಬ್ಬಂದಿಯವರು, ಆಶಾ ಕಾರ್ಯಕರ್ತೆಯರು ಹಾಜರಿದ್ದರು.

## ವಿದ್ಯಾರ್ಥಿನಿಯರು ತಮ್ಮ ಭಾವಿ ಜೀವನ ಆನಂದನವನ್ನಾಗಿ ಮಾಡಿಕೊಳ್ಳಲು ಶಿಕ್ಷಣ ದಾರಿದೀಪ

ಯಾದಗಿರಿ : ಮೇ 20 : 2024–25ನೇ ಶೈಕ್ಷಣಿಕ ಸಾಲಿನ ಸಾಂಸ್ಕೃತಿಕ ಕ್ರೀಡಾ ಮತ್ತು ರಾ.ಸೇ.ಯೋ, ಹಾಗೂ ವಿವಿಧ ಘಟಕಗಳ ಕಾರ್ಯ ಚಟುವಟಿಕೆಗಳ ಸಮಾರೋಪ ಸಮಾರಂಭ ಬೀಳ್ಕೊಡುಗೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ಇತ್ತೀಚಿನ ನಡೆದ ಶೈಕ್ಷಣಿಕ ಸಾಲಿನ ಬೀಳ್ಕೊಡುಗೆ ಸಮಾರಂಭದಲ್ಲಿ ಕರ್ನಾಟಕ ಸರ್ಕಾರ ಅಕ್ಕ ಮಹಾದೇವಿ ವಿಶ್ವವಿದ್ಯಾಲಯದ ಕುಲಪತಿಗಳಾದ ಶ್ರೀಮತಿ ಶಾಂತಾದೇವಿ.ಟಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಇಂದಿನ ಯುವತಿಯರು ಸರಿಯಾದ ಮನೋಭಾವ, ಸರಿಯಾದ ಅವಕಾಶಗಳ ಉಪಯೋಗ, ಹಾಗೂ ಪರಿಶ್ರಮ, ಶ್ರದ್ದೆ, ತಾಳ್ಮೆ, ಜಾಣ್ಮೆ ವಹಿಸಬೇಕೆಂದು ಯುವತಿಯರಿಗೆ ಸಲಹೆ ನೀಡಿದರು. ಸಂಕೋಚದಿಂದ ವಿದ್ಯಾರ್ಥಿನಿಯರು ಹೊರಬಂದು ಕಲಿಕೆಯನ್ನು ಪೂರ್ಣಗೊಳಿಸಿ ವಿದ್ಯಾವಂತ ಜೀವನ ನಡೆಸಬೇಕು ಹಾಗೂ ತನ್ನ ಅರಿವೇ ತನ್ನ ಗುರು ಎಂಬ ಮನೋಭಾವನೆಯನ್ನು ಬೆಳೆಸಿಕೊಳ್ಳಲು ಕರೆ ನೀಡಿದರು.

ಗ್ರಾಮೀಣ ವಿದ್ಯಾರ್ಥಿನಿಯರು ಮನಸ್ಸು ಮಾಡಿದರೆ ಅಸಾಧ್ಯವಾದದ್ದು ಸಾಧಿಸುವ ಕಲೆ ಅವರಲ್ಲಿರುತ್ತದೆ. ಎಲ್ಲಿ ವಿದ್ಯಾರ್ಥಿನಿಯರು ಮೂಡ ನಂಬಿಕೆ ಮತ್ತು ಸಮಾಜದ ಕಟ್ಟಳೆಗಳನ್ನು ಬದಿಗಿಟ್ಟು ಅಧ್ಯಯನ ಮಾಡಿ ಜೀವನದಲ್ಲಿ ಯಶಸ್ವಿ ಹೊಂದಬೇಕೆಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಡಾ.ಹರೀಶ ರಾಥೋಡರವರು ವಿದ್ಯಾರ್ಥಿನಿಯರು ಹುಟ್ಟಿದ ಮನೆಗೆ ಕಾಲೇಜಿಗೆ ಹಾಗೂ ಊರಿಗೆ ಕೀರ್ತಿ ತರಬೇಕೆಂದು ತಿಳಿಸಿದರು. ಹಾಗೆಯೆ ವಿದ್ಯಾರ್ಥಿನಿಯರು ತಮ್ಮ ಭಾವಿ ಜೀವನ ಆನಂದನವನ್ನಾಗಿ ಮಾಡಿಕೊಳ್ಳಲು ಶಿಕ್ಷಣ ದಾರಿದೀಪವಾಗಿದೆ. ಹೆಣ್ಣೊಂದು ಕಲಿತರೆ ಸಮಾಜದಲ್ಲಿರುವ ಅನಿಷ್ಟ & ಮೂಡನಂಭಿಕೆಗಳು ಹೋಗಲಾಡಿಸಿದಂತೆ ಎಂದು ವಿದ್ಯಾರ್ಥಿನಿಯರಿಗೆ ಕಿವಿಮಾತು ಹೇಳಿದರು. ಕಾರ್ಯಕ್ರಮದಲ್ಲಿ ವಿದ್ಯಾಸಾಗರ.ಬಿ.ಹೂಗಾರ ಸ್ವಾಗತಿಸಿದರು, ಡಾ.ಅನುಸೂಯಾ ಪಾಟೀಲ್ ನಿರೂಪಿಸಿದರು, ಡಾ.ಉದಯಕುಮಾರ ದೊಡ್ಮನಿ ವಂದಿಸಿದರು. ಈ ಸಂದರ್ಭದಲ್ಲಿ ಉಪನ್ಯಾಸಕರಾದ ಡಾ.ಖಲೀಲ್ ಮಸೂದ್, ರಾಘವೇಂದ್ರಭೀಮನಹಳ್ಳಿ ಗುಲಾಬ್ ಸಿಂಗ್, ಶಿವಗಂಗಾ, ವಿಜಯಲಕ್ಷ್ಮೀ ಉಪಸ್ಥಿತರಿದ್ದರು.

# ಕಡ್ಡಾಯವಾಗಿ ರಶೀದಿ ಪಡೆಯಿರಿ:ರಾಜಕುಮಾರ



ಮಲ್ಲಮ್ಮ ನುಡಿ ವಾರ್ತೆ

ಸೈದಾಪುರ:ಮೇ.20:ಗುಣಮಟ್ಟದ ಹತ್ತಿಬೀಜಗಳನ್ನು ಬಿತ್ತನೆಗೆ ಬಳಸಿ ಅಧಿಕೃತ ಮಾರಾಟಗಾರರಿಂದ ಮಾತ್ರ ಬೀಜಗಳನ್ನು ಖರೀದಿಸಿ ಕಡ್ಡಾಯವಾಗಿ ರಶೀದಿಯನ್ನು ಪಡೆಯಿರಿ ಎಂದು ಯಾದಗಿರಿ ಜಂಟಿಕೃಷಿನಿರ್ದೇಶಕರಕಛೇರಿಯ ವಿಷಯ ತಜ್ಞ, ಸಹಾಯಕ ಕೃಷಿ ನಿರ್ದೇಶಕರಾದ ರಾಜಕುಮಾರ ರೈತರಿಗೆ ಸಲಹೆ ನೀಡಿದರು.

ಸಮೀಪದ ಕೊಂಕಲ್ ಹೋಬಳಿಯ ತೆಲಂಗಾಣ ಗಡಿ ಭಾಗದ ನಸಲವಾಯಿ ಮತ್ತು ಗುಂಜುನೂರು ಗ್ರಾಮಗಳಲ್ಲಿ ಉತ್ತಮ ಗುಣಮಟ್ಟದ ಹತ್ತಿ ಬಿತ್ತನೆ ಬೀಜಗಳ ಆಯ್ಕೆ ಮತ್ತು ಹತ್ತಿಬೀಜಗಳನ್ನು ಖರೀದಿಸುವಾಗ ವಹಿಸಬೇಕಾದ ಮುಂಜಾಗ್ರತೆ ಕ್ರಮಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಅನಧಿಕೃತ ವ್ಯಕ್ತಿಗಳು ಬೀಜ ಮಾರಾಟ ಮಾಡಿದರೆ ಇಲಾಖೆಯ ಅಧಿಕಾರಿಗಳಿಗೆ ಮಾಹಿತಿ ಒದಗಿಸಿ. ಭತ್ತ ಕಟಾವು ನಂತರ ಭತ್ತದ ಹುಲ್ಲನ್ನು ಸುಡಬೇಡಿ ಮಣ್ಣಿನ ಫಲವತ್ತೆಯನ್ನು ಕಾಪಾಡಿ ಎಂದು ಹೇಳಿದರು. ಕೊಂಕಲ್ ರೈತರ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಮಹಿಪಾಲರೆಡ್ಡಿ, ಗುಂಜುನೂರು ಗ್ರಾಮಪಂಚಾಯಿತಿ ಸದಸ್ಯ ಸಂತೋಷ್, ಗ್ರಾಮಸಹಾಯಕರಾದ ಗುಂಜಲಪ್ಪ, ಗೌರಿಶ, ರೈತರಾದ ಶ್ರೀಕಾಂತ, ಬಸಪ್ಪ, ರಾಜು ರೆಡ್ಡಿ ಇತರರಿದ್ದರು.

# ಬೀದರ ವಿಶ್ವವಿದ್ಯಾಲಯದಲ್ಲಿ ಸಂಗೀತ ವಿಭಾಗ
## ಪ್ರಾರಂಭಿಸಲಾಗುವುದು ಕುಲಪತಿ ಡಾ॥ ಬಿ.ಎಸ್. ಬಿರಾದಾರ



ಮಲ್ಲಮ್ಮ ನುಡಿ ವಾರ್ತೆ

ಬೀದರ :ಜಿಲ್ಲೆಯ ಶೈಕ್ಷಣಿಕ ವರದಾನವಾಗಿರುವ ಬೀದರ ವಿಶ್ವವಿದ್ಯಾಲಯದಲ್ಲಿ ಶೀಘ್ರದಲ್ಲಿ ನೂತನ ಸಂಗೀತ ವಿಭಾಗ ತೆರೆಯಲಾಗುವುದೆಂದು ಬೀದರ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ.ಎಸ್. ಬಿರಾದಾರ ಭರವಸೆ ನೀಡಿದರು. ಅವರು ಗೋರಟಾದ ಶ್ರೀ ಸಂಗೀತ ರುದ್ರೇಶ್ವರದೇವಾಲಯದಲ್ಲಿನಡೆದ ಶ್ರೀ ಸಂಗೀತ ರುದ್ರೇಶ್ವರ 3ನೇ ಜಾತ್ರಾ, ಪೂಜ್ಯರಾದ ವೀರಮ್ಮ ವಿರೂಪಾಕ್ಷಯ್ಯನವರ 13ನೇ ಪುಣ್ಯಸರಣೋತ್ಸವ, ಕಲ್ಯಾಣ ಕರ್ನಾಟಕ ಪ್ರಾಂತೀಯ 6ನೇ ಸಂಗೀತ ಮಹೋತ್ಸವ ಮತ್ತು ಪಂ. ವಿರೂಪಾಕ್ಷ ಸಮ್ಮಾನ್ ರಾಷ್ಟ್ರೀಯ ಪ್ರಶಸ್ತಿ ಸಮಾರಂಭದಲ್ಲಿ ಶ್ರೀ ಡಾ॥ ರಾಜಶೇಖರ ಶಿವಾಚಾರ್ಯರು ನಾಂದಿ ನುಡಿಯಲ್ಲಿ ಪ್ರಸ್ತಾಪಿಸಿದ ಬೀದರ ವಿ.ವಿ.ಯಲ್ಲಿ ಸಂಗೀತ ವಿಭಾಗ ತೆರೆಯಬೇಕೆಂಬ ಬೇಡಿಕೆಯನ್ನು ಮನ್ನಿಸಿ ಮೇಲಿನಂತೆ ನುಡಿದರು.

ಗೋರಟಾ ಚರಿತ್ರೆ ಬಹಳ ದೊಡ್ಡದು. ಇದು ಕಲೆ, ಸಾಹಿತ್ಯ, ಸಂಗೀತ ಬೀಡು, ಇಂದಿನ ವಿಶ್ವವಿದ್ಯಾಲಯ ಮಾದರಿಯಲ್ಲಿ ಘಟಿಕಾ ಸ್ಥಾನ ಹೊಂದಿದ್ದ ಕೇಂದ್ರ. ರಾಜಪೂಜಿತ ರುದ್ರೇಶ್ವರ ದೇವರ ಪ್ರತೀಕವಾಗಿ ಇಂದು ಪೂಜ್ಯ ಪಂ. ವಿರೂಪಾಕ್ಷ ಸ್ವಾಮಿಗಳ ಸತ್ ಸಂಕಲ್ಪದಂತೆ ಶ್ರೀ ಸಂಗೀತ ರುದ್ರೇಶ್ವರ ವಿರಾಜ ಮಾನವಾಗಿರುವುದು ನಮ್ಮೆಲ್ಲರ ಸೌಭಾಗ್ಯ ದೇಶಕ್ಕೆ ಸಂಗೀತ ಶ್ರೀ ರುದ್ರ ಬೆಳಕನ್ನಿತ್ತ ಪೂಜ್ಯ ವಿರೂಪಾಕ್ಷಯ್ಯನವರ ಸಂಸ್ಮರಣಾರ್ಥ ಪಂ. ವಿರೂಪಾಕ್ಷ ಸಮ್ಮಾನ್ ರಾಷ್ಟ್ರೀಯ ಪ್ರಶಸ್ತಿಗೆ ಭಾಜನವಾಗಿರುವುದು ನನ್ನ ಭಾಗ್ಯ ನನ್ನ ಉತ್ಸಾಹ ನೂರ್ಮಡಿಯಾಗಿದೆ. ನನ್ನ ಒಂದು ವರ್ಷದ ಅವಧಿ ಮುಗಿಯುವುದರೊಳಗಾಗಿ ವಿಶ್ವವಿದ್ಯಾಲಯದಲ್ಲಿ ಸಂಗೀತ ವಿಭಾಗ ಖಂಡಿತವಾಗಿ ತೆರೆಯಲಾಗುವುದು. ಶ್ರೀಶೈಲದ ಪೂಜ್ಯಶ್ರೀ ಕರುಣಾದೇವಿ ಮಾತಾ ಹಾಗೂ ಗೋರಟಾ ಪೂಜ್ಯ ಗುರುಗಳಿಂದ ಉದ್ಘಾಟಿಸಲಾಗುವುದು ಎಂದು ಹೇಳಿದರಲ್ಲೇ ಸಂಗೀತಜ್ಞ ಡಾ॥ ಸಿದ್ಧರಾಮಯ್ಯ ಸ್ವಾಮಿ ಗೋರಟಾ ಆದಿಯಾಗಿ ಜಿಲ್ಲೆಯ ನುರಿತ ಕಲಾವಿದರ ಸೇವೆಯನ್ನು ಬಳಸಿಕೊಳ್ಳಲಾಗುವುದು ಎಂದು ಡಾ॥ ಬಿ.ಎಸ್. ಬಿರಾದಾರ ಹೇಳಿದರು.

ಅಭಿನಂದನಾ ನುಡಿ ಸೇವೆಯನ್ನು ಮಾಡಿದ ಬೀದರ ವಿಶ್ವವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥರಾದ ಡಾ॥ ರಾಮಚಂದ್ರ ಗಣಾಪುರ ಮಾತನಾಡಿ ಗೋರಟಾ ಇತಿಹಾಸ ಪುಟಗಳಲ್ಲಿ ಚಿರಸ್ಥಾಯಿಯಾಗಿ ಹೆಸರು ಪಡೆದಿದೆ. ನಾಡಿನ ಕಲೆ, ಸಾಹಿತ್ಯ, ಸಂಗೀತಕ್ಕೆ ಅಪೂರ್ವ ಕೊಡುಗೆ ನೀಡಿದೆ. ಅಷ್ಟೇ ಅಲ್ಲ ಕಲ್ಯಾಣ ಕರ್ನಾಟಕ ವಿಮೋಚನಾ ಚಳುವಳಿಗೆ ತಾಯಿ ನೆಲವಾಗಿ ಸ್ವಾತಂತ್ರ ಹೋರಾಟಗಾರರ ಹುತಾತ್ಮರ ವೀರಭೂಮಿಯಾಗಿಯೂ ಪ್ರಸಿದ್ಧ ಪಡೆದಿದೆ. ಇದರ ಚರಿತ್ರೆ ಎಂದರೆ ಕಲ್ಯಾಣ ಕರ್ನಾಟಕ ಭಾಗದ ಚರಿತ್ರೆ ಎನ್ನುವಷ್ಟರ ಮಟ್ಟಿಗೆ ಸುವಿಖ್ಯಾತವಾಗಿದೆ. ಸಂಗೀತ ರುದ್ರಪಿತಾಮಹ ಪೂಜ್ಯ ವಿರೂಪಾಕ್ಷಯ್ಯ ಸ್ವಾಮಿಗಳವರು ಜಿಲ್ಲೆಯ ಸಂಗೀತದ ಅದ್ವೈರ್ಯರು, ಜಿಲ್ಲೆಯ ಮೊದಲ ಸಂಗೀತ ಸ್ನಾತುಕೋತ್ತರ ಪದವಿಧರರು. ಅವರ ಜೀವನ ಚರಿತ್ರೆ ಎಂದರೆ ಜಿಲ್ಲೆಯ ಚರಿತ್ರೆಯ ಭಾಗವಾಗಿ ಅವರ ಜೀವನ ಸಂದೇಶ ನಾಡಿಗೆ ಅಮರ ಸಂದೇಶವಾಗಿದೆ. ಅವರು ಬರೆದ ಭುಲಾಯಿಪದ ಬೀದರ ಜಿಲ್ಲೆಯ ಪ್ರಥಮ ಕೃತಿಯಾಗಿದೆ. ಇಂದು ಪಂ. ವಿರೂಪಾಕ್ಷಯ್ಯ ಸ್ವಾಮಿಗಳು ತಮ್ಮ ಸಂಗೀತ ಶ್ರೀ ರುದ್ರದ ಮುಖಾಂತರ ಜನ್ಮಭೂಮಿಗೂ ನಾಡಿಗೂ ಬಹುದೊಡ್ಡ ಕೀರ್ತಿಯನ್ನು ತಂದಿರುವ ಕೀರ್ತಿ ಪುರುಷರಾಗಿದ್ದು ಅವರ ಅಪೂರ್ವ ಕೊಡುಗೆ ನಾಡವರಿಗೆ ತಿಳಿಸುವ ಪ್ರಯತ್ನ ಇನ್ನೂ ಹೆಚ್ಚು ಹೆಚ್ಚಾಗಿ ಈ ಸಂಗೀತ ರುದ್ರೇಶ್ವರ ಮಹಾ ಸಂಸ್ಥಾನದಿಂದ ನಡೆಯಲೆಂದು ಆಶಿಸುತ್ತೇನೆಂದು ಅವರು ಹೇಳಿದರು.

ಇನ್ನೊವರ ಪ್ರಶಸ್ತಿ ಪುರಸ್ಕೃತ ನಾಡಿನ ಖ್ಯಾತ ಹಿರಿಯ ಗಾಯಕರಾದ ಬೀದರಿನ ಪಂ. ರಾಮುಲು ಗಾದಗಿ ಮಾತನಾಡಿ ಸಂಗೀತ ರುದ್ರ ಸಾರ್ವಭೌಮ ಪೂಜ್ಯ ಪಂ. ವಿರೂಪಾಕ್ಷ ಸ್ವಾಮಿಗಳು ದೇಶಕಂಡ ಶ್ರೇಷ್ಠ ಸಂಗೀತಗಾರರು. ಅವರು ಸಂಗೀತಗಾರರಿಗೆ ಮಾದರಿ ಮತ್ತು ಆದರ್ಶರಾಗಿದ್ದರು. ಹೃದಯವಂತ, ಆಚಾರವಂತ ಧೀಮಂತ ಕಲಾವಿದರು. ಗುರುವಿನ ಸದಿಚ್ಛೆಯಂತೆ ಹುಡುಕಿ ಬಂದ ಸರಕಾರಿ ಸಂಗೀತ ಅಧ್ಯಾಪಕ ನೌಕರಿಯನ್ನು ಬದಿಗೊತ್ತಿ. ರುದ್ರಮಂತ್ರಗಳಿಗೆ ಸಂಗೀತ ಸಂಯೋಜಿಸಿ ವಿನೂತನ ರುದ್ರ ಸಂಗೀತಕ್ಕೆ ಜನ್ಮ ನೀಡಿದ ಮಂತ್ರನಾದಯೋಗಿ. ನನ್ನ ಸಂಗೀತ ಜೀವನದಲ್ಲಿ ಅನೇಕ ಪ್ರಶಸ್ತಿಗಳು ಬಂದಿವೆ ಈ ಎಲ್ಲ ಪ್ರಶಸ್ತಿಗಳಿಗೆ ಇದು ಮುಕುಟ ಪ್ರಾಯ ನನ್ನಲ್ಲಿ ಧನ್ಯತಾಭಾವ ಒಡಮೂಡಿದೆ. ಬದುಕು ಸಾರ್ಥಕವಾಗಿದೆ. ಸಂಗೀತ ಕೃಪೆ ಎಲ್ಲ ಕಲಾವಿದರ ಮೇಲಿರಲಿ ಎಂದು ಅವರು ಪ್ರಾರ್ಥಿಸಿದರು.

ಮುಖ್ಯ ಅತಿಥಿಗಳಾಗಿ ರಾಜ್ಯ ದಿಶಾ ಸಮಿತಿಯ ಸದಸ್ಯರಾದ ಶಿವಯ್ಯ ಸ್ವಾಮಿ ಮಾತನಾಡಿ ಗೋರಟಾ ಸಂಗೀತ ರುದ್ರೇಶ್ವರ ಮಹಾಸಂಸ್ಥಾನ ಇತಿಹಾಸ ಮತ್ತು ವರ್ತಮಾನದ ಸಂಗಮವಾಗಿದೆ. ನಾಡಿನ ಸಂಗೀತ ಕನ್ನಡ ಸಂಸ್ಕೃತಿಗೆ ಅಪಾರ ಕೊಡಿಗೆಯನ್ನು ನೀಡುತ್ತಿದ್ದು ರಾಜ್ಯ ಸರ್ಕಾರ ಇಂತಹ ಸಂಸ್ಥೆಗಳಿಗೆ ಬೆನ್ನೆಲುಬಾಗಿ ನಿಲ್ಲಬೇಕೆಂದು ಅಭಿಪ್ರಾಯ ವ್ಯಕ್ತಪಡೆದಿದರು.

ಮಹಾಸಂಸ್ಥಾನದ ಉಪಾಧ್ಯಕ್ಷರಾದ ಪ್ರಸಿದ್ದ ಸಂಗೀತಗಾರರು ವಾಗ್ಗೇಯ ಕಾರರಾದ ಡಾ॥ ಸಿದ್ಧರಾಮಯ್ಯ ಸ್ವಾಮಿ ರುದ್ರಮಠರು ಎಲ್ಲರನ್ನೂ ಸ್ವಾಗತ ಕೋರಿ, ಗೋರಟಾ, ಚರಿತ್ರೆ ಸಂಗೀತ ರುದ್ರಪರಂಪರೆ, ಸಂಗೀತ ಕೊಡುಗೆಗಳ ಕುರಿತು ಸಾಧಾರವಾಗಿ ವಿವರಿಸಿದರು. ಸಮಾರಂಭದ ದಿವ್ಯಸಾನಿಧ್ಯವನ್ನು ವಹಿಸಿ ಎಲ್ಲರ ಆಗ್ರಹದಂತೆ ಪೂಜ್ಯ ಕರುಣಾದೇವಿ ಮಾತಾ ಶ್ರೀಶೈಲ ಅವರು ಗೀತ ಗಾಯನ ಮಾಡಿ ಆಶೀರ್ವದಿಸಿದರು. ಸಂಸ್ಥೆಯ ಅಧಿಪತಿಗಳಾದ ಪೂಜ್ಯಶ್ರೀ ಡಾ॥ ರಾಜಶೇಖರ ಶಿವಾಚಾರ್ಯರು ನೇತೃತ್ವವಹಿಸಿ ನಾಂದಿನುಡಿ ಹೇಳಿದರು, ಉದಗೀರದ ಖ್ಯಾತ ಉದ್ಯಮಿ ದಿಗಂಬರ ಬಿರಾದಾರ, ಭೂದಾನಿ ಕಮಳಾಬಾಯಿ ಅಕ್ಕಣ್ಣ, ನಾಗರಾಜ ಸ್ವಾಮಿ ಸೇಡಂ, ನಾಗಶೆಟ್ಟಿ ಪಾಟೀಲ ಕರಬಸಪ್ಪ ಅಕ್ಕಣ್ಣ ಮುಂತಾದವರು ಇದ್ದರು.

ಬಸವರಾಜ ಹಾಲಹಳ್ಳಿ ನಿರೂಪಿಸಿದರು, ಕಂಟೆಪ್ಪ ಭಂಗೂರೆ ವಂದಿಸಿದರು.

# ಚುನಾಯಿತ ಸದಸ್ಯರ ಗೌರವಧನ ಹೆಚ್ಚಳಕ್ಕೆ ಮನವಿ
## ಅನುದಾನ ಬಳಕೆಯ ವಾರ್ಷಿಕ ಲೆಕ್ಕಪತ್ರ ಕಡ್ಡಾಯ-ನಾರಾಯಣಸ್ವಾಮಿ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.20-ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳಿಗೆ ವಿನಿಯೋಗಿಸಿದ ಅನುದಾನದ ಖರ್ಚು ವೆಚ್ಚಗಳಿಗೆ ವಾರ್ಷಿಕ ಲೆಕ್ಕಪತ್ರ ಇಡುವುದು ಕಡ್ಡಾಯವಾಗಿದೆ ಎಂದು 5ನೇ ರಾಜ್ಯ ಹಣಕಾಸು ಆಯೋಗದ ಅಧ್ಯಕ್ಷ ಡಾ.ಸಿ.ನಾರಾಯಣಸ್ವಾಮಿ ಹೇಳಿದರು.

ನಗರಸಭೆ ನೂತನ ಸಭಾಭವನದಲ್ಲಿ ಮಂಗಳವಾರ ಜರುಗಿದ ನಗರಸಭೆಯ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳೊಂದಿಗಿನ ಸಮಾಲೋಚನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನಗರ ಸ್ಥಳೀಯ ಸಂಸ್ಥೆಗಳಿಗೆ ವಿವಿಧ ಅನುದಾನದ ಹಂಚಿಕೆ ಮಾಡಲಾಗಿದ್ದು, ಈ ಅನುದಾನದ ಬಳಕೆ, ಸಮಸ್ಯೆಗಳಿಗೆ ಸಲಹೆಗಳನ್ನು ಪಡೆದು ಸರ್ಕಾರಕ್ಕೆ ಶಿಫಾರಸ್ಸು ಮಾಡುವ ನಿಟ್ಟಿನಲ್ಲಿ ಆಯೋಗದ ವತಿಯಿಂದ ವಿಭಾಗವಾರು ಸಭೆಗಳನ್ನು ನಡೆಸಲಾಗುತ್ತಿದೆ ಎಂದು ತಿಳಿಸಿದರು.

ನಗರ ಸ್ಥಳೀಯ ಸಂಸ್ಥೆಗಳಾದ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯತಿಗಳ ಆರ್ಥಿಕ ಸ್ಥಿತಿಗತಿ, ಅದರ ಕಾರ್ಯಚಟುವಟಿಕೆಗಳ ಸಂಪನ್ಮೂಲಗಳ ಕ್ರೋಢೀಕರಣ, ಹಂಚಿಕೆ ಮತ್ತು ಮೂಲಸೌಕರ್ಯ, ಸೇವೆ ಒದಗಿಸುವಲ್ಲಿ ತಾಂತ್ರಿಕ ಕೌಶಲ್ಯದ ಸಾಮರ್ಥ್ಯ ಸೇರಿದಂತೆ ವಿವಿಧ ವಿಷಯಗಳ ಕುರಿತು ಆಯೋಗ ಪರಿಶೀಲನೆ ನಡೆಸುವುದರೊಂದಿಗೆ ರಾಜ್ಯದಿಂದ ಕೇಂದ್ರಕ್ಕೆ ಸಲ್ಲಿಸಬೇಕಾದ ವರದಿಗೆ ಅನುಗುಣವಾಗಿ ಆಡಳಿತ ವ್ಯವಸ್ಥೆ ಜಾರಿಗೆ ತರುವ ನಿಟ್ಟಿನಲ್ಲಿ ಸಲಹೆ ಸೂಚನೆಗಳನ್ನು ಪಡೆಯುತ್ತಿದೆ. ಈ ನಿಟ್ಟಿನಲ್ಲಿ 16ನೇ ಹಣಕಾಸು ಆಯೋಗವು ರಾಜ್ಯಕ್ಕೆ ಭೇಟಿ ನೀಡಿದೆ. ರಾಜ್ಯಕ್ಕೆ ಅನುದಾನದ ಕೊರತೆ ಇದ್ದಲ್ಲಿ ವರದಿಯಲ್ಲಿ ನೀಡುವ ಅಗತ್ಯತೆ ಇದೆ ಎಂದು ನಾರಾಯಣಸ್ವಾಮಿ ಹೇಳಿದರು.

ನಗರಸಭೆಯ 15 ಕಾರ್ಯಕ್ರಮಗಳು ಹಾಗೂ ಗ್ರಾಮ ಪಂಚಾಯತ ಮಟ್ಟದಲ್ಲಿ 29 ಕಾರ್ಯಕ್ರಮಗಳು ಬರುತ್ತವೆ. ಯಾವ ಉದ್ದೇಶಕ್ಕೆ ಅನುದಾನ ಬಿಡುಗಡೆಯಾಗಿರುತ್ತದೆ ಅದೇ ಉದ್ದೇಶಕ್ಕೆ ವಿನಿಯೋಗಿಸುವ ಮೂಲಕ ಅನುದಾನದ ಸದ್ಬಳಕೆ ಮಾಡಿಕೊಂಡು ಪ್ರತಿಯೊಂದು ಕಾರ್ಯಕ್ರಮ ಅನುಷ್ಠಾನಗೊಳಿಸಿದ್ದಕ್ಕೆ ಲೆಕ್ಕಪತ್ರ ಇಡುವುದು ಕಡ್ಡಾಯವಾಗಿದೆ. ಬಿಡುಗಡೆಯಾದ ಅನುದಾನಕ್ಕೆ ಲೆಕ್ಕಪರಿಶೋಧನೆಗೆ ಒಳಪಡಿಸದೇ ಕೇಂದ್ರಕ್ಕೆ ವರದಿ ನೀಡಿದಲ್ಲಿ ಮುಂದಿನ ಅನುದಾನ ತಡೆಹಿಡಿಯುವ ಸಾಧ್ಯತೆ ಇರುತ್ತದೆ. ಆದ್ದರಿಂದ ಪ್ರತಿಯೊಂದು ಅನುದಾನ ಬಳಕೆಗೆ ಲೆಕ್ಕಪತ್ರ ಇಡುವುದು ಕಡ್ಡಾಯವಾಗಿರುತ್ತದೆ ಎಂದರು.

ನಗರಸಭೆ ಪೌರಾಯುಕ್ತ ವಾಸಣ್ಣ ಆರ್, ನಗರಸಭೆ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಮಾಹಿತಿ, ರಾಜಸ್ವ ಕ್ರೋಡಿಕರಣ, ಕರ ವಸೂಲಿ ಮತ್ತು ಬಾಕಿ ವಿವರ, ಆಯವ್ಯಯ ಖರ್ಚು ವೆಚ್ಚ, ರಾಜ್ಯ ಹಣಕಾಸು ಆಯೋಗದಿಂದ ಬಿಡುಗಡೆಯಾದ ವೇತನಾನುದಾನ, ವಿದ್ಯುತ್ ಅನುದಾನ, ತೆರಿಗೆ ವಸೂಲಾತಿಗೆ ಕೈಗೊಂಡ ಕ್ರಮ, ತೆರಿಗೆ ಪರಿಷ್ಕರಣೆ ಸೇರಿದಂತೆ ಇತರೆ ಎಲ್ಲ ಮಾಹಿತಿಯನ್ನು ಸಮಾಲೋಚನಾ ಸಭೆಗೆ ವಿವರಿಸಿದರು. ನಂತರ ಆಯೋಗದ ಅಧ್ಯಕ್ಷರು ಚುನಾಯಿತ ಪ್ರತಿನಿಧಿಗಳೊಂದಿಗೆ ಸಮಾಲೋಚನೆ ನಡೆಸಿ ಸಿಬ್ಬಂದಿಗಳ ಕೊರತೆ, ಕುಡಿಯುವ ನೀರು, ಮೂಲಭೂತ ಸೌಲಭ್ಯಗಳ ಕೊರತೆ, ಹೆಚ್ಚಿನ ಅನುದಾನ ಬಿಡುಗಡೆ, ನಿಗದಿತ ಅವಧಿಯಲ್ಲಿ ಅನುದಾನ ಬಿಡುಗಡೆ, ನಗರಸಭೆಯನ್ನು ಮೇಲ್ದರ್ಜೆಗೆ ಏರಿಸುವುದು ಹಾಗೂ ಚುನಾಯಿತ ಸದಸ್ಯರ ಗೌರವಧನ ಹೆಚ್ಚಳ ಕುರಿತಂತೆ ಸದಸ್ಯರ ಬೇಡಿಕೆಗಳನ್ನು ತಿಳಿದುಕೊಂಡರು. ಈ ಬಗ್ಗೆ ವರದಿಯ ಮೂಲಕ ಸರಕಾರದ ಗಮನಕ್ಕೆ ತರುವ ಕೆಲಸ ಮಾಡುವುದಾಗಿ ಅವರು ತಿಳಿಸಿದರು.

ಸಭೆಯಲ್ಲಿ 5ನೇ ರಾಜ್ಯ ಹಣಕಾಸು ಆಯೋಗದ ಸದಸ್ಯರಾದ ಮಹ್ಮದ ಸನಾವುಲ್ಲಾ, ಆರ್. ಎಸ್.ಪೋಡೆ, ಆಯೋಗದ ಸಮಾಲೋಚಕರಾದ ಎಂ.ಕೆ. ಕೆಂಪೇಗೌಡ, ಸಿ.ಜಿ.ಸುಪ್ರಸನ್ನ, ಅದ್ಯಕ್ಷರ ಆಪ್ತ ಕಾರ್ಯದರ್ಶಿ ಕೆ.ಯಾಲಕ್ಕಿಗೌಡ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಸುರಕೋಡ ಸೇರಿದಂತೆ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಮೌಲ್ಯಗಳ ಬೆಳವಣಿಗೆಗೆ ಎನ್‌ಎಸ್‌ಎಸ್.ವೇದಿಕೆಯಾಗಿದೆ: ಡುಗ್ಗಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.20-ಎನ್‌ಎಸ್‌ಎಸ್ ನಾಯಕತ್ವದ ಗುಣ ಹಾಗೂ ಉತ್ತಮ ಮೌಲ್ಯಗಳನ್ನು ಬೆಳೆಸುವಲ್ಲಿ ಸಹಕಾರಿಯಾಗಿದೆ ಎಂದು ಕಿರಸೂರಿನ ಗೌರಿಶಂಕರ ಮಠದ ಗೌರವ ಕಾರ್ಯದರ್ಶಿ ಬಸವರಾಜ ಡುಗ್ಗಿ ಹೇಳಿದರು.

ಬಿವಿವಿ ಸಂಘದ ಬಸವೇಶ್ವರ ವಿಜ್ಞಾನ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಘಟಕ 1 ಮತ್ತು 2ಮತ್ತು ಐಕ್ಯೂಎಸಿ ವತಿಯಿಂದ ಕಿರಸೂರು ಗ್ರಾಮದಲ್ಲಿ ಹಮ್ಮಿಕೊಂಡಿರುವ ರಾಷ್ಟ್ರೀಯ ಸೇವಾ ಯೋಜನೆ ವಾರ್ಷಿಕ ವಿಶೇಷ ಘಟಕದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿ, ಗ್ರಾಮೀಣ ಪರಿಸರದ ಅರಿವು ವಿದ್ಯಾರ್ಥಿಗಳಿಗೆ ಆಗಲಿದ್ದು, ಸೇವಾ ಮನೋಭಾವ ಬೆಳೆಸಿಕೊಳ್ಳಲು ಶಿಬಿರ ಸೂಕ್ತ ವೇದಿಕೆಯಾಗುತ್ತದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಎಸ್.ಆರ್.ಸಬರದ ಮಾತನಾಡಿ, ಜೀವನದ ಅತ್ಯುತ್ತಮ ಭಾಗವಾಗಿ ಏನ್‌ಎಸ್‌ಎಸ್ ಕಾರ್ಯ ನಿರ್ವಹಿಸುತ್ತಿದೆ ಅದನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಸದುಪಯೋಗಪಡೆದುಕೊಳ್ಳಬೇಕೆಂದು ಹೇಳಿದರು.

ಐಕ್ಯೂಎಸಿ ಸಂಯೋಜಕ ಡಾ.ಡಿ.ಎಸ್.ಲಮಾಣಿ, ವಿದ್ಯಾರ್ಥಿ ಕಲ್ಯಾಣಾಧಿಕಾರಿ ಡಾ.ಎಸ್. ಆರ್. ಕಲಾದಗಿ, ಎನ್.ಎಸ್. ಎಸ್. ಕಾರ್ಯಕ್ರಮಾಧಿಕಾರಿ ಡಾ.ಎ.ಎಮ್.ಸತ್ಯನಾಯಕ, ಶಿವಾನಂದ ಶಿವನಗುತ್ತಿ, ಎಸ್. ಕೆ.ಜಹಗೀದಾರ ಇದ್ದರು.

ಶಿವಾನಂದ ಮಡಿವಾಳರ ಪ್ರಾರ್ಥಿಸಿದರು. ಬಸವರಾಜ ಹಳ್ಳಿಕೇರಿ ನಿರೂಪಿಸಿ, ಶಿವಾನಂದ ಶಿವನಗುತ್ತಿ ಸ್ವಾಗತಿಸಿ, ಪರಿಚಯಿಸಿದರು. ಬಸವರಾಜ ಹಳ್ಳಿಕೇರಿ ನಿರೂಪಿಸಿದರು. ಶಿವಾನಂದ ಮಡಿವಾಳರ ವಂದಿಸಿದರು.




ಬಸವಕಲ್ಯಾಣ:-ಹುಲಸೂರು ತಾಲೂಕಿನ ಗೋರ್ಟಾ(ಬಿ) ಗ್ರಾಮದ ರುದ್ರೇಶ್ವರ ದೇವಸ್ಥಾನದಲ್ಲಿ ಸಂಗೀತ ರುದ್ರೇಶ್ವರ ಲಿಂ. ವೀರಮ್ಮ ವಿರೂಪಾಕ್ಷಯ್ಯ ಸ್ವಾಮಿ ಅವರ ಸ್ಮರಣೋತ್ಸವ ಹಾಗೂ ಕಲ್ಯಾಣ ಕರ್ನಾಟಕದ ಪ್ರಾಂತೀಯ ಆರನೆಯ ಸಂಗೀತ ಸಮ್ಮೇಳನದಲ್ಲಿ ಕೊಳಲು ವಾದಕರಾದ ಹಣಮಂತರಾವ ಚಿದ್ರಿ ತಬಲಾ ಸಾತ್ ಖ್ಯಾತ ತಬಲವಾದ ಕರಾದ ಜನಾರ್ಧನ ವಾಘಮೋರೆ ನೀಡಿದರು ಅಕ್ಕಮಹಾದೇವಿ ಚೈತನ್ಯ ಪೀಠ ಶ್ರೀಶೈಲದ ತಪೋ ರತ್ನ ಕರುಣಾ ದೇವಿ ಮಾತೆ ಸಂಗೀತ ರುದ್ರೇಶ್ವರ ಮಹಾ ಸಂಸ್ಥಾನದ ಪೂಜ್ಯಶ್ರೀ ಡಾ. ರಾಜಶೇಖರ ಶಿವಾಚಾರ್ಯರು ಸಂಗೀತ ಕಲಾವಿದ ಸಿದ್ದರಾಮಯ್ಯಾ ಸ್ವಾಮಿ ಗೋರ್ಟಾ ರಾಮುಲು ಗಾದಗಿ. ರಾಜಕುಮಾರ ಹೂಗಾರ ಮದಕಟ್ಟಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು (ಮಲ್ಲಮ್ಮ ನುಡಿ ಚಿತ್ರ)

# ಮೇ 22 ರಂದು ಕಲಬುರಗಿಯಲ್ಲಿ ಲೋಕಾಯುಕ್ತ ಅಧಿಕಾರಿಗಳಿಂದ ಅಹವಾಲು ಸ್ವೀಕಾರ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.20-ಕಲಬುರಗಿ ಕರ್ನಾಟಕ ಲೋಕಾಯುಕ್ತ ಅಧಿಕಾರಿಗಳು ಕಲಬುರಗಿ ತಾಲೂಕಿಗೆ ಸಂಬಂಧಿಸಿದಂತೆ ಇದೇ ಮೇ 22 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಕಲಬುರಗಿ ತಹಶೀಲ್ದಾರರ ಕಚೇರಿಯಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಲಿದ್ದಾರೆ ಎಂದು ಕಲಬುರಗಿಯ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಬಿ.ಕೆ. ಉಮೇಶ ಅವರು ತಿಳಿಸಿದ್ದಾರೆ. ಕಲಬುರಗಿ ಕರ್ನಾಟಕ ಲೋಕಾಯುಕ್ತ ಡಿ.ಎಸ್.ಪಿ. ಯವರಾದ ಗೀತಾ ಟಿ. ಬೇನಹಾಳ (ಮೊಬೈಲ್ ಸಂಖ್ಯೆ 9364062569) ಹಾಗೂ ಕರ್ನಾಟಕ ಲೋಕಾಯುಕ್ತ ಪೊಲೀಸ್ ನಿರೀಕ್ಷಕರಾದ ಅರುಣ ಮುರಗುಂಡಿ (ಮೊಬೈಲ್ ಸಂಖ್ಯೆ 9364062669) ಅವರು ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಲಿದ್ದಾರೆ.

ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಕೆಲಸಗಳನ್ನು ವಿಳಂಬ ಮಾಡುತ್ತಿದ್ದರೆ ಕಾರಣ ಇಲ್ಲದೆ ಅರ್ಜಿ ತಿರಸ್ಕರಿಸುತ್ತಿದ್ದರೆ ಅಥವಾ ಕಚೇರಿಗೆ ಅಲೆದಾಡಿಸುತ್ತಿದ್ದಲ್ಲಿ ಹಾಗೂ ಸರ್ಕಾರಿ ಕಚೇರಿಗಳಲ್ಲಿ ಕೆಲಸ ಮಾಡಿಕೊಡಲು ಯಾರಾದರೂ ಲಂಚ ಕೇಳಿದ್ದಲ್ಲಿ ಕಲಬುರಗಿ ಕರ್ನಾಟಕ ಲೋಕಾಯುಕ್ತರ ಗಮನಕ್ಕೆ ತರಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಪೊಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಐವಾನ್ ಶಾಹಿ, ಕಂಪೌಂಡ್, ಕಲಬುರಗಿ-585102 ಕಚೇರಿಯನ್ನು ಹಾಗೂ ದೂರವಾಣಿ ಸಂಖ್ಯೆ 08472-295364ಗೆ ಸಂಪರ್ಕಿಸಲು ಕೋರಲಾಗಿದೆ.

# ಟ್ರ್ಯಾಕ್ಟರ್ ಪಲ್ಟಿ; ಓರ್ವ ಸಾವು ಇಬ್ಬರಿಗೆ ಗಾಯ

ಮಲ್ಲಮ್ಮ ನುಡಿ ವಾರ್ತೆ

ಚಿಂಚೋಳಿ:ಮೇ.20:ತಾಲ್ಲೂಕಿನ ಕುಂಚಾವರಮ ಹಾಗೂ ಗಂಗನಪಳ್ಳಿ ಮಾರ್ಗ ಮಧ್ಯೆ, ಕಲ್ಲು ಗಣಿಯಿಂದ ಕಲ್ಲನ್ನು ತುಂಬಿಕೊಂಡು ಪೊಲಕಪಳ್ಳಿ ತಾಂಡಾಗೆ ಬರುತ್ತಿದ್ದ ಟ್ರ್ಯಾಕ್ಟರ್ ಪಲ್ಟಿಯಾಗಿದ್ದು ಓರ್ವ ವ್ಯಕ್ತಿ ಸಾವಾಗಿದ್ದು ಇಬ್ಬರು ಗಾಂಯಾಳುಗಳಾಗಿದ್ದಾರೆ. ನಿನ್ನೆ ಸಾಯಂಕಾಲ 7.30 ರ ಸುಮಾರಿಗೆ ಈ ಅವಘಡ ಸಂಭವಿಸಿದ್ದು ಟ್ರ್ಯಾಕ್ಟರ್ ಚಾಲಕ ಸ್ಥಳದಲ್ಲಿಯೇ ಟ್ರ್ಯಾಕ್ಟರ್‌ನ್ನು ಬಿಟ್ಟು ಪರಾರಿಯಾಗಿದ್ದಾನೆ. ಸಾವನ್ನಪ್ಪಿದ ವ್ಯಕ್ತಿಯನ್ನು ಹೂವಿನಹಳ್ಳಿಯ ವಿನೋದಕುಮಾರ (18) ಎಂದು ಗುರುತಿಸಲಾಗಿದ್ದು, ಗಾಯಾಳು




ಗಳನ್ನು ಮತ್ತು ಸಿದ್ದು ತಿಪ್ಪಣ್ಣ, ನಾಗೇಶ ಎಂದು ಗುರುತಿಸಲಾಗಿದೆ.

ಫಿರ್ಯಾದಿ ಹೇಳಿಕೆಯ ಸಾರಾಂಶದ ಮೇಲಿಂದ ಮಿರಿಯಾನ ಪೊಲೀಸ್ ಠಾಣೆ ಗುನ್ನೆ ನಂ. 24/2025, ಕಲಂ: 281, 125 (ಎ), 125 (ಬಿ), 106(1) ಬಿ ಎನ್ ಎಸ್ ಕಾಯ್ದೆ ಮತ್ತು 187 ಐ ಎಮ್ ವಿ ಕಾಯ್ದೆಯ ಅಡಿಯಲ್ಲಿ ಪ್ರಕರಣವನ್ನು ದಾಖಲಿಸಿಕೊಂಡು ತನಿಖೆಯನ್ನು ಕೈಗೊಂಡಿದ್ದಾರೆ ಎಂದು ಸದರಿ ಪೊಲೀಸ್ ಠಾಣೆಯವರು ತಿಳಿಸಿದ್ದಾರೆ.

# ಸರ್ಕಾರಿ ವೀಕ್ಷಣಾಲಯದಿಂದ ಬಾಲಕ ಪರಾರಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.20-ಇಲ್ಲಿನ ಪ್ರಗತಿ ಕಾಲೋನಿಯಲ್ಲಿರುವ ಸರಕಾರಿ ವೀಕ್ಷಣಾಲಯದಿಂದ ಬಾಲಕನೊಬ್ಬ ಪರಾರಿಯಾಗಿದ್ದಾನೆ.

ಕಾನೂನು ಸಂಘರ್ಷಕ್ಕೆ ಒಳಗಾದ (15) ವರ್ಷ ವಯಸ್ಸಿನ ಬಾಲಕ ಮೇ.12 ರಂದು ವೀಕ್ಷಣಾಯಲಕ್ಕೆ ದಾಖಲಾಗಿದ್ದು, 16 ರಂದು ಸಂಜೆ 4.30ಕ್ಕೆ ವೀಕ್ಷಣಾಲಯದಿಂದ ಪರಾರಿಯಾಗಿದ್ದಾನೆ.

ಪರಾರಿಯಾದ ಬಾಲಕನಿಗಾಗಿ




ನಗರದ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ಮುಖ್ಯ ರಸ್ತೆಗಳಲ್ಲಿ ಮತ್ತು ಸರಕಾರಿ ಆಸ್ಪತ್ರೆಯಲ್ಲಿ ಹುಡುಕಾಡಲಾಗಿದ್ದು, ಪತ್ತೆಯಾಗಿಲ್ಲ ಎಂದು ವೀಕ್ಷಣಾಲಯದ ಗೃಹ ಮಾತೆ ಅಂಬ್ಬವ್ವ ಸುಭಾಶ್ಚಂದ್ರ ಮುದ್ದಡಗಿ ಅವರು ಎಂ.ಬಿ.ನಗರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ.

ಮುಂದಿನ ತನಿಖೆ ನಡೆದಿದೆ.

